ಸಂಪುಟ: 05 ಸಂಚಿಕೆ: 08 ಪುಟಗಳು: 08 ಶನಿವಾರ 22 ಮಾರ್ಚ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5
ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಭಾರತೀಯ ಭಾಷೆಗಳಿಗೆ ಪ್ರತ್ಯೇಕ ಇಲಾಖೆ ಸ್ಥಾಪನೆ: ಅಮಿತ್ ಶಾ

• ಉದಯವಾಹಿನಿ, ನವದೆಹಲಿ

ಭಾರತೀಯ ಭಾಷೆಗಳು ಈ ದೇಶದ ಸಂಪತ್ತು. ಹೀಗಾಗಿ ಭಾಷೆಯ ಹೆಸರಿನಲ್ಲಿ ವಿಭಜನೆ ಆಗಬಾರದು. ಹೀಗಾಗಿ ಯಾವುದೇ ಭಾಷೆ ಅಥವಾ ರಾಜ್ಯದ ಜನರ ಮೇಲೆ ಹಿಂದಿ ಹೇರುತ್ತಿಲ್ಲ. ಬದಲಿಗೆ ಭಾಷೆಗಳ ಕುರಿತು ರಾಜಭಾಷಾ ವಿಭಾಗದ ಅಡಿಯಲ್ಲಿ ಹೊಸ ಇಲಾಖೆ ಆರಂಭಿಸಲಾಗುವುದು ಎಂದು ಕೇಂದ್ರ ಸಚಿವ ಅಮಿತ್ ಶಾ ಅವರು ಹೇಳಿದರು. ರಾಜ್ಯಸಭೆಯಲ್ಲಿಂದು ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ವಿವರಿಸಿರುವ ತ್ರಿಭಾಷಾ ಸೂತ್ರದ ಅನುಷ್ಠಾನದ ಕುರಿತು ತೀವ್ರ ಗದ್ದಲದ ನಡುವೆ ಮಾತನಾಡಿದ ಶಾ, ಕೇಂದ್ರ ಸರ್ಕಾರದ ಹಿಂದಿ ಹೇರಿಕೆ ಆರೋಪವನ್ನು ತಳ್ಳಿಹಾಕಿದರು. ಭಾಷೆಯ ಹೆಸರಿನಲ್ಲಿ ರಾಷ್ಟ್ರದಲ್ಲಿ ಸಾಕಷ್ಟು ವಿಭಜನೆಗಳು ನಡೆದಿವೆ. ಇನ್ಮುಂದೆ ಅದು ಸಂಭವಿಸಬಾರದು. ಏಕೆಂದರೆ ಪ್ರತಿಯೊಂದು ಭಾಷೆಯೂ ದೇಶದ ಸಂಪತ್ತು. ಹಿಂದಿ ಸಹ ಯಾವುದೇ ಭಾರತೀಯ ಭಾಷೆಯೊಂದಿಗೆ ಸ್ಪರ್ಧೆ ಮಾಡುತ್ತಿಲ್ಲ. ಅದು ಇತರ ಭಾಷೆಗಳ ಸ್ನೇಹಿತನಿದ್ದಂತೆ ಎಂದು ಹೇಳಿದರು. ಭಾರತೀಯ ಭಾಷೆಗಳು ಈ ದೇಶದ ಸಂಪತ್ತು. ಹೀಗಾಗಿ ಯಾವುದೇ ಭಾಷೆ ಅಥವಾ ರಾಜ್ಯದ ಜನರ ಮೇಲೆ ಹಿಂದಿ ಹೇರುತ್ತಿಲ್ಲ. ಬದಲಿಗೆ ಭಾಷೆಗಳ ಕುರಿತು ರಾಜಭಾಷಾ ವಿಭಾಗದ (ಅಧಿಕೃತ ಭಾಷಾ ಇಲಾಖೆ) ಅಡಿಯಲ್ಲಿ ಹೊಸ ಇಲಾಖೆ ಆರಂಭಿಸಲಾಗುವುದು. ನರೇಂದ್ರ ಮೋದಿ ನೇತೃತ್ವದ ಸರ್ಕಾರವು ಭಾರತದ ಎಲ್ಲಾ ಭಾಷೆಗಳನ್ನು ಉತ್ತೇಜಿಸಿ ಬೆಳೆಸುವ ನಿಟ್ಟಿನಲ್ಲಿ ಭಾರತೀಯ ಭಾಷೆಗಳ ಇಲಾಖೆಯನ್ನು ತೆರೆಯಲಿದೆ. ಭಾಷೆಗಳ ನಡುವೆ ಭಾಷಾಂತರಕ್ಕೆ ಮೊಬೈಲ್ ಆಯಪ್ ಸಹ ಹೊರ ತರಲಾಗುವುದು ಎಂದು ಕೇಂದ್ರ ಸಚಿವರು ಹೇಳಿದರು.

ಕಾವೇರಿ ಆರತಿ ಕಾರ್ಯಕ್ರಮಕ್ಕೆ ಡಿಸಿಎಂ ಡಿಕೆಶಿ ಅದ್ಧೂರಿ ಚಾಲನೆ

• ಉದಯವಾಹಿನಿ, ಬೆಂಗಳೂರು

ವಿಶ್ವಜಲದಿನದ ಅಂಗವಾಗಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಜಲಸಂಪನ್ಮೂಲ ಹಾಗೂ ನೀರಾವರಿ ಇಲಾಖೆಯಿಂದ ಮಲ್ಲೇಶ್ವರದ ಸ್ಯಾಂಕಿ ಕೆರೆ ಆವರಣದಲ್ಲಿ ಇದೇ ಮೊದಲ ಬಾರಿಗೆ ನಡೆಯುತ್ತಿರುವ ಕಾವೇರಿ ಆರತಿ ಕಾರ್ಯಕ್ರಮಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ಚಾಲನೆ ನೀಡಿದರು. ವಾರಣಾಸಿಯ ಗಂಗಾ ಆರತಿ ಮಾದರಿಯಲ್ಲಿ ಇದೇ ಮೊದಲ ಬಾರಿಗೆ ಬೆಂಗಳೂರಲ್ಲಿ ಕಾವೇರಿ ಆರತಿ ನಡೀತು. ಮಲ್ಲೇಶ್ವರದ ಹೃದಯ ಭಾಗದಲ್ಲಿರುವ ಸ್ಯಾಂಕಿ ಕೆರೆಯಲ್ಲಿ ಕಾವೇರಿ ತಾಯಿಗೆ ಗೌರವ ಸೂಚಿಸಲಾಯಿತು. ಭಾಗಮಂಡಲದಿಂದ ತಂದ ಕಾವೇರಿ ಜಲಕ್ಕೆ ಕಾಡುಮಲ್ಲೇಶ್ವರ ದೇವಾಲಯದಲ್ಲಿ ವಿಶೇಷ ಪೂಜೆ ಮಾಡಲಾಯಿತು. ಇದೇ ವೇಳೆ, ಗಂಗಾ ದೇವಿಗೆ ಹೋಮ ಸಲ್ಲಿಸಲಾಯಿತು. ಬಳಿಕ 108 ಕಲಶಗಳೊಂದಿಗೆ ಮೆರವಣಿಗೆ ಮೂಲಕ ಸ್ಯಾಂಕಿ ಕೆರೆಗೆ ತರಲಾಯಿತು. ಕಾವೇರಿ ಮಾತೆಗೆ ಡಿಸಿಎಂ ಡಿ.ಕೆ ಶಿವಕುಮಾರ್ ವಿಶೇಷ ಪೂಜೆ ನೆರವೇರಿಸಿದರು. ಬಳಿಕ ವಿಶ್ವಜಲದಿನದ ಅಂಗವಾಗಿ ಪ್ರತಿಜ್ಞಾವಿಧಿ ಬೋಧಿಸಿದರು. ಸ್ಯಾಂಕಿ ಕೆರೆಯ ತೇಲುವ ವೇದಿಕೆಯಲ್ಲಿ ವಾರಾಣಸಿಯ ಪ್ರಸಿದ್ಧ ತಂಡದಿಂದ ಕಾವೇರಿ ಆರತಿ ಮೂಲಕ ಪ್ರತಿಜ್ಞಾವಿಧಿ ಸ್ವೀಕಾರ ಮಾಡಿತು. ಗಾಯಕಿ ಅನನ್ಯಾ ಭಟ್, ರಘು ದೀಕ್ಷಿತ್ ತಂಡದಿಂದ ಸಂಗೀತ ಕಾರ್ಯಕ್ರಮ ನಡೆದರೆ, 3ಡಿ ಮ್ಯಾಪಿಂಗ್ ಮಾದರಿಯಲ್ಲಿ ವಿದ್ಯುತ್ ಅಲಂಕಾರ ಇತ್ತು.

ಬಲವಂತವಾಗಿ ಬಂದ್ ಮಾಡಿಸಿದರೆ ಕಾನೂನು ಕ್ರಮ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಬಂದ್ ವೇಳೆ ಅಹಿತಕರ ಘಟನೆ ನಡೆಯದಂತೆ ಬಿಗಿ ಬಂದೋಬಸ್ತ್ ಮಾಡಲಾಗಿದೆ. ಬಲವಂತವಾಗಿ ಬಂದ್ ಮಾಡಿಸಿದರೆ ಕಾನೂನು ಕ್ರಮಕ್ಕೆಗೊಳ್ಳಲಾಗುವುದು ಎಂದು ನಗರ ಪೊಲೀಸ್ ಕಮಿಷನರ್ ಬಿ. ದಯಾನಂದ ಎಚ್ಚರಿಕೆ ನೀಡಿದ್ದಾರೆ.

ಬಂದ್ ಹಿನ್ನೆಲೆಯಲ್ಲಿ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗದಂತೆ ನೋಡಿಕೊಳ್ಳಲಾಗುವುದು. ಬಂದ್‌ಗೆ ಕರೆ ನೀಡಿರುವ ಸಂಘಟನೆಗಳ ಮುಖಂಡರು, ಪದಾಧಿಕಾರಿಗಳ ಸಭೆ ನಡೆಸಿ, ನ್ಯಾಯಾಲಯದ ಆದೇಶದ ಬಗ್ಗೆ ಮನವರಿಕೆ ಮಾಡಿ ಕೊಡಲಾಗಿದೆ. ಕನ್ನಡ ಚಳವಳಿ ವಾಟಾಳ್ ಪಕ್ಷದ ಅಧ್ಯಕ್ಷ ವಾಟಾಳ್ ನಾಗರಾಜ್ ಅವರು ಕರ್ನಾಟಕ ಬಂದ್ ಬಗ್ಗೆ ಮಾಹಿತಿ ನೀಡಿದ್ದಾರೆ. ಸಾರ್ವಜನಿಕ ಆಸ್ತಿ ಪಾಸ್ತಿಗಳಿಗೆ ಹಾನಿಗಳಾದರೆ ಸಂಘಟನೆಗಳೇ ಜವಾಬ್ದಾರಿ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಈಗಾಗಲೇ ನಗರದ ಎಲ್ಲಾ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗೆ ಭದ್ರತೆ ಬಗ್ಗೆ ಸಲಹೆ, ಸೂಚನೆ ನೀಡಲಾಗಿದೆ. ಬಂದ್ ವೇಳೆ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆ ತಂದರೆ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಕರ್ನಾಟಕ ಹಾಗೂ ಕನ್ನಡಿಗರ ಹಿತಕ್ಕಾಗಿ ಶನಿವಾರ ಬೆಳಗ್ಗೆ 6ರಿಂದ ಸಂಜೆ 6ರವರೆಗೆ ಕರ್ನಾಟಕ ಬಂದ್ ನಡೆಸಲಾಗುವುದು' ಎಂದು ಕನ್ನಡ ಚಳವಳಿ ವಾಟಾಳ್ ಪಕ್ಷದ ಅಧ್ಯಕ್ಷ ವಾಟಾಳ್ ನಾಗರಾಜ್ ತಿಳಿಸಿದರು.

ಪೀಠಕ್ಕೆ ಅಗೌರವ 18 ಶಾಸಕರ ಅಮಾನತು

ಇತಿಮಿತಿಯಲ್ಲಿ ನಡೆದುಕೊಳ್ಳಬೇಕು

ಇದೇ ವಿಚಾರವಾಗಿ ಸಚಿವ ಕೆ ಎಚ್ ಮುನಿಯಪ್ಪ ಮಾತನಾಡಿ, ಸ್ಪೀಕರ್ ತೀರ್ಮಾನ ಅನಿವಾರ್ಯವಾಗಿತ್ತು. ಅವರು ಸ್ಪೀಕರ್ ಪೀಠದ ಘನತೆ ಎತ್ತಿ ಹಿಡಿದಿದ್ದಾರೆ. ವಿರೋಧ ಪಕ್ಷದವರು ಹೋರಾಟ ಮಾಡೋಕೆ ಸ್ವತಂತ್ರರು. ಆದರೆ ಸ್ಪೀಕರ್ ಸ್ಥಾನಕ್ಕೆ ಅಗೌರವ ತೋರಿಸುವುಸು ಸರಿಯಲ್ಲ. ಇಂತಹಾ ಘಟನೆ ಮರುಕಳಿಸಬಾರದು. ನಾವೂ ದೇಶದ ಜನತೆಗೆ ಸಂದೇಶ ಕಳುಹಿಸುವವರು. ನಾವೂ ಹೀಗೆ ಮಾಡಬಾರದು ನಮ್ಮ ಇತಿಮಿತಿಯಲ್ಲಿ ನಡೆದುಕೊಳ್ಳಬೇಕು ಎಂದರು.

ಅಗೌರವ ಸಹಿಸಲ್ಲ ಅಸೆಂಬ್ಲಿಗೆ ಬರಂಗಿಲ್ಲ

• ಉದಯವಾಹಿನಿ, ಬೆಂಗಳೂರು

ಸದನದ ಪೀಠಕ್ಕೆ ಅಗೌರವ ತೋರಿದ ಹಿನ್ನೆಲೆಯಲ್ಲಿ 18 ಬಿಜೆಪಿ ಶಾಸಕರನ್ನು ಕಲಾಪದಿಂದ 6 ತಿಂಗಳು ಅಮಾನತುಗೊಳಿಸಿ ವಿಧಾನಸಭಾ ಸ್ಪೀಕರ್ ಯು.ಟಿ.ಖಾದರ್ ಆದೇಶ ಹೊರಡಿಸಿದ್ದಾರೆ. ಹನಿಟ್ರ್ಯಾಪ್ ಪ್ರಕರಣ ಖಂಡಿಸಿ, ಪ್ರಕರಣದ ಸಿಬಿಐ ತನಿಖೆ ಆಗ್ರಹಿಸಿ ಬಿಜೆಪಿ ಸದಸ್ಯರು ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದ್ದರು. ಆಡಳಿತ ಪಕ್ಷದ ವಿರುದ್ಧ ಬಿಜೆಪಿ ಸದಸ್ಯರು ಘೋಷಣೆ ಕೂಗಿದರು. ಸ್ಪೀಕರ್ ಪೀಠದ ಮೇಲೆ ಏರಿ ಬಂದ ಬಿಜೆಪಿ ಸದಸ್ಯರು ತಮ್ಮ ಆಕ್ರೋಶ ಹೊರಹಾಕಿದ್ದರು. ಗದ್ದಲ ಕೋಲಾಹಲದ ನಡುವೆ ಸ್ಪೀಕರ್ ಪೀಠದ ಮೇಲೆ ಬಿಜೆಪಿ ಸದಸ್ಯರು ಕಾಗದ ಪ್ರತಿಗಳನ್ನು ಹರಿದು ಎಸೆದಿದ್ದರು. ಈ ಹಿನ್ನೆಲೆ ಪೀಠಕ್ಕೆ ಅಗೌರವ ತೋರಿದ 18 ಮಂದಿ ಬಿಜೆಪಿ ಸದಸ್ಯರನ್ನು ಸದನ ಕಲಾಪದಿಂದ 6 ತಿಂಗಳಿಗೆ ಅಮಾನತುಗೊಳಿಸಿ ಸ್ಪೀಕರ್ ರೂಲಿಂಗ್ ನೀಡಿದರು.

ಯಾರ್ಯಾರು ಅಮಾನತು: ಬಿಜೆಪಿ ಶಾಸಕರಾದ ದೊಡ್ಡಣ್ಣ ಗೌಡ ಪಾಟೀಲ್, ಎಸ್.ಆರ್ ವಿಶ್ವನಾಥ್, ಅಶ್ವತ್ಥ್ ನಾರಾಯಣ್, ಚೆನ್ನಬಸಪ್ಪ, ಉಮನಾಥ್ ಕೋಟ್ಯಾನ್, ಯಶಪಾಲ್ ಸುವರ್ಣ, ಹರೀಶ್ ಬಿ.ಪಿ., ಚಂದ್ರು ಲಮಾಣಿ, ಶರಣು ಸಲಗಾರ್, ಶೈಲೇಂದ್ರ ಬೆಳ್ದಾಳೆ, ಸಿ.ಕೆ.ರಾಮಮೂರ್ತಿ, ಮುನಿರತ್ನ, ಧೀರಜ್ ಮುನಿರಾಜ್, ಭರತ್ ಶೆಟ್ಟಿ, ಬಸವರಾಜ್ ಮತ್ತಿಮೂಡ್, ಸುರೇಶ್ ಗೌಡ, ಬಿ.ಬಸವರಾಜ್, ಎಂ.ಆರ್.ಪಾಟೀಲ್ ಅವರನ್ನು ಆರು ತಿಂಗಳಿಗೆ ವಿಧಾನಸಭೆ ಕಲಾಪದಿಂದ ಅಮಾನತುಗೊಳಿಸಿ ಆದೇಶ ನೀಡಿದ್ದಾರೆ.

ಹೊರ ಹಾಕಿದ ಮಾರ್ಷಲ್ಸ್

ಕಲಾಪದಿಂದ ಅಮಾನತುಗೊಂಡ ಶಾಸಕರುಗಳನ್ನು ವಿಧಾನಸಭೆ ಮಾರ್ಷಲ್‌ಗಳು ಕೈಕಾಲು ಹಿಡಿದು ಎತ್ತಿಕೊಂಡು ಬಂದು ಹೊರ ಹಾಕಿದರು. ಈ ವೇಳೆ ಬಿಜೆಪಿ ಸದಸ್ಯರು ವಿರೋಧ ವ್ಯಕ್ತಪಡಿಸಿದ್ದು, ಕಲಾಪವನ್ನು ಕೆಲ ಕಾಲ ಮುಂದೂಡಲಾಯಿತು. 18 ಬಿಜೆಪಿ ಶಾಸಕರ ಅಮಾನತು ವಿಚಾರವಾಗಿ ಮಾತನಾಡಿದ ಸಚಿವ ಎಂ ಬಿ ಪಾಟೀಲ, ಸ್ಪೀಕರ್ ಅವರು ಪೀಠಕ್ಕೆ ಅಗೌರವ ತೋರಿಸಿದ ಶಾಸಕರನ್ನು ಅಮಾನತು ಮಾಡಿದ ತೀರ್ಮಾನ ಸರಿಯಾಗಿದೆ. ಹಿಂದೆಯೂ ಇದೇ ರೀತಿಯಲ್ಲಿ ಗಲಾಟೆ ಆಗಿತ್ತು. ಆದರೆ ಯಾರು ಸಹ ಸ್ಪೀಕರ್ ಪೀಠದ ಮೇಲೆ ಹತ್ತಿರಲಿಲ್ಲ. ನಮ್ಮ ಸ್ಪೀಕರ್ ಸ್ವತಂತ್ರರಾಗಿದ್ದಾರೆ. ಅವರು ಯಾರ ಮಾತು ಕೇಳಲ್ಲ. ಸ್ಪೀಕರ್ ಪೀಠದ ಮೇಲೆ ಅಕ್ಕ ಪಕ್ಕ ಹತ್ತಿ ಹೋಗಿರುವುದು ನೀವೂ ನೋಡಿದ್ದೀರಿ. ಹಾಗಾಗಿ ಅವರು ತಗೆದುಕೊಂಡ ಅಮಾನತು ನಿರ್ಣಯ ಸರಿ ಇದೆ ಎಂದರು.

ಕಾನೂನು ಸಚಿವ ಕಿಡಿ

ಬಿಜೆಪಿ ಶಾಸಕರು ಮನುಷ್ಯತ್ವ ಇಲ್ಲದೆ ನಡೆದುಕೊಂಡಿದ್ದಾರೆ. ಪೀಠದಲ್ಲಿ ಇರುವಾಗ ಅಗೌರವವಾಗಿ ನಡೆದುಕೊಂಡಿದ್ದಾರೆ. ಮಾರ್ಷಲ್‌ಗಳು ಮನವಿ ಮಾಡಿದರೂ ಕಾಗದ ಪತ್ರ ಬಿಸಾಡುವ ಮೂಲಕ ಅನಾಗರಿಕರಾಗಿ ವರ್ತಿಸಿದ್ದಾರೆ. ಈ ನಿಟ್ಟಿನಲ್ಲಿ ಅಮಾನತು ಮಾಡುವ ನಿರ್ಧಾರ ಅಗತ್ಯವಾಗಿದೆ ಎಂದು ಕಾನೂನು ಸಂಸದೀಯ ಸಚಿವ ಎಚ್ ಕೆ ಪಾಟೀಲ್ ತಿಳಿಸಿದ್ದಾರೆ.

ಅಮಾನತು ಅವಧಿಯಲ್ಲಿ ಏನೆಲ್ಲ ನಿಷಿದ್ಧ..

- ಅಮಾನತು ಅವಧಿಯಲ್ಲಿ ಅವರುಗಳು ವಿಧಾನಸಭೆಯ ಸಭಾಂಗಣ, ಲಾಬಿ ಮತ್ತು ಗ್ಯಾಲರಿಗಳಿಗೆ ಪ್ರವೇಶಿಸುವಂತಿಲ್ಲ.
- ಅವರು ಸದಸ್ಯರಾಗಿರುವ ವಿಧಾನಮಂಡಲದ/ ವಿಧಾನಸಭೆಯ ಸ್ಥಾಯಿ ಸಮಿತಿಗಳ ಸಭೆಗಳಲ್ಲಿಯೂ ಭಾಗವಹಿಸುವಂತಿಲ್ಲ. ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯಲ್ಲಿ ಅವರುಗಳ ಹೆಸರಿನಲ್ಲಿ ಯಾವುದೇ ವಿಷಯವನ್ನು ನಮೂದು ಮಾಡತಕ್ಕದಲ್ಲ.
- ಅಮಾನತಿನ ಅವಧಿಯಲ್ಲಿ ಅವರುಗಳು ನೀಡುವ ಯಾವುದೇ ಸೂಚನೆಗಳನ್ನು ಸ್ವೀಕರಿಸಲಾಗುವುದಿಲ್ಲ.
- ಈ ಅವಧಿಯಲ್ಲಿ ನಡೆಯುವ ಸಮಿತಿಗಳ ಚುನಾವಣೆಯಲ್ಲಿ ಅವರುಗಳು ಮತದಾನ ಮಾಡುವಂತಿಲ್ಲ.
- ಯಾವುದೇ ದಿನಭತ್ಯೆಯನ್ನು ಪಡೆಯಲು ಅರ್ಹರಿಲ್ಲ.

ಪೀಠ ಸಹಿಸುವುದಿಲ್ಲ: ಕಾನೂನು ಸಚಿವ ಹೆಚ್.ಕೆ.ಪಾಟೀಲ್ ಅವರು ಅಮಾನತು ಪರವಾಗಿ ನಿಲುವಳಿ ಸೂಚಿಸಿದರು. ಬಳಿಕ ಸಭಾಧ್ಯಕ್ಷ ಯು.ಟಿ.ಖಾದರ್ ರೂಲಿಂಗ್ ನೀಡುತ್ತಾ, ಪೀಠದ ಮಹತ್ವ, ಪಾವಿತ್ರ್ಯತೆ ಕಾಪಾಡಬೇಕು. ಪೀಠದ ಗೌರವಕ್ಕೆ ಧಕ್ಕೆ ಮಾಡಕೂಡದು. ಪೀಠದಿಂದ ನಾವು ದೊಡ್ಡವರಲ್ಲ. ನಾವೆಲ್ಲರೂ ಬದ್ಧತೆ, ಶಾಂತತೆಯಿಂದ ನಡೆದುಕೊಳ್ಳಬೇಕು. ಪೀಠದ ಮೇಲೆ ಹತ್ತಿ ಅಗೌರವ ತೋರಿದ್ದಾರೆ. ಕಾರ್ಯಕಲಾಪ ಅಡ್ಡಿಪಡಿಸಿ, ಸದನದಲ್ಲಿ ಅಗೌರವ, ಬೇಜವಾಬ್ದಾರಿಯಿಂದ ವರ್ತಿಸಲಾಗಿದೆ. ಯು.ಟಿ.ಖಾದರ್ ಕ್ಷಮಿಸಬಹುದು ಆದರೆ, ಪೀಠ ಸಹಿಸುವುದಿಲ್ಲ ಎಂದರು.

6ತಿಂಗಳ ಕಾಲ ಸದನಕ್ಕೆ ಬಾರದಂತೆ ತಡೆ: ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮಂಡಿಸಿದ ಹಾಗೂ ಸದನ ಅಂಗೀಕರಿಸಿದ ಪ್ರಸ್ತಾವದಂತೆ 21.03.2025ರಂದು ಸದನದಲ್ಲಿ ಪೀಠದ ಆದೇಶವನ್ನು ಲೆಕ್ಕಿಸದೇ ಸದನದ ಕಾರ್ಯಕಲಾಪಗಳಿಗೆ ಅಡ್ಡಿಯುಂಟು ಮಾಡುತ್ತಾ, ಅಶಿಸ್ತು ಹಾಗೂ ಅಗೌರವದಿಂದ ನಡೆದುಕೊಂಡಿದ್ದರಿಂದ ವಿಧಾನಸಭಾ ಸದಸ್ಯರುಗಳಾದ ದೊಡ್ಡನಗೌಡ ಹೆಚ್.ಪಾಟೀಲ್, ಪ್ರತಿಪಕ್ಷದ ಮುಖ್ಯ ಸಚೇತಕ ಸಿ.ಎನ್.ಅಶ್ವತ್ಥ್ ನಾರಾಯಣ್, ಎಸ್.ಆರ್. ವಿಶ್ವನಾಥ್, ಬಿ.ಎ.ಬಸವರಾಜ, ಎಂ.ಆರ್.ಪಾಟೀಲ್, ಚನ್ನಬಸಪ್ಪ (ಚೆನ್ನಿ), ಬಿ.ಸುರೇಶ್ ಗೌಡ, ಉಮಾನಾಥ್ ಎ.ಕೋಟ್ಯಾನ್, ಶರಣು ಸಲಗರ, ಶೈಲೇಂದ್ರ ಬೆಲ್ದಾಳೆ, ಸಿ.ಕೆ.ರಾಮಮೂರ್ತಿ, ಯಶಪಾಲ್ ಎ.ಸುವರ್ಣ, ಬಿ.ಪಿ. ಹರೀಶ್, ಭರತ್ ಶೆಟ್ಟಿ, ವೈ, ಮುನಿರತ್ನ, ಬಸವರಾಜ್ ಮತ್ತಿಮೂಡ್, ಧೀರಜ್ ಮುನಿರಾಜು ಮತ್ತು ಡಾ.ಚಂದ್ರು ಲಮಾಣಿ ಅವರನ್ನು ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಾವಳಿಗಳ ನಿಯಮ 348ರ ಮೇರೆಗೆ ತಕ್ಷಣದಿಂದ ಜಾರಿಗೆ ಬರುವಂತೆ 6 ತಿಂಗಳುಗಳ ಕಾಲ ಸದನಕ್ಕೆ ಬಾರದಂತೆ ತಡೆಹಿಡಿದು, ಅಮಾನತುಗೊಳಿಸಲಾಗಿರುತ್ತದೆ ಎಂದು ರೂಲಿಂಗ್ ನೀಡಲಾಯಿತು.



ಅಮಾನತಾದವರನ್ನು ಸಭಾಂಗಣದಿಂದ ಎತ್ತೊಯ್ದು ಮಾರ್ಷಲ್‌ಗಳು: ಸದನದ ಕಾರ್ಯಕಲಾಪ ಅಡ್ಡಿಪಡಿಸಿದ ಹಿನ್ನೆಲೆಯಲ್ಲಿ ಆರು ತಿಂಗಳವರೆಗೆ ಸದನಕ್ಕೆ ಬಾರದಂತೆ ಅಮಾನತುಗೊಳಿಸುವುದಾಗಿ ರೂಲಿಂಗ್ ನೀಡಿದರು. ಬಳಿಕ ಹತ್ತು ನಿಮಿಷಗಳ ಕಾಲ ಕಲಾಪವನ್ನು ಮುಂದೂಡಲಾಯಿತು. ಬಳಿಕ ಸದನದಿಂದ ಅಮಾನತುಗೊಂಡ 18 ಮಂದಿ ಬಿಜೆಪಿ ಸದಸ್ಯರನ್ನು ಮಾರ್ಷಲ್‌ಗಳು ಸಭಾಂಗಣದಿಂದ ಹೊರಗೆ ಎತ್ತೊಯ್ದರು.

ಗುತ್ತಿಗೆಯಲ್ಲಿ ಮುಸ್ಲಿಂಗೆ ಮೀಸಲು ಮಸೂದೆ ಅಂಗೀಕಾರ: ಸರ್ಕಾರದ ವಿರುದ್ಧ ತೊಡೆತಟ್ಟಿದ ಬಿಜೆಪಿ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯ ರಾಜಕಾರಣದಲ್ಲಿ ಸದ್ಯ ಹನಿಟ್ರ್ಯಾಪ್ ಮತ್ತು ಮುಸ್ಲಿಂ ಮೀಸಲಾತಿ ವಿಚಾರಗಳು ಸಾಕಷ್ಟು ಕೋಲಾಹಲ ಎಬ್ಬಿಸಿವೆ. ಇಂದು ವಿಧಾನಸಭೆ ಕಲಾಪದಲ್ಲಿ ಮುಸ್ಲಿಂ ಮೀಸಲಾತಿ ವಿಧೇಯಕ ಕುರಿತು ಚರ್ಚೆ ವೇಳೆ ಹೈಡ್ರಾಮಾವೇ ನಡೆದಿದೆ. ಪರ-ವಿರೋಧದ ಮಧ್ಯೆ ಕೊನೆಗೂ ಮುಸ್ಲಿಮರಿಗೆ ಗುತ್ತಿಗೆಯಲ್ಲಿ ಮೀಸಲಾತಿ ಮಸೂದೆ ಅಂಗೀಕಾರವಾಗಿದೆ. ಸದ್ಯ ಈ ವಿಚಾರವಾಗಿ ಸರ್ಕಾರದ ವಿರುದ್ಧ ತೊಡೆತಟ್ಟಿರುವ ಬಿಜೆಪಿ ಮೀಸಲಾತಿ ರದ್ದು ಮಾಡುವಂತೆ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ನೇತೃತ್ವದಲ್ಲಿ ಬಿಜೆಪಿ ನಿಯೋಗ ರಾಜ್ಯಪಾಲರ ಕಾರ್ಯದರ್ಶಿಗೆ ದೂರು ಸಲ್ಲಿಸಿದೆ.

ಸರ್ಕಾರಿ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಶೇ.4ರಷ್ಟು ಮೀಸಲಾತಿಗೆ ಬಿಜೆಪಿ ಸಾಕಷ್ಟು ವಿರೋಧಿಸುತ್ತಿದೆ. ಆದರೂ ವಿರೋಧದ ನಡುವೆ ಬಿಲ್ ಮಂಡನೆ ಆಗಿದೆ. ಹೀಗಿರುವಾಗ ಮೀಸಲಾತಿ ರದ್ದು ಅಥವಾ ಕೈಬಿಡುವಂತೆ ಬಿಜೆಪಿ ನಿಯೋಗ ರಾಜ್ಯಪಾಲರ ಕಾರ್ಯದರ್ಶಿಗೆ ದೂರು ಸಲ್ಲಿಸಿದೆ. ಅದೇ ರೀತಿಯಾಗಿ ಸ್ಪೀಕರ್ ಪೀಠಕ್ಕೆ ಅಗೌರವ ತೋರಿದ 18 ಸದಸ್ಯರ ಅಮಾನತು ಖಂಡಿಸಿ ರಾಜಭವನಕ್ಕೆ ಭೇಟಿ ನೀಡಿದ ಬಿಜೆಪಿ ನಾಯಕರ ನಿಯೋಗ, ರಾಜ್ಯಪಾಲರ ಕಾರ್ಯದರ್ಶಿ ಮೂಲಕ ದೂರು ಸಲ್ಲಿಸಿದೆ.

ಧರ್ಮೇಂದ್ರ ಪ್ರಧಾನ್ ತಂದೆ ದೇಬೇಂದ್ರ ಪ್ರಧಾನ್ ನಿಧನದ ಹಿನ್ನೆಲೆ ಒಡಿಶಾದ ಭುವನೇಶ್ವರಕ್ಕೆ ರಾಜ್ಯಪಾಲ ಟಿ.ಸಿ.ಗೆಹ್ಲೋಟ್ ಸಂತಾಪ ಸೂಚಿಸಲು ತೆರಳಿದ್ದು, ಹೀಗಾಗಿ ರಾಜ್ಯಪಾಲರ ಕಾರ್ಯದರ್ಶಿಗೆ ಆರ್.ಅಶೋಕ್ ನೇತೃತ್ವದಲ್ಲಿ ದೂರು ನೀಡಲಾಗಿದೆ. ದೂರು ಬಳಿಕ ಆರ್. ಅಶೋಕ್ ಪ್ರತಿಕ್ರಿಯಿಸಿದ್ದು, ಧರ್ಮಾಧಾರಿತ ಮೀಸಲಾತಿ ನೀಡಲು ಯಾವುದೇ ಅಧಿಕಾರ ಇಲ್ಲ. ಇದೊಂದು ರೀತಿ ಹಲಾಲ್ ಬಜೆಟ್ ಮಾಡಿದ್ದಾರೆ. ಹಿಂದೂ-ಮುಸ್ಲಿಂ ಒಟ್ಟಿಗೆ ಹೋಗಬೇಕೆಂದು ಸಂವಿಧಾನ ಹೇಳುತ್ತೆ. ಹಿಂದೂಗಳನ್ನು ಭಾಗ ಮಾಡಿದ್ದಾರೆ, ಇದು ಸಂ

ಫಾಲ್ಗುಣ ಮಾಸ ಸಂಗೀತೋತ್ಸವ

• ಉದಯವಾಹಿನಿ, ಬೆಂಗಳೂರು

ಸಮನ್ವಯ ಕಲಾ ಕೇಂದ್ರದ 'ಕರ್ನಾಟಕ ಕಲಾ ಶ್ರೀ ಸಂಗೀತ ವಿದ್ವಾನ್ ಶ್ರೀ ತಿರುಮಲೆ ಶ್ರೀನಿವಾಸ್ (ಭಾಮಿ) ಹಾಗೂ ಶ್ರೀ ಲಾಲ್ ದಾಸ್ ಭಕ್ತ ಆಂಜನೇಯ ಸ್ವಾಮಿ ಭಜನಾ ಮಂಡಳಿಯ ಮುಖ್ಯಸ್ಥರಾದ ಮೃದಂಗ ವಿದ್ವಾನ್ ಶ್ರೀ ಶ್ರೀನಿವಾಸ್ ಅನಂತರಾಮಯ್ಯ ಇವರುಗಳ ನೇತೃತ್ವದಲ್ಲಿ ಮಾರ್ಚ್ 23, ಭಾನುವಾರ ಬೆಳಗ್ಗೆ 9 ರಿಂದ ಸಂಜೆ 5ರ ವರೆಗೆ ಬಳೇಪೇಟೆಯಲ್ಲಿರುವ ಪುರಾತನವಾದ ಶ್ರೀ ಲಾಲ್ ದಾಸ್ ವೆಂಕಟರಮಣ ಸ್ವಾಮಿ ಸನ್ನಿಧಿಯಲ್ಲಿ ಗಾಯನ ಕಲಾವಿದರಿಗೆ ಪಕ್ಕವಾದ್ಯದೊಂದಿಗೆ ಸಂಗೀತ ಸೇವೆಯನ್ನು ಸಲ್ಲಿಸುವ ಅವಕಾಶವನ್ನು ಕಲ್ಪಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ : ಮೊಬೈಲ್ : 9844027006/9945437653

ಮನೆಯಲ್ಲಿ ಕೇರ್ ಟೇಕರ್ ಕೆಲಸದವರನ್ನು ಇಟ್ಟುಕೊಳ್ಳುವ ಮುನ್ನ ಹುಷಾರ್..!

• ಉದಯವಾಹಿನಿ, ಬೆಂಗಳೂರು

ಕೇರ್ ಟೇಕರ್ ಕೆಲಸಕ್ಕೆ ಸೇರಿದ ಕೇವಲ ಹತ್ತು ದಿನಗಳಲ್ಲಿ ಚಿನ್ನಾಭರಣ ಕಳ್ಳತನ ಮಾಡಿದ್ದ ಮಹಿಳೆ ಮತ್ತು ಆಕೆಯ ಪತಿಯನ್ನು ಹೆಣ್ಣೂರು ಠಾಣೆ ಪೊಲೀಸರು ಬಂಧಿಸಿ 20.24 ಲಕ್ಷ ಮೌಲ್ಯದ 253 ಗ್ರಾಂ ಚಿನ್ನಾಭರಣ ವಶಪಡಿಸಿಕೊಂಡಿದ್ದಾರೆ. ಅಪಾರ್ಟ್‌ಮೆಂಟ್ ಒಂದರಲ್ಲಿವಾಸವಿರುವ ನಿವಾಸಿಯೊಬ್ಬರ ಅಜ್ಜಿಯು ವಯೋವೃದ್ಧರಾಗಿದ್ದು, ಆನಾರೋಗ್ಯದಿಂದ ಬಳಲುತ್ತಿದ್ದರಿಂದ, ಅವರ ಆರೈಕೆಗಾಗಿ ಕಳೆದ ಡಿ.31 ರಂದು ಒಬ್ಬ ಮಹಿಳೆಯನ್ನು ಕೇರ್ ಟೇಕರ್ ಕೆಲಸಕ್ಕೆ ನೇಮಕ ಮಾಡಿಕೊಂಡಿದ್ದಾರೆ. ಕೆಲಸದ ಅವಧಿಯಲ್ಲಿ ಮಾಲೀಕರಿಗೆ ತಿಳಿಯದಂತೆ ಈಕೆ ಹಣ, ಆಭರಣಗಳನ್ನು ಕಳ್ಳತನ ಮಾಡಿದ್ದಾಳೆ. ಈ ನಡುವೆ ಜ.11 ರಂದು ಈ ಮಹಿಳೆ ಮನೆಯಿಂದ ಹೊರಗೆ ಹೋಗಿದ್ದು, ಮರಳಿ ಕರ್ತವ್ಯಕ್ಕೆ ಬಂದಿರುವುದಿಲ್ಲ. ಆಕೆಯ ಮೊಬೈಲ್ ಸಹ ಸ್ವಿಚ್ ಆಫ್ ಆಗಿರುತ್ತದೆ. ಕೇರ್ ಟೇಕರ್ ಕೆಲಸದಾಕೆಯ ಮೇಲೆ ಅನುಮಾನಗೊಂಡು, ಕೊಠಡಿಯ ಬೀರು ತೆಗೆದು ನೋಡಿದಾಗ ಅದರಲ್ಲಿದ್ದ ವಜ್ರ ಮತ್ತು ಚಿನ್ನಾಭರಣಗಳು ಹಾಗೂ 2.50 ಸಾವಿರ ಹಣ ಕಾಣೆಯಾಗಿದ್ದವು. ತಕ್ಷಣ ಅವರು ಕೇರ್ ಟೇಕರ್ ಕೆಲಸದಾಕೆಯ ಮೇಲೆ ಅನುಮಾನಗೊಂಡು ಹೆಣ್ಣೂರು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡ ಪೊಲೀಸರು ಮಹಿಳೆಯ ಬಗ್ಗೆ ಮಾಹಿತಿಯನ್ನು ಕಲೆಹಾಕಿ, ಹೆಚ್ ಬಿಆರ್ ಲೇಔಟ್ 4 ನೇ ಬ್ಲಾಕ್ ಹತ್ತಿರ ಮಹಿಳೆ ಹಾಗೂ ಆಕೆಯ ಪತಿಯನ್ನು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿದಾಗ ಚಿನ್ನಾಭರಣ ಹಾಗೂ ಹಣ ಕಳವು ಮಾಡಿರುವುದಾಗಿ ಹೇಳಿದ್ದಾಳೆ. ಅಲ್ಲದೇ ಈ ಹಿಂದೆ ನಗರದ ವಿವಿಧ ಠಾಣಾ ವ್ಯಾಪ್ತಿಯಲ್ಲಿಯೂ ಸಹ ಮನೆ ಕಳವು ಮಾಡಿರುವುದಾಗಿ ತಿಳಿಸಿದ್ದು, ಆಕೆಯಿಂದ 45 ಗ್ರಾಂ ಚಿನ್ನಾಭರಣವನ್ನು ವಶಪಡಿಸಿಕೊಂಡಿದ್ದಾರೆ.

ಈ ದಂಪತಿಯನ್ನು ಸುದೀರ್ಘವಾಗಿ ವಿಚಾರಣೆ ಮಾಡಿದಾಗ ಕಳವು ಮಾಡಿದ ಚಿನ್ನಾಭರಣಗಳನ್ನು ಆಂಧ್ರಪ್ರದೇಶದ ನೆಲ್ಲೂರಿನ ಜ್ಯೂವೆಲರಿ ಅಂಗಡಿಯಲ್ಲಿ ಮಾರಾಟ ಮಾಡಿರುವುದಾಗಿ ತಿಳಿಸಿದ್ದು, ಅದರಂತೆ ಜ್ಯೂವೆಲರಿ ಅಂಗಡಿಯ ಮಾಲೀಕನಿಗೆ ನೋಟಿಸ್‌ನ್ನು ಜಾರಿ ಮಾಡಿದ್ದು, ನಂತರ ಆತ 70 ಗ್ರಾಂ ಚಿನ್ನಾಭರಣವನ್ನು ಠಾಣೆಗೆ ತಂದು ಒಪ್ಪಿಸಿದ್ದಾರೆ.

ಬೆಂಗಳೂರಲ್ಲಿ ಸ್ಟಾಫ್ ನರ್ಸ್ ಅನುಮಾನಾಸ್ಪದ ಸಾವು, ಕೊಲೆ ಶಂಕೆ

• ಉದಯವಾಹಿನಿ, ಬೆಂಗಳೂರು

ಖಾಸಗಿ ಆಸ್ಪತ್ರೆಯೊಂದರ ಸ್ಟಾಫ್ ನರ್ಸ್‌ರೊಬ್ಬರು ಅನುಮಾನಾಸ್ಪದವಾಗಿ ಮೃತಪಟ್ಟಿದ್ದು, ಕೊಲೆ ಶಂಕೆ ವ್ಯಕ್ತವಾಗಿದೆ. ಸುದ್ದಗುಂಟೆ ಪಾಳ್ಯ ಪೊಲೀಸ್ ಠಾಣಾ ವ್ಯಾಪ್ತಿಯ ಅವರ ಮನೆಯಲ್ಲಿ ನಿನ್ನೆ ಸಂಜೆ ಶಿಲ್ಪಾ(35) ಅನುಮಾನಾಸ್ಪದವಾಗಿ ಮೃತಪಟ್ಟಿದ್ದಾರೆ. ಪತಿಯ ಮನೆಯವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಹೇಳುತ್ತಿದ್ದಾರೆ. ಸುದ್ದಿ ತಿಳಿದು ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲಿಸಿ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮೃತ ದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಿ ತನಿಖೆ ಕೈಗೊಂಡಿದ್ದಾರೆ. ನರ್ಸ್ ಸಾವು ಆತ್ಮಹತ್ಯೆಯೇ ಅಥವಾ ಕೊಲೆಯೇ ಎಂಬ ಬಗ್ಗೆ ಮರಣೋತ್ತರ ಪರೀಕ್ಷೆ ವರದಿ ಬಂದ ನಂತರವಷ್ಟೇ ಗೊತ್ತಾಗಲಿದೆ.

ವಿದ್ಯುತ್ ಕಂಬಕ್ಕೆ ಅಪ್ಪಳಿಸಿದ ಬೈಕ್, ಸಹೋದರರ ದುರ್ಮರಣ

• ಉದಯವಾಹಿನಿ, ಬೆಂಗಳೂರು

ಅತಿವೇಗವಾಗಿ ಬೈಕ್‌ನಲ್ಲಿ ಹೋಗುತ್ತಿದ್ದಾಗ ನಿಯಂತ್ರಣ ತಪ್ಪಿ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದ ಪರಿಣಾಮ ಸಹೋದರರಿಬ್ಬರೂ ಮೃತಪಟ್ಟಿರುವ ಘಟನೆ ಅಶೋಕ ನಗರ ಸಂಚಾರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬೆಳಗಿನ ಜಾವ ನಡೆದಿದೆ.

ನೀಲಸಂದ್ರ ನಿವಾಸಿಗಳಾದ ಶಕೀಲ್ ಬಶೀರ್(23) ಮತ್ತು ಅಸ್ಲಂ ಬಶೀರ್ (22) ಮೃತ ಸಹೋದರರು. ಇವರು ಅಶೋಕ ನಗರದ ಬಜಾಜ್‌ಸ್ಟ್ರೀಟ್‌ನಲ್ಲಿ ಹೋಟೆಲ್ ನಡೆಸುತ್ತಿದ್ದರು.

ಬೆಳಗಿನ ಜಾವ 4.30ರ ಸುಮಾರಿನಲ್ಲಿ ಇವರಿಬ್ಬರು ಹೆಲ್ಮೆಟ್ ಧರಿಸದೆ ಅತಿವೇಗವಾಗಿ ಬೈಕ್‌ನಲ್ಲಿ ಹೋಗುತ್ತಿದ್ದಾಗ ಆನೆಪಾಳ್ಯ ಜಂಕ್ಷನ್ ಬಳಿ ನಿಯಂತ್ರಣ ತಪ್ಪಿ ರಸ್ತೆ ಬದಿಯ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದು ರಸ್ತೆಗೆ ಉರುಳಿ ಬಿದ್ದಿದ್ದಾರೆ. ಪರಿಣಾಮ ಇಬ್ಬರ ತಲೆ ಹಾಗೂ ಇನ್ನಿತರ ಭಾಗಗಳಿಗೆ ಗಂಭೀರ ಪೆಟ್ಟಾಗಿದೆ. ತಕ್ಷಣ ಇವರಿಬ್ಬರನ್ನು ಆಸ್ಪತ್ರೆಗೆ ಕರೆದೊಯ್ದರಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ಸುದ್ದಿ ತಿಳಿದು ಅಶೋಕ ನಗರ ಸಂಚಾರಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ರಣಬಿಸಿಲಿಗೆ ಉತ್ತರ ಕರ್ನಾಟಕ ತತ್ತರ: ರಾಜ್ಯ ವಿಪತ್ತು ಎಂದು ಘೋಷಿಸಲು ತಜ್ಞರ ಆಗ್ರಹ

• ಉದಯವಾಹಿನಿ, ಬೆಂಗಳೂರು

ಈ ಬಾರಿ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಬಿಸಿಲಿನ ತಾಪಮಾನ ಮತ್ತಷ್ಟು ಏರಿಕೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ಬೆನ್ನಲ್ಲೇ ಉಷ್ಣ ಅಲೆ ಸಮಸ್ಯೆಯನ್ನು ರಾಜ್ಯ ವಿಪತ್ತು ಎಂದು ಘೋಷಿಸಿ ಎಂದು ತಜ್ಞರು ಒತ್ತಾಯಿಸಿದ್ದಾರೆ.

ಉತ್ತರ ಕರ್ನಾಟಕದ ಕಲಬುರಗಿ, ರಾಯಚೂರು ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಉಷ್ಣ ಅಲೆ ಕಾಣಿಸಿಕೊಂಡಿದ್ದು ತಾಪಮಾನ ಸುಮಾರು 43 ಡಿಗ್ರಿ ಸೆಲ್ಸಿಯಸ್ ತಲುಪಿದೆ. ಇದು ಮಕ್ಕಳು, ವೃದ್ಧರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ಇನ್ನು ಈ ಪ್ರದೇಶಗಳ ತಾಪಮಾನದಲ್ಲಿ ಮತ್ತಷ್ಟು ಏರಿಕೆಯಾಗುವ

ಉದಯವಾಹಿನಿ ಚಿತ್ರ

ಬಗ್ಗೆ ಮುನ್ಸೂಚನೆ ನೀಡಿರುವುದು ಜನರನ್ನು ಕಂಗಾಲಾಗಿಸಿದೆ. ರಾಜ್ಯ ಸರ್ಕಾರ ಉಷ್ಣ ಅಲೆಯನ್ನು ರಾಜ್ಯ ವಿಪತ್ತು ಎಂದು ಘೋಷಿಸುವುದರಿಂದಾಗುವ ಪ್ರಯೋಜನಗಳು ಏನೆಂದರೆ, ಕರ್ನಾಟಕ ವಿಪತ್ತು ಪರಿಹಾರ ನಿಧಿಯಿಂದ ಸಂತ್ರಸ್ತರಿಗೆ ಪರಿಹಾರ ನೀಡಲು ಸಾಧ್ಯವಾಗಲಿದೆ. ಈ ಪರಿಸ್ಥಿತಿಯನ್ನು ಎದುರಿಸಲು ಜಿಲ್ಲೆಗಳಿಗೆ ನೆರವಾಗಲಿದೆ. ಏತನ್ಮಧ್ಯೆ, ಅಧಿಕ ತಾಪಮಾನದಿಂದ ರಕ್ಷಣೆಗೆ ಜನರಲ್ಲಿ

ಜಾಗೃತಿ ಮೂಡಿಸಲು ಆರೋಗ್ಯ ಇಲಾಖೆ ಮಾರ್ಗಸೂಚಿ

ಕಲ್ಯಾಣ ಕರ್ನಾಟಕ ಪ್ರದೇಶ ಈಗಾಗಲೇ ಮಕ್ಕಳಲ್ಲಿ ಅಪೌಷ್ಟಿಕತೆ ಮತ್ತು ಹೆಚ್ಚಿನ ತಾಯಂದಿರ ಮರಣ ಪ್ರಮಾಣದಿಂದ ಬಳಲುತ್ತಿದ್ದು, ಇಲ್ಲಿನ ಜನರಿಗೆ ಅಧಿಕ ತಾಪಮಾನದಿಂದ ರಕ್ಷಿಸಿಕೊಳ್ಳುವ ನಿಟ್ಟಿನಲ್ಲಿ ಸಹಾಯ ಮಾಡಲು ಯಾವುದೇ ಕ್ರಿಯಾ ಯೋಜನೆ ಜಾರಿಯಲ್ಲಿಲ್ಲ ಎಂದು ತಜ್ಞರು ಹೇಳಿದ್ದಾರೆ. ಇದುವರೆಗೆ ಯಾವುದೇ ರೋಗಿಗಳು ಅಥವಾ ಜನ ಬಿಸಿಲಾಘಾತ ಅಥವಾ ಉಷ್ಣ ಅಲೆಯಿಂದಾಗಿ ಆಸ್ಪತ್ರೆಗೆ ದಾಖಲಾಗಿಲ್ಲ ಎಂದು ಕಲಬುರಗಿ ಜಿಲ್ಲಾ ಆರೋಗ್ಯ ಅಧಿಕಾರಿ ಶರಣಬಸಪ್ಪ ಕ್ಯಾತನಾಳ್ ತಿಳಿಸಿದ್ದಾರೆ. ತಾಪಮಾನ ಏರಿಕೆಯಿಂದಾಗಿ ಮಧ್ಯಾಹ್ನ 12 ರಿಂದ 3 ಗಂಟೆಯವರೆಗೆ ಮನೆಯಿಂದ ಹೊರ ಹೋಗುವುದನ್ನು ತಪ್ಪಿಸುವಂತೆ ಸಾರ್ವಜನಿಕರಿಗೆ ಎಚ್ಚರಿಕೆ ನೀಡಲಾಗಿದೆ ಎಂದು ಅವರು ಹೇಳಿದ್ದಾರೆ.

ಅತ್ಯಾಚಾರ ಆರೋಪಿ ಮುನಿರತ್ನ ವಿಧಾನಸಭೆ ಪ್ರವೇಶಿಸದಂತೆ ನಿರ್ಬಂಧಿಸಿ

ಭ್ರಷ್ಟ ಶಾಸಕ ಮುನಿರತ್ನ ಅವರನ್ನು ವಿಧಾನಸಭೆಗೆ ಪ್ರವೇಶಿಸಲು ಬಿಡಬಾರದು 15 ವರ್ಷದ ಬಾಲಕಿಯ ಮೇಲೆ ದೌರ್ಜನ್ಯ

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಶಾಸಕ ಮುನಿರತ್ನ ವಿಧಾನಸಭೆ ಪ್ರವೇಶಿಸದಂತೆ ನಿರ್ಬಂಧ ಹೇರಬೇಕು ಎಂದು 40 ವರ್ಷದ ಸಂತ್ರಸ್ತ ಮಹಿಳೆ ಒತ್ತಾಯಿಸಿದ್ದಾರೆ.

ಪ್ರೆಸ್ ಕ್ಲಬ್‌ನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಭ್ರಷ್ಟ ಶಾಸಕ ಮುನಿರತ್ನ ಅವರನ್ನು ವಿಧಾನಸಭೆಗೆ ಪ್ರವೇಶಿಸಲು ಬಿಡಬಾರದು. ಅವರು 15 ವರ್ಷದ ಬಾಲಕಿಯ ಮೇಲೆ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಿದ್ದಾರೆ. ಹಿರಿಯ ಕಾಂಗ್ರೇಸ್ ನಾಯಕ ಕೆ.ಎನ್. ರಾಜಣ್ಣ ಅವರ ಮೇಲೆ ಹನಿಟ್ರ್ಯಾಪ್ ಯತ್ನ ನಡೆದ ಹಿನ್ನೆಲೆಯಲ್ಲಿ ಪತ್ರಿಕಾಗೋಷ್ಠಿ ನಡೆಯಿತು. ಸುದ್ದಿಗೋಷ್ಠಿಯಲ್ಲಿ ಕಾಂಗ್ರೇಸ್ ನಾಯಕ ಲಗ್ಗೆರೆ ನಾರಾಯಣಸ್ವಾಮಿ ಮತ್ತು ಬಿಬಿಎಂಪಿ ಮಾಜಿ ಸದಸ್ಯ ವೇಲುನಾಯಕರ್ ಕೂಡ ಹಾಜರಿದ್ದರು. ನಾನು ರಾಮನಗರದಲ್ಲಿ ಮುನಿರತ್ನ ವಿರುದ್ಧ ದೂರು ದಾಖಲಿಸಿದೆ. ನಾನು ಅವರ ದುಷ್ಕೃತ್ಯಗಳ ಬಗ್ಗೆ ಪೊಲೀಸ್ ಆಯುಕ್ತರ ಜೊತೆ ಅರ್ಧ ಗಂಟೆ ಮಾತನಾಡಿದ್ದೆ, ನಂತರ ಮುನಿರತ್ನ ನನಗೆ ಫೋನ್‌ನಲ್ಲಿ ಕರೆ ಮಾಡಿ ನಿಂದಿಸಿದರು. ಅವರು ನನ್ನ ಮಕ್ಕಳನ್ನು ಕೊಲ್ಲುವುದಾಗಿ ಬೆದರಿಕೆ ಹಾಕಿದರು ಎಂದು ಆರೋಪಿಸಿದ್ದಾರೆ.



ಮುನಿರತ್ನ ಅವರಿಗೆ ಸರ್ಕಾರ ಒದಗಿಸಿದ ಭದ್ರತೆ ನೀಡಬೇಕೆಂದು ಬಿಜೆಪಿ ಶಾಸಕ ಅಶೋಕ ಅವರು ಮಾಡಿರುವ ಮನವಿಯನ್ನು ಪ್ರಶ್ನಿಸಿದ ಅವರು, ಆರ್ ಅಶೋಕ ಅವರಿಗೆ ಮುನಿರತ್ನ ಅವರ ಕೃತ್ಯಗಳು ಮತ್ತು ದುಷ್ಕೃತ್ಯಗಳ ಬಗ್ಗೆ ತಿಳಿದಿಲ್ಲವೇ ಅವರಿಗೆ ಅದರ ಬಗ್ಗೆ ಅರಿವಿಲ್ಲವೇ ಮುನಿರತ್ನ ಇಬ್ಬರು ಪ್ರಭಾವಿ ನಾಯಕರನ್ನು ಹನಿಟ್ರ್ಯಾಪ್ ಮಾಡಿದ್ದಾರೆ. ಅವರ ಸ್ಟುಡಿಯೋ ಆರ್ ಅಶೋಕ ಅವರ ಮನೆಯ ಬಳಿ ಇದೆ. ಮುನಿರತ್ನ ಅವರು ಸ್ಪಷ್ಟ ವೀಡಿಯೋಗಳನ್ನು ಮಾಡಿ ತನಗೆ ತೋರಿಸುತ್ತಿದ್ದರು ಎಂದು ಅವರು ಆರೋಪಿಸಿದರು.

ಬೆಳಗಾವಿ ವಿಧಾನಸಭಾ ಅಧಿವೇಶನದಲ್ಲಿ ನಾಯಕರು ಮುನಿರತ್ನ ಅವರೊಂದಿಗೆ ರಾಜಿ ಮಾಡಿಕೊಂಡ ಕಾರಣ ರಾಜ್ಯದಲ್ಲಿ ದಯನೀಯ ರಾಜಕೀಯ ಪರಿಸ್ಥಿತಿ ಎದುರಾಗಿದೆ. ಅವರು ಪುರಸಭೆ ಸದಸ್ಯರು, ಶಾಸಕರು ಮತ್ತು ಪೊಲೀಸ್ ಅಧಿಕಾರಿಗಳನ್ನು ಹನಿಟ್ರ್ಯಾಪ್ ಮಾಡಿದ್ದಾರೆ. ಅವರು ಯುವತಿಯೊಬ್ಬಳನ್ನು ನಿಂದಿಸಿದ್ದಾರೆ ಮತ್ತು ಅವರ ವಿರುದ್ಧ ನೂರಾರು ಪ್ರಕರಣಗಳಿವೆ. ಕಾನೂನು ಮುನಿರತ್ನ ಅವರಿಗೆ ಅನ್ವಯಿಸುತ್ತದೆಯೇ ಅಥವಾ ಇಲ್ಲವೇ? ಮುನಿರತ್ನ ಅವರಿಂದ ನಮಗೆಲ್ಲರಿಗೂ ಜೀವ ಭಯವಿದೆ, ಆದರೆ ಅವರಿಗೆ ಎಲ್ಲಾ ರೀತಿಯ ಭದ್ರತೆಯನ್ನು ನೀಡಲಾಗಿದೆ, ನಮಗೆ ಮಾತ್ರ ರಕ್ಷಣೆ ಇಲ್ಲ ಎಂದು ಲಗ್ಗೆರೆ ನಾರಾಯಣಸ್ವಾಮಿ ಟೀಕಿಸಿದ್ದಾರೆ

> ಮುನಿರತ್ನ ಹನಿ ಟ್ರ್ಯಾಪ್‌ಗಳ ಮಾಸ್ಟರ್‌ಮೈಂಡ್ ಎಂದು ಆರೋಪಿಸಿದ ಅವರು, ಹನಿ ಟ್ರ್ಯಾಪ್‌ನ ಪಿತಾಮಹ ಮುನಿರತ್ನ ವಿರುದ್ಧ ಗೃಹ ಸಚಿವರಿಗೆ ದೂರು ನೀಡಲಾಗುವುದು. ಈ ಹನಿ ಟ್ರ್ಯಾಪ್ ವೀಡಿಯೋಗಳನ್ನು ರಚಿಸಲಾದ ಸ್ಟುಡಿಯೋವನ್ನು ಸಹ ಪರಿಶೀಲಿಸಬೇಕು ಮತ್ತು ವಶಕ್ಕೆ ತೆಗೆದುಕೊಳ್ಳಬೇಕು ಎಂದು ಹೇಳಿದರು.

> 15 ವರ್ಷಗಳಿಂದ ಮುನಿರತ್ನ ಅವರೊಂದಿಗೆ ಸಂಬಂಧ ಹೊಂದಿದ್ದಾರೆಂದು ಹೇಳಿಕೊಂಡ ವೇಲುನಾಯಕರ್, ನಾನು ಕೋಲಾರ ಚುನಾವಣೆಯಲ್ಲಿ ಸ್ಪರ್ಧಿಸಲು ಹೋದಾಗ, ಅವರು ನನ್ನನ್ನು ಹನಿಟ್ರ್ಯಾಪ್ ಮಾಡಲು ಪ್ರಯತ್ನಿಸಿದರು ಎಂದು ಆರೋಪಿಸಿದರು. ವೈಯಕ್ತಿಕ ವಿಷಯಗಳು ಮತ್ತು ಹನಿಟ್ರ್ಯಾಪ್‌ಗೆ ಸಂಬಂಧಿಸಿದ ಅವರ ಪ್ರಕರಣಗಳ ಬಗ್ಗೆ ಮಾತನಾಡುವ ಮೂಲಕ ಬಜೆಟ್ ಅಧಿವೇಶನವನ್ನು ಹಾಳು ಮಾಡುವ ಬದಲು ಅವರು ಈ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಲು ಅಥವಾ ಪೊಲೀಸರ ಬಳಿ ದೂರು ದಾಖಲಿಸುವ ಧೈರ್ಯ ಮಾಡಲಿ ಎಂದು ಅವರು ಮುನಿರತ್ನಗೆ ಸವಾಲು ಹಾಕಿದರು.

HIV ಸಂತ್ರಸ್ತರ ಮೂಲಕ ಹನಿಟ್ರ್ಯಾಪ್

ಬ್ಯಾಗ್‌ನಲ್ಲಿ ಹ್ಯಾಂಡ್ ಗ್ರೆನೇಡ್ ಪತ್ತೆ

• ಉದಯವಾಹಿನಿ, ಬೆಂಗಳೂರು

ವೈಭವ್ ಹೋಟೆಲ್‌ನ ಸಪ್ಲೈಯರ್ ಬ್ಯಾಗ್‌ನಲ್ಲಿ ಹ್ಯಾಂಡ್ ಗ್ರೆನೇಡ್ ಪತ್ತೆಯಾಗಿದೆ. ಇದನ್ನು ಕಂಡು ಆತಂಕಗೊಂಡ ಹೋಟೆಲ್ ಸಿಬ್ಬಂದಿ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಸ್ಥಳಕ್ಕೆ ದೌಡಾಯಿಸಿದ ಪೊಲೀಸರು ಪರಿಶೀಲನೆ ನಡೆಸಿ ಗ್ರೆನೇಡ್ ಮತ್ತು ಸಪ್ಲೈಯರ್ ಅಬ್ದುಲ್ ರೆಹಮಾನ್ ವಶಕ್ಕೆ ಪಡೆದುಕೊಂಡು ತೀವ್ರ ವಿಚಾರಣೆ ನಡೆಸಿದ್ದಾರೆ.

ಬೆಂಗಳೂರಿನ ವೈಭವ್ ಹೋಟೆಲ್‌ನಲ್ಲಿ ಅಬ್ದುಲ್ ರೆಹಮಾನ್ ಎಂಬಾತ ಸೆಪ್ಲೈಯರ್ ಆಗಿ ಕೆಲಸ ಮಾಡುತ್ತಿದ್ದನು. ತಾನು ಬೆಳ್ಳಹಳ್ಳಿಯ ನಿವಾಸಿ ಎಂದು ಅಬ್ದುಲ್ ಹೇಳಿಕೊಂಡಿದ್ದನು. ಈ ವೇಳೆ ಹೋಟೆಲ್ ಸಿಬ್ಬಂದಿ ಆಧಾರ ಕಾರ್ಡ್ ತೋರಿಸುವಂತೆ ಕೇಳಿದ್ದಾರೆ. ಅಬ್ದುಲ್ ಆಧಾರ್ ಕಾರ್ಡ್ ತೋರಿಸದೆ ಸತಾಯಿಸಿದ್ದನು. ಇದರಿಂದ ಎಚ್ಚೆತ್ತ ಸಿಬ್ಬಂದಿ ಶೆಡ್‌ನಲ್ಲಿದ್ದ ರೆಹಮಾನ್‌ನ ಬ್ಯಾಗ್ ಚೆಕ್ ಮಾಡಿದಾಗ ಹ್ಯಾಂಡ್ ಗ್ರೆನೇಡ್ ಪತ್ತೆಯಾಗಿತ್ತು.

ಉದಯವಾಹಿನಿ ಚಿತ್ರ

ಸದ್ಯ ವಶಕ್ಕೆ ಪಡೆದಿರುವ ಗ್ರೆನೇಡ್ ಅನ್ನು ಪೊಲೀಸರು ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ ರವಾನಿಸಿದ್ದಾರೆ. ಇನ್ನು ಸಂಪಿಗೆಹಳ್ಳಿ ಠಾಣೆ ಪೊಲೀಸರು ಅಬ್ದುಲ್ ರೆಹಮಾನ್‌ನ ತೀವ್ರ ವಿಚಾರಣೆ ನಡೆಸಿದ್ದಾರೆ. ವಿಚಾರಣೆ ವೇಳೆ ಅಬ್ದುಲ್ ಬಾಂಬ್ ಮಾದರಿಯ ವಸ್ತು ರಸ್ತೆಯಲ್ಲಿ ಸಿಕ್ಕಿತ್ತು ಎಂದು ಹೇಳಿದ್ದಾನೆ ಎನ್ನಲಾಗಿದೆ. ಸದ್ಯ ಸಂಪಿಗೆಹಳ್ಳಿ ಪೊಲೀಸರು ಅಬ್ದುಲ್ ರೆಹಮಾನ್ ವಿರುದ್ಧ ಎಫ್ ಐಆರ್ ದಾಖಲಿಸಿದ್ದಾರೆ. ಸದ್ಯ ಪೊಲೀಸರು ಗ್ರೆನೇಡ್ ಎಲ್ಲಿ ಇತ್ತು ಅದು ಹೇಗೆ ಸಿಕ್ತು ಅದನ್ನ ಏಕೆ ತೆಗೆದುಕೊಂಡುಬಂದಿದ್ದ ಏನಾದರೂ ಬ್ಲಾಸ್ಟ್ ಮಾಡುವ ಪ್ಲ್ಯಾನ್ ಏನಾದರೂ ಇತ್ತಾ ಹೀಗೆ ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆಸಿದ್ದಾರೆ.

ನೀರಾವರಿ ಯೋಜನೆಗಳಿಗೆ ಅನುಮತಿ ನೀಡಿ: ಬೊಮ್ಮಾಯಿ ಆಗ್ರಹ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯದ ನೀರಾವರಿ ಯೋಜನೆಗಳಿಗೆ ಅನುಮತಿ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು ಆಗ್ರಹಿಸಿದ್ದಾರೆ.

ಸಂಸತ್ತಿನಲ್ಲಿ ಜಲಶಕ್ತಿ ಇಲಾಖೆಯ ಬೇಡಿಕೆ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಅಂತಾರಾಜ್ಯ ಜಲ ವಿವಾದಗಳನ್ನು ಬಗೆಹರಿಸಲು ಸುಪ್ರೀಂ ಕೋರ್ಟ್‌ನ ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ದೇಶಾದ್ಯಂತ ಒಂದೇ ನ್ಯಾಯ ಮಂಡ

ನೀವು ಹಲೋ.. ಎಂದರೆ ಅವರೂ ಹಲೋ.. ಎನ್ನುತ್ತಾರೆ: ಡಿ.ಕೆ ಶಿವಕುಮಾರ್

ನೀವು ಪ್ರತಿಕ್ರಿಯೆ ನೀಡಲಿಲ್ಲ ಎಂದರೆ ಯಾರಾದರೂ ಮಾತನಾಡಿಸುತ್ತಾರಾ? | ಆರೋಪ ಮಾಡಿದವರಿಗೆ ಡಿಕೆಶಿ ತಿರುಗೇಟು

• ಉದಯವಾಹಿನಿ, ಮಡಿಕೇರಿ

ಸುಮ್ಮನೆ ಹನಿಟ್ರ್ಯಾಪ್ ಮಾಡುವವರು ನಿಮ್ಮ ಬಳಿ ಬರುತ್ತಾರೆಯೇ? ನೀವು ಹಲೋ ಎಂದರೆ ಅವರು ಹಲೋ ಎನ್ನುತ್ತಾರೆ. ನೀವು ಪ್ರತಿಕ್ರಿಯೆ ನೀಡಲಿಲ್ಲ ಎಂದರೆ ಯಾರಾದರೂ ಮಾತನಾಡಿಸುತ್ತಾರಾ?' ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಶ್ನಿಸಿದರು.

48 ಶಾಸಕರು ಹನಿಟ್ರ್ಯಾಪ್‌ಗೆ ಒಳಗಾಗಿದ್ದಾರೆ, ಸರ್ಕಾರದ ಸಚಿವರಿಗೆ ರಕ್ಷಣೆ ಇಲ್ಲವೇ ಎಂದು ಇಲ್ಲಿನ ಭಾಗ ಮಂಡಲದಲ್ಲಿ ಪತ್ರಕರ್ತರು ಕೇಳಿದ ಪ್ರಶ್ನೆಗೆ ಅವರು ''ಯಾರು ಹೇಳಿದ್ದು ರಕ್ಷಣೆಯಿಲ್ಲವೆಂದು? ಎಂದು ಮರು ಪ್ರಶ್ನಿಸಿದರು. ಹಿಟ್ ಅಂಡ್ ರನ್ ರೀತಿ ಹನಿಟ್ರ್ಯಾಪ್ ಪ್ರಕರಣವೂ ಆಗಿದೆ. ನಾನು ಈ ಬಗ್ಗೆ ಗುರುವಾರದಂದೇ ಪೊಲೀಸರಿಗೆ ದೂರು ನೀಡಲಿ ಎಂದು ಸಲಹೆ ನೀಡಿದ್ದೆ. ಇದರ ಬಗ್ಗೆ ಕ್ರಮ ತೆಗೆದುಕೊಳ್ಳಲು ತಡ ಮಾಡಬಾರದು. ಇದರ ಬಗ್ಗೆ ಶೀಘ್ರ ತನಿಖೆಯಾಗಬೇಕು ಎಂದು ನಾನೂ ಒತ್ತಾಯ ಮಾಡುತ್ತಿದ್ದೇನೆ ಎಂದು ಹೇಳಿದರು. ಹನಿಟ್ರ್ಯಾಪ್ ಹಿಂದೆ ಡಿ.ಕೆ.ಶಿವಕುಮಾರ್ ತಂಡವಿದೆ ಎನ್ನುವ ಶಾಸಕ ಮುನಿರತ್ನ ಆರೋಪದ ಬಗ್ಗೆ ಕೇಳಿದಾಗ, ವಿಧಾನಸೌಧದಲ್ಲಿ ಅವರು ಏನೆಲ್ಲಾ ಮಾಡಿದ್ದರು ಎನ್ನುವುದು ಪೊಲೀಸ್ ದೂರಿನಲ್ಲಿ ಇದೆ ಅಲ್ಲವೇ? ಆರ್.ಅಶೋಕ್‌ಗೆ, ಯಡಿಯೂರಪ್ಪ ಅವರಿಗೆ ಏನೋ ಆಯಿತು ಎಂದು ಬಿಜೆಪಿಯವರೇ ಮಾತನಾಡುತ್ತಿದ್ದರಲ್ಲವೇ ಅವರ ನೋವನ್ನು ಅವರು ಹೇಳಿಕೊಂಡಿದ್ದಾರೆ. ಮಾಡಿದ್ದುಣೋ ಮಾರಾಯ ಎಂದು ಅವರ ಪಕ್ಷದವರಿಗೆ ಹೇಳಿ ಒಂದೊಳ್ಳೆ ಆಸ್ಪತ್ರೆಗೆ ಸೇರಿಸಿ ಪರೀಕ್ಷೆ ಮಾಡಿಸಲಿ. ಅವರಿಗೆ ಒಂದಷ್ಟು ತೊಂದರೆಗಳಿವೆ ಎಂದು ವ್ಯಂಗ್ಯವಾಡಿದರು.



ಯಾವ ಗಲಾಟೆಗಳನ್ನೂ ಮಾಡದೆ, ಯಾವ ಬಂದ್ ಕೂಡ ಮಾಡದೇ ದಯವಿಟ್ಟು ಎಲ್ಲರೂ ಶಾಂತರೀತಿಯಿಂದ ಇರಬೇಕು ಎಂದು ಮನವಿ ಮಾಡುವೆ ಎಂದು ಹೇಳಿದರು.

ಕಾವೇರಿ ನದಿ ಮಾಲಿನ್ಯ ತಡೆಗೆ ತಂಡ ರಚನೆ

ತಾಲ್ಲೂಕಿನ ಭಾಗಮಂಡಲದ ಭಗಂಡೇಶ್ವರ ದೇಗುಲ, ಡಿಸಿಎಂ ಡಿ ಕೆ ಶಿವಕುಮಾರ್ ಶುಕ್ರವಾರ ಪೂಜೆ ಸಲ್ಲಿಸಿ ಪವಿತ್ರ ತೀರ್ಥ ಸಂಗ್ರಹಿಸಿದರು. ಬೆಂಗಳೂರಿನಲ್ಲಿ ನಡೆಯಲಿರುವ ಕಾವೇರಿ ಆರತಿಯ ಪುಣ್ಯ ಕಾರ್ಯಕ್ರಮದ ವೇಳೆ ಸಾರ್ವಜನಿಕರಿಗೆ ಈ ತೀರ್ಥ ವಿತರಿಸಲಾಗುವುದು ಎಂದು ಅವರು ಹೇಳಿದರು. ಕಾವೇರಿ ನದಿ ಮಾಲಿನ್ಯವಾಗಿದೆಯೆಲ್ಲ ಎಂಬ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು ಕಾವೇರಿ ನದಿ ಮಲೀನತೆ, ನದಿ ಪಾತ್ರಗಳ ಒತ್ತುವರಿ ತಡೆಯಲು ತಂಡ ರಚಿಸಲಾಗುವುದು ಎಂದು ಹೇಳಿದರು. ವಿಶ್ವ ಜಲದಿನದ ಅಂಗವಾಗಿ ಒಂದು ಒಂದು ವಾರಗಳ ಕಾಲ ಜಲ ಸಂರಕ್ಷಣೆ ಅಭಿಯಾನ ನಡೆಯಲಿದೆ. ನೀರಿನ ದುರ್ಬಳಕೆ ತಡೆಗಟ್ಟಿ, ಸದ್ಬಳಕೆ ಮಾಡುವಂತೆ ಜಾಗೃತಿ ಮೂಡಿಸುವುದೇ ಕಾವೇರಿ ಆರತಿ ಉದ್ದೇಶ.

ಕಾವೇರಿ ಆರತಿ ಆಯೋಜಿಸಲು ಈಗಾಗಲೇ ಹಣ ಮೀಸಲಿಡಲಾಗಿದೆ ಎಂದು ಹೇಳಿದರು. ಜನರು ಆನ್‌ಲೈನ್ ಮೂಲಕ ನೀರನ್ನು ಉಳಿಸುತ್ತೇನೆ ಎಂದು ಪ್ರತಿಜ್ಞೆ ತೆಗೆದುಕೊಂಡು ಸಾಮಾಜಿಕ ಜಾಲತಾಣಗಳಲ್ಲಿ ಪ್ರಚಾರ ಮಾಡಬಹುದು. ಎಲ್ಲಾ ಸಾರ್ವಜನಿಕರು, ರಾಜಕಾರಣಿಗಳು ಇದರಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು. ಸಂಸತ್ ಕ್ಷೇತ್ರಗಳ ಪುನರ್ ವಿಂಗಡಣೆ ವಿರೋಧಿಸಿ ತಮಿಳುನಾಡು ಮುಖ್ಯಮಂತ್ರಿ ಸ್ಟಾಲಿನ್ ಅವರು ಇಂದು ಕರೆದಿರುವ ಸಭೆಯಲ್ಲಿ ನಾನೂ ಭಾಗವಹಿಸುತ್ತೇವೆ ಎಂದರು.

ರಾಜ್ಯಪಾಲರು ಸಹಿ ಹಾಕದಂತೆ ಆಗ್ರಹಿಸಿ ಪ್ರತಿಭಟನೆ

• ಉದಯವಾಹಿನಿ, ಮಂಡ್ಯ

ಉದಯವಾಹಿನಿ ಚಿತ್ರ

ವಕ್ಫ್ ಕಾಯ್ದೆ ತಿದ್ದುಪಡಿಗೆ ರಾಜ್ಯ ಸರ್ಕಾರ ವಿರೋಧ ಮಾಡಿರುವ ನಿರ್ಣಯವನ್ನು ರೈತರ ಹಿತದೃಷ್ಟಿಯಿಂದ ರಾಜ್ಯಪಾಲರು ಅನುಮತಿ ನೀಡಬಾರದು ಎಂದು ಆಗ್ರಹಿಸಿ ಜಿಲ್ಲಾ ವಕ್ಫ್ ಕಾಯ್ದೆ ವಿರೋಧಿ ರೈತ ಒಕ್ಕೂಟ ಮತ್ತು ವಿವಿಧ ರೈತಪರ ಸಂಘಟನೆಗಳ ಕಾರ್ಯಕರ್ತರು ಶುಕ್ರವಾರ ಪ್ರತಿಭಟನೆ ನಡೆಸಿದರು. ಜಿಲ್ಲಾಧಿಕಾರಿ ಕಚೇರಿ ಬಳಿ ಜಮಾವಣೆಗೊಂಡ ಕಾರ್ಯಕರ್ತರು ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯದ ರೈತರು, ಸಮಾಜ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ವಿಧಾನಮಂಡಲದಲ್ಲಿ ರಾಜ್ಯ ಸರ್ಕಾರ ಅಂಗೀಕರಿಸಿದ ನಿರ್ಣಯಕ್ಕೆ ಸಹಿ ಹಾಕದೆ ಹಾಗೂ ಅನುಮೋದಿಸದೆ ರಾಜ್ಯದ ರೈತರ ಬದುಕನ್ನು ಉಳಿಸಬೇಕು ರಾಜ್ಯಪಾಲರಲ್ಲಿ ಮನವಿ ಮಾಡಿದರು.

ವಕ್ಫ್ ಕಾಯ್ದೆಯಿಂದಾಗಿ ರಾಜ್ಯದ ಸಾವಿರಾರು ರೈತರ ಜಮೀನು, ಮಠ-ಮಂದಿರಗಳು, ಸ್ಮಶಾನ, ಸಾರ್ವಜನಿಕ ಆಸ್ತಿ, ಸರ್ಕಾರದ ಆಸ್ತಿ, ಸರ್ಕಾರಿ ಶಾಲೆಗಳು ಹೀಗೆ ಸಮಾಜದ ಎಲ್ಲಾ ವಿಭಾಗಗಳ ಆಸ್ತಿಗಳನ್ನು ವಕ್ಫ್ ಮಂಡಳಿ ಲಂಗುಲಗಾಮಿಲ್ಲದೆ ಕಬಳಿಸುತ್ತಾ ಬರುತ್ತಿದೆ' ಎಂದು ಆರೋಪಿಸಿದರು.

ನಮ್ಮ ರಾಜ್ಯದ ವಿರೋಧ ಪಕ್ಷದವರು ಪ್ರತಿಭಟಿಸಿ, ಸಭಾತ್ಯಾಗ ಮಾಡಿದ್ದರೂ ಕೇವಲ ಮತ ಬ್ಯಾಂಕ್ ಉದ್ದೇಶಕ್ಕಾಗಿ ಮುಸಲ್ಮಾನರನ್ನು ಓಲೈಸಲು ರಾಜ್ಯದಲ್ಲಿ ಕಾಂಗ್ರೇಸ್ ಸರ್ಕಾರ ಈ ನಿರ್ಣಯ ತೆಗೆದುಕೊಂಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪಾಲಹಳ್ಳಿಗೆ ಕಲುಷಿತ ನೀರು ಪೂರೈಕೆ: ಅಧಿಕಾರಿಗಳ ತಂಡ ಭೇಟಿ

ಶ್ರೀರಂಗಪಟ್ಟಣ: ತಾಲ್ಲೂಕಿನ ಪಾಲಹಳ್ಳಿ ಗ್ರಾಮದ ಮನೆಗಳಿಗೆ ಕಲುಷಿತ ನೀರು ಪೂರೈಕೆ ಮಾಡಲಾಗುತ್ತಿದೆ ಎಂಬ ಹಿನ್ನೆಲೆಯಲ್ಲಿ ತಹಶೀಲ್ದಾರ್ ಪರಶುರಾಮ ಸತ್ತಿಗೇರಿ ನೇತೃತ್ವದ ಅಧಿಕಾರಿಗಳ ತಂಡ ಶುಕ್ರವಾರ ಆಯ್ದ ಮನೆಗಳಿಗೆ ತೆರಳಿ ನೀರು ಸರಬರಾಜು ವ್ಯವಸ್ಥೆ ಪರೀಕ್ಷಿಸಿ, ಸಾರ್ವಜನಿಕರಿಂದ ಅಹವಾಲು ಆಲಿಸಿತು. ನಾಲೆ ಮತ್ತು ನದಿಯಿಂದ ನೀರು ಎತ್ತುವಳಿ ಮಾಡುತ್ತಿರುವುದು, ಮನೆಗಳಿಗೆ ಸಬರಾಜು ಮಾಡುತ್ತಿರುವ ಕ್ರಮದ ಬಗ್ಗೆ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯ ಎಇಇ ರಾಮಕೃಷ್ಣಗೌಡ ಮತ್ತು ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ರವಿ ಅವರಿಂದ ಮಾಹಿತಿ ಪಡೆದರು.

ಗ್ರಾಮದಲ್ಲಿ ನೀರು ಶುದ್ದೀಕರಣ ಘಟಕ ವಿದ್ದರೂ ಇಡೀ ಗ್ರಾಮಕ್ಕೆ ಶುದ್ದೀಕರಿಸಿದ ನೀರು ಕೊಡಲು ಆಗುತ್ತಿಲ್ಲ. ಮೂರರ ಪೈಕಿ ಒಂದು ಟ್ಯಾಂಕ್‌ನಲ್ಲಿ

ಉದಯವಾಹಿನಿ ಚಿತ್ರ

ಮಾತ್ರ ಶುದ್ದೀಕರಿಸಿದ ನೀರು ಸಿಗುತ್ತಿದೆ. ಉಳಿದ ಮನೆಗಳಿಗೆ ನದಿ ಮತ್ತು ನಾಲೆಗಳಿಂದ ಎತ್ತುವಳಿ ಮಾಡುವ ಕಚ್ಚಾ ನೀರು ಸರಬರಾಜಾಗುತ್ತಿದೆ.

ಗ್ರಾಮದಲ್ಲಿ ಜೆಜೆಎಂ ಯೋಜನೆ ಕೂಡ ಪ್ರಗತಿಯಲ್ಲಿದ್ದು ಈ ವರ್ಷಾಂತ್ಯದ ಒಳಗೆ ಎಲ್ಲಾ ಮನೆಗಳಿಗೂ ಶುದ್ದೀಕರಿಸಿದ ನೀರು ಸಿಗಲಿದೆ. ಅಲ್ಲಿಯವರೆಗೆ ಜನರು ಕುಡಿಯಲು ಆರ್‌ಒ ಪ್ಲಾಂಟ್‌ಗಳ ನೀರನ್ನು ಬಳಸಬೇಕು ಎಂದು ಪರಶುರಾಮ ಸತ್ತಿಗೇರಿ ಸಲಹೆ ನೀಡಿದರು.

> ಗ್ರಾಮದಲ್ಲಿ ಜೆಜೆಎಂ ಯೋಜನೆ ಪ್ರಗತಿಯಲ್ಲಿದ್ದು, ಮೂರು ಟ್ಯಾಂಕ್‌ಗಳನ್ನು ನಿರ್ಮಿಸಲಾಗಿದೆ. ಅರ್ಧಕ್ಕೂ ಹೆಚ್ಚು ಭಾಗ ಪೈಪ್‌ಲೈನ್ ಕಾಮಗಾರಿ ಆಗಿದೆ. ಉಳಿದ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಿ ಪ್ರತಿ ಮನೆಗಳಿಗೆ ಶುದ್ಧ ಕುಡಿ ಯುವ ನೀರು ಕೊಡಲಾಗುವುದು
> -ರಾಮಕೃಷ್ಣಗೌಡ, ಎಇಇ

ಗ್ರಾಮದ ಕೆಲವರು ಹೆಚ್ಚು ನೀರು ಬರಲಿ ಎಂಬ ಉದ್ದೇಶದಿಂದ ನದಿ ಮತ್ತು ನಾಲೆಯಿಂದ ನೀರು ಎತ್ತುವಳಿ ಮಾಡುವ ಮುಖ್ಯ ಕೊಳವೆಯಿಂದ ನಲ್ಲಿ ಸಂಪರ್ಕ ಪಡೆದಿದ್ದಾರೆ. ಅದರಿಂದಾಗಿ ಕಲುಷಿತ ನೀರು ಬರುತ್ತಿದೆ. ಅದಕ್ಕೆ ತಡೆ ಒಡ್ಡಲಾಗುವುದು ಎಂದು ಪಿಡಿಒ ರವಿ ಹೇಳಿದರು.

ಪಂಚಾಯತಿ ಕಚೇರಿ ತೆರೆಯಲು ಆಗ್ರಹ ಶಾಸಕ ಕಚೇರಿ ಮುಂದೆ ಪ್ರತಿಭಟನೆ

ಉದಯವಾಹಿನಿ ಚಿತ್ರ

• ಉದಯವಾಹಿನಿ, ಮುಳಬಾಗಿಲು

ಗಡೂರು ಗ್ರಾಮದಲ್ಲಿರುವ ಗ್ರಾಮ ಪಂಚಾಯಿತಿ ಕಚೇರಿಯನ್ನು ಮುದಿಗೆರೆಗೆ ಸ್ಥಳಾಂತರಿಸಬೇಕು ಎಂದು ಒತ್ತಾಯಿಸಿ ನಗರದ ಶಾಸಕರ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಯಿತು. ತಾಲ್ಲೂಕಿನ ಮುದಿಗೆರೆ ಗ್ರಾಮದಲ್ಲಿ ಈ ಮೊದಲು ಇದ್ದ ಗ್ರಾಮ ಪಂಚಾಯಿತಿ ಕಚೇರಿಯನ್ನು ಗಡ್ಡೂರಿಗೆ ವರ್ಗಾಯಿಸಲಾಗಿದೆ. ಆದರೆ, ಜನಸಂಖ್ಯೆ ಆಧಾರದ ಮೇಲೆ ಮುದಿಗೆರೆ ಗ್ರಾಮದಲ್ಲಿಯೇ ಪಂಚಾಯಿತಿ ಇರಬೇಕು. ಆದ್ದರಿಂದ ಮುದಿಗೆರೆಗೆ ಮತ್ತೆ ಕಚೇರಿಯನ್ನು ಸ್ಥಳಾಂತರಿಸಬೇಕು ಎಂದು ಆಗ್ರಹಿಸಿ ತಾಲ್ಲೂಕು ಪಂಚಾಯಿತಿ ಕಚೇರಿ ಮುಂದೆ ಕಳೆದ 11 ದಿನಗಳಿಂದ ಅಹೋರಾತ್ರಿ ಧರಣಿ ನಡೆಯುತ್ತಿದೆ. ಧರಣಿಗೆ ಅಧಿಕಾರಿಗಳು ಸ್ಪಂದಿಸದ ಕಾರಣ ಶಾಸಕರ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿದ ಮಾಜಿ ಸಚಿವ ಎಚ್. ನಾಗೇಶ್ ಪ್ರತಿಭಟನೆಗೆ ಬೆಂಬಲ ಸೂಚಿಸಿದರು. ಮುದಿಗೆರೆಗೆ ಪಂಚಾಯಿತಿ ಕಚೇರಿಯನ್ನು ಸ್ಥಳಾಂತರಿಸುವ ಬಗ್ಗೆ ಉನ್ನತ ಮಟ್ಟದಲ್ಲಿ ಪ್ರಯತ್ನಿಸಲಾಗುವುದು ಎಂದರು.

ಮೆಕಾನಿಮ್ ಶ್ರೀನಿವಾಸ್, ಕೀಲುಹೊಳಲಿ ಸತೀಶ್, ಸಂಗಸಂದ್ರ ವಿಜಯ್ ಕುಮಾರ್, ಗ್ರಾಮ ಪಂಚಾಯಿತಿ ಸದಸ್ಯರಾದ ಸಂಪತ್, ಚಿನ್ನಪ್ಪಯ್ಯ, ಅಂಬರೀಶ್, ರಾಜಪ್ಪ, ಗ್ರಾಮಸ್ಥರು, ದಲಿತ ಸಂಘಟನೆಗಳ ಮುಖಂಡರು ಇದ್ದರು.

ಪ್ರಾದೇಶಿಕ ಭಾಷೆಗಳಿಗೆ ಎ.ಐ ಬೆಸುಗೆ

• ಉದಯವಾಹಿನಿ, ಮೈಸೂರು

ಇಲ್ಲಿನ ಭಾರತೀಯ ಭಾಷಾ ಸಂಸ್ಥಾನವು (ಸಿಐಐಎಲ್) ಕೃತಕ ಬುದ್ಧಿಮತ್ತೆ ಆಧಾರಿತ ಐದು ವೆಬ್ ತಂತ್ರಾಂಶಗಳನ್ನು ಅಭಿವೃದ್ಧಿಪಡಿಸಿದ್ದು, ಭಾಷಾಂತರ, ಲಿಪ್ಯಂತರ ಸೇರಿದಂತೆ ವಿವಿಧ ಉದ್ದೇಶಗಳಿಗೆ ನೆರವಾಗಲಿವೆ. ದೇಶದ ಎಲ್ಲಾ ಪ್ರಾದೇಶಿಕ ಭಾಷಿಕರಿಗೆ ಸೇತುವೆಯಾಗಲಿವೆ.'ಅನುವಾದಿಕ', 'ಲಿಪ್ಯಂತರ', 'ಲಿಪಿಧ', 'ಅನುಲೇಖಿಕ', 'ಅನುವಾಚಿಕ' ಎ.ಐ ವೆಬ್ ತಂತ್ರಾಂಶ ಗಳೊಂದಿಗೆ, ಕೃತಕ ಬುದ್ಧಿಮತ್ತೆಯೇತರ 'ಧ್ವನಿ ಪರಿವರ್ತಕ', 'ಅಕ್ಷರಾಂಕ', 'ಶಬ್ದ ಸಂಧಾನ', 'ನುಡಿಯಲಿವಿ', 'ಪಾಠಾಂತರ' ತಂತ್ರಾಂಶಗಳನ್ನು ಬಿಡುಗಡೆ ಮಾಡಲಾಗಿದೆ. .https://medha.ciil.orgನಲ್ಲಿ ಇವು ಸಿಗುತ್ತವೆ. ಪ್ರತಿ ತಂತ್ರಾಂಶದ ಹೆಸರನ್ನು ವೆಬ್ ಬ್ರೌಸರ್‌ಗಳಲ್ಲಿ ಹುಡುಕಾಡಿದರೂ ಸಿಗುತ್ತವೆ.

ಅನುವಾದಿಕ ಭಾಷಾಂತರ ತಂತ್ರಾಂಶವಾಗಿದ್ದು, ಇಂಗ್ಲಿಷ್ ಜೊತೆಗೆ ಎಲ್ಲಾ ಭಾರತೀಯ ಭಾಷೆಗಳ ಪಠ್ಯಗಳನ್ನು ಅನುವಾದಿಸಬಹುದಾಗಿದ್ದು, ಧ್ವನಿಯ ಮೂಲಕವೂ ಪಠ್ಯ ದಾಖಲಿಸಿ ಭಾಷಾಂತರಿಸುವ ಆಯ್ಕೆಯನ್ನೂ ನೀಡಲಾಗಿದೆ. ಎಲ್ಲಾ ಭಾರತೀಯ ಭಾಷಿಕರ ನಡುವಿನ ಅಂತರವನ್ನು ಕೊನೆಗೊಳಿಸಲಿದೆ ಎನ್ನುತ್ತಾರೆ ಸಂಸ್ಥಾನದ ನಿರ್ದೇಶಕ ಪ್ರೊ. ಶೈಲೇಂದ್ರ ಮೋಹನ್. ಲಿಪ್ಯಂತರ ತಂತ್ರಾಂಶವು ಪಠ್ಯವನ್ನು ಒಂದು ಲಿಪಿಯಿಂದ ಮತ್ತೊಂದು ಭಾಷಾ ಲಿಪಿಗೆ ಬದಲಿಸಬಹುದು. ಉರ್ದು, ಕಾಶ್ಮೀರಿ ಭಾಷೆಗಳ ಅರೇಬಿಕ್ ಲಿಪಿ ಹೊರತುಪಡಿಸಿ ದೇಶದ ಬ್ರಾಹ್ಮಿ, ದೇವನಾಗರಿ ಲಿಪಿಗಳನ್ನು ಬಳಸಬಹುದು. ಲಿಪಿಧ ಒಸಿಆರ್ ತಂತ್ರಾಂಶವಾಗಿದ್ದು, ಚಿತ್ರ ಮಾದರಿ ಯಲ್ಲಿರುವ ಪಠ್ಯ ಹಾಗೂ ಕೈ ಬರಹವನ್ನು

ಉದಯವಾಹಿನಿ ಚಿತ್ರ

> ಡಿಜಿಟಲ್ ಇಂಡಿಯಾ ಭಾಗವಾಗಿ ಪ್ರಾದೇಶಿಕ ಭಾಷೆಗಳ ಬೆಳವಣಿಗೆಗೆ ಸಿಐಐಎಲ್ ತಂತ್ರಾಂಶಗಳು ನೆರವಾಗಲಿವೆ. ಭಾಷಾ ಸಮಾನತೆಗೆ ಪ್ರೋತ್ಸಾಹ ನೀಡಲಾಗಿದೆ
> -ಪ್ರೊ.ಶೈಲೇಂದ್ರ ಮೋಹನ್
> ಸಿಐಐಎಲ್ ನಿರ್ದೇಶಕ

ಪಠ್ಯವಾಗಿ ಪರಿವರ್ತಿಸಬಹುದು.

'ಅನುಲೇಖಿಕ' ತಂತ್ರಾಂಶವು ಆಡಿಯೊ ಫೈಲ್‌ಗಳನ್ನು ಪಠ್ಯಗಳಾಗಿ ಬದಲಿಸಿದರೆ, 'ಅನುವಾಚಿಕ' ಪಠ್ಯವನ್ನು ಧ್ವನಿಯಾಗಿ ರೂಪಿಸುವ ತಂತ್ರಾಂಶವಾಗಿದೆ.

ಕೃತಕ ಬುದ್ಧಿಮತ್ತೆ ಯೇತರ ಟೂಲ್ ಆದ 'ಧ್ವನಿ ಪರಿವರ್ತಕ'ವು wav, mp3 ಫೈಲ್‌ಗಳನ್ನು ಬೇರೆ ಬೇಕಾದ ಆಡಿಯೊ ವಿಧಾನಗಳಿಗೆ (ಫಾರ್ಮ್ಯಾಟ್) ಬದಲಿಸಿಕೊಡುತ್ತದೆ. 'ನುಡಿಯಲಿವಿ', 'ಪಾಠಾಂತರ' ತಂತ್ರಾಂಶಗಳು ಧ್ವನಿಯ ಗಾತ್ರ, ಅಂತರವನ್ನು ಹೇಳುತ್ತವೆ. 'ಅಕ್ಷರಾಂಕ'ವು ಪಠ್ಯದಲ್ಲಿನ ಅಕ್ಷರ ಗಳನ್ನು ಯೂನಿಕೋಡ್ ಮಾದರಿಯಲ್ಲಿ (ಕೋಡ್ ವ್ಯಾಲ್ಯೂ) ಬಿಡಿಸಿಕೊಡುತ್ತದೆ. ಪಠ್ಯ ರೂಪಾಂತರಿಸಲು ಪ್ರೋಗ್ರಾಮರ್ ಗಳಿಗೆ ಸಹಾಯವಾಗಲಿದೆ.

ಪರೀಕ್ಷೆ ಬರೆಯಲು ಸಿಗದ ಅವಕಾಶ ವಿದ್ಯಾರ್ಥಿಗಳು-ಪೋಷಕರ ಪ್ರತಿಭಟನೆ

• ಉದಯವಾಹಿನಿ, ಬಂಗಾರಪೇಟೆ

ಹಾಜರಾತಿ ಕೊರತೆಯಿಂದ ಎಸ್‌ಎಸ್‌ಎಸ್‌ಸಿ ಪರೀಕ್ಷೆ ಬರೆಯಲು ಅವಕಾಶ ನೀಡದ ಇಲಾಖೆ ವಿರುದ್ಧ ಪಾಲಕರು ಮತ್ತು ವಿದ್ಯಾರ್ಥಿಗಳು ಕೆಪಿಎಸ್ ಶಾಲೆಯ ಮುಂಭಾಗ ಶುಕ್ರವಾರ ಪ್ರತಿಭಟನೆ ನಡೆಸಿದರು. ತಾಲ್ಲೂಕಿನ ಬೂದಿಕೋಟೆ ಗ್ರಾಮದ ಕೆಪಿಎಸ್ ಶಾಲೆಯಲ್ಲಿ 20ಕ್ಕೂ ಹೆಚ್ಚಿನ ವಿದ್ಯಾರ್ಥಿಗಳಿಗೆ ಹಾಜರಾತಿ ಕೊರತೆಯ ಕಾರಣದಿಂದ ಪರೀಕ್ಷೆ ಬರೆಯಲು ಅವಕಾಶ ನೀಡಿರಲಿಲ್ಲ. ಮುಖ್ಯ ಶಿಕ್ಷಕರು ಹಾಗೂ ತರಗತಿ ಮೇಲ್ವಿಚಾರಕರು ಉದ್ದೇಶ ಪೂರ್ವಕವಾಗಿ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಪ್ರವೇಶ ಪತ್ರ ನೀಡದೆ ಮಕ್ಕಳಿಗೆ ಅನ್ಯಾಯ ಮಾಡಿದ್ದಾರೆ ಎಂದು ಪೋಷಕರು ಆರೋಪಿಸಿದರು.

'ಮಕ್ಕಳು ಶಾಲೆಗೆ ನಿಯಮಿತವಾಗಿ ಬರದೇ ಇದ್ದಿದ್ದರೆ ಮುಂಚೆಯೇ ಪೋಷಕರಿಗೆ ತಿಳಿಸಬೇಕಿತ್ತು. ಅದನ್ನು ಬಿಟ್ಟು ಪರೀಕ್ಷೆಯವರೆಗೂ ಬಿಟ್ಟು ಈಗ ಪ್ರವೇಶ ಪತ್ರ ನೀಡದೇ ಮಕ್ಕಳ ಭವಿಷ್ಯದೊಂದಿಗೆ ಆಟವಾಡಿದ್ದಾರೆ. ಉದ್ದೇಶಪೂರ್ವಕವಾಗಿಯೇ ಈ ಕೃತ್ಯ ಎಸಗಲಾಗಿದೆ. ಇದು ಶಿಕ್ಷಕರ ಕುತಂತ್ರ. ಬೇಕಾದರೆ ಶಾಲೆಯ ಸಿಸಿ ಕ್ಯಾಮರಾ ಮತ್ತು ಹಾಜರಾತಿ ಪುಸ್ತಕವನ್ನು ತಾಳೆ ಮಾಡಿ ನೋಡಲಿ ಎಂದು ಕೆಲ ಪೋಷಕರು ಆಕ್ರೋಶ ವ್ಯಕ್ತಪಡಿಸಿದರು. ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಶಾಲೆಯ ಗೇಟಿನ ಮುಂಭಾಗ ಮಕ್ಕಳು, ಪೋಷಕರು ಪ್ರತಿಭಟನೆ ನಡೆಸಿ ಪರೀಕ್ಷೆಗೆ ಕೂರಲು ಅವಕಾಶ ಕಲ್ಪಿಸಬೇಕೆಂದು ಒತ್ತಾಯ ಮಾಡಿದರೂ ಪರೀಕ್ಷೆ ಬರೆಯಲು ಮಕ್ಕಳಿಗೆ ಸಾಧ್ಯವಾಗಲಿಲ್ಲ. ಮುಖ್ಯ ಶಿಕ್ಷಕ ರಾಮಕೃಷ್ಣ, ಇದು ಕರ್ನಾಟಕ ಪರೀಕ್ಷಾ ಮಂಡಳಿಯ ನಿರ್ಧಾರ. ನಿಮ್ಮ ಮಕ್ಕಳು ಶಾಲೆಗೆ ಸರಿಯಾಗಿ ಬರುತ್ತಿಲ್ಲ ಎಂದು ಹಲವು ಬಾರಿ ಮಾಹಿತಿ ನೀಡಿದ್ದೇವೆ. ಹಾಜರಾತಿ ಪ್ರಮಾಣ ಕಡಿಮೆ ಇರುವುದರಿಂದ ಪರೀಕ್ಷೆ ಬರೆಯಲು ಸಾಧ್ಯವಿಲ್ಲ ಎನ್ನುವ ಮಾಹಿತಿ ಕಳಿಸಲಾಗಿದೆ. ಜೂನ್ ತಿಂಗಳಿನಲ್ಲಿ ನಡೆಯುವ ಪರೀಕ್ಷೆ ಬರೆಯಲು ಮಕ್ಕಳಿಗೆ ಅವಕಾಶ ನೀಡಲಾಗುತ್ತದೆ ಎಂದು ಹೇಳಿದರು.

ಸಹಕಾರ ಸಚಿವರ ಪರ ಜೆಡಿಎಸ್, ಬಿಜೆಪಿ ಬ್ಯಾಟಿಂಗ್

• ಉದಯವಾಹಿನಿ, ಕುಣಿಗಲ್

ತಾಲ್ಲೂಕಿನ ಸಹಕಾರ ಕ್ಷೇತ್ರದ ಪ್ರಗತಿಗೆ ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರ ಅಸಹಕಾರದ ಬಗ್ಗೆ ಸದನದಲ್ಲಿ ಶಾಸಕ ಡಾ. ರಂಗನಾಥ್ ಆರೋಪಕ್ಕೆ ಡಿಸಿಸಿ ಬ್ಯಾಂಕ್ ನಿರ್ದೇಶಕ

ಅಂತರಾಳದಿಂದ... EDITORIAL

ಮರಕ್ಕೆ ಕಟ್ಟಿ ಮಹಿಳೆಗೆ ಹಲ್ಲೆ: ಉಡುಪಿ ಉತ್ತರ ಪ್ರದೇಶವಾಗುತ್ತಿದೆಯೇ?

ಮೀನು ಕದ್ದ ಆರೋಪದಲ್ಲಿ ದಲಿತ ಮಹಿಳೆಯೊಬ್ಬರನ್ನು ಗುಂಪೊಂದು ಮರಕ್ಕೆ ಕಟ್ಟಿ ಹಲ್ಲೆ ನಡೆಸಿದ ಘಟನೆ ಮಲ್ಪೆ ಬಂದರಿನಲ್ಲಿ ನಡೆದಿದೆ. ಈ ಅನಾಗರಿಕ ಕೃತ್ಯ ರಾಜ್ಯಮಟ್ಟದಲ್ಲಿ ಚರ್ಚೆಯಾಗುತ್ತಿದ್ದು, ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಭರವಸೆಯನ್ನು ನೀಡಿದ್ದಾರೆ. ಎಲ್ಲೋ ಉತ್ತರ ಭಾರತದಲ್ಲಿ ವರದಿಯಾಗುತ್ತಿದ್ದ ಕೃತ್ಯಗಳಿಗೆ ಇತ್ತೀಚಿನ ದಿನಗಳಲ್ಲಿ ಕರ್ನಾಟಕ ಅದರಲ್ಲೂ ಬುದ್ಧಿವಂತರ ಜಿಲ್ಲೆ ಎಂದು ಗುರುತಿಸಲ್ಪಡುವ ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆ ಸುದ್ದಿಯಾಗುತ್ತಿರುವುದು ನಿಜಕ್ಕೂ ಕಳವಳಕಾರಿಯಾಗಿದೆ. ಕಾನೂನು ಸುವ್ಯವಸ್ಥೆ ಅಭಿವೃದ್ಧಿ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲೂ ಉತ್ತರ ಭಾರತಕ್ಕೆ ಮಾದರಿಯಾಗಿದ್ದ ಕರ್ನಾಟಕವು ಇತ್ತೀಚಿನ ದಿನಗಳಲ್ಲಿ, ಉತ್ತರ ಭಾರತದ ಅನಿಷ್ಟಗಳನ್ನು ಮಾದರಿಯಾಗಿಸಿಕೊಳ್ಳಲು ಮುಂದಾಗುತ್ತಿದೆಯೇ ಎಂದು ನಾಗರಿಕರೆನಿಸಿಕೊಂಡವರು ಅನುಮಾನ ಪಡುವಂತಾಗಿದೆ. ಉಡುಪಿಯಲ್ಲಿ ಹಲ್ಲೆಗೀಡಾಗಿರುವ ಸಂತ್ರಸ್ತ ಮಹಿಳೆ ನಮ್ಮದೇ ರಾಜ್ಯದ ವಿಜಯನಗರ ಜಿಲ್ಲೆಯವರು. ಜೊತೆಗೆ ದಲಿತ ಸಮುದಾಯಕ್ಕೆ ಸೇರಿದವರಾಗಿದ್ದಾರೆ. ಮಾ. 18ರಂದು ಬೋಟ್‌ನಿಂದ ಮೀನುಖಾಲಿ ಮಾಡುವ ಸಂದರ್ಭದಲ್ಲಿ ಒಂದು ಬುಟ್ಟಿ ಮೀನನ್ನು ಕದ್ದೊಯ್ದಿದ್ದಾಳೆ ಎನ್ನುವುದು ಈಕೆಯ ಮೇಲಿರುವ ಆರೋಪ. ಆಕೆ ಕದ್ದೊಯ್ದಿರುವುದು ನಿಜವೇ ಆಗಿದ್ದರೂ, ಸಾರ್ವಜನಿಕವಾಗಿ ಆಕೆಯನ್ನು ಮರಕ್ಕೆ ಕಟ್ಟಿ ಹಾಕಿ ಥಳಿಸಿರುವುದು ಎಷ್ಟು ಸರಿ ಗುಂಪುಗೂಡಿ ಜನರೇ ನ್ಯಾಯವನ್ನು ನಿರ್ಧರಿಸುವುದು, ಮರಕ್ಕೆ ಕಟ್ಟಿ ಹಾಕಿ ಥಳಿಸುವ ಸಂಸ್ಕೃತಿ ಅವಿಭಜಿಕ ದಕ್ಷಿಣ ಕನ್ನಡ ಜಿಲ್ಲೆಗೆ ತೀರಾ ಅಪರಿಚಿತವಾದುದು. ಉತ್ತರ ಭಾರತಕ್ಕೆ ಸೀಮಿತವಾಗಿದ್ದ ಇಂತಹ ಕೃತ್ಯಗಳು ಕರಾವಳಿಗೆ ಕಾಲಿಟ್ಟಿರುವುದು ನಿಜಕ್ಕೂ ಆತಂಕಕಾರಿಯಾಗಿದೆ. ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇಂತಹ ಅನಾಗರಿಕ ಕೃತ್ಯಗಳು ಇದೇ ಮೊದಲ ಬಾರಿ ನಡೆದಿರುವುದೇನು ಅಲ್ಲ. ನಾಗರಿಕ ಸಮಾಜ ಬೆಚ್ಚಿ ಬೀಳಿಸುವ ಇಂತಹ ಗುಂಪು ದಾಂಧಲೆಗಳು ಈ ಹಿಂದೆಯೂ ನಡೆದಿದ್ದವಾದರೂ ಸಂಘಪರಿವಾರ ಅವುಗಳನ್ನು ಮುಚ್ಚಿ ಹಾಕುವಲ್ಲಿ ಯಶಸ್ವಿಯಾಗಿದ್ದವು. ಹಲವು ವರ್ಷಗಳ ಹಿಂದೆ, ಇದೇ ಉಡುಪಿಯಲ್ಲಿ ಹಾಜಬ್ಬ ಮತ್ತು ಹಸನಬ್ಬ ಎಂಬ ಇಬ್ಬರನ್ನು ಬೆತ್ತಲೆಗೊಳಿಸಿ ಥಳಿಸಿದ ಕಾರಣಕ್ಕಾಗಿ ರಾಷ್ಟ್ರಮಟ್ಟದಲ್ಲಿ ಉಡುಪಿ ಜಿಲ್ಲೆ ಸುದ್ದಿಯಾಗಿತ್ತು. ಈ ಕೃತ್ಯದ ವಿರುದ್ಧ ಸಾರ್ವಜನಿಕರು ಪ್ರತಿಭಟನೆ ನಡೆಸಿದಾಗ ಕೆಲವು ಸಂಘಟನೆಗಳು ಆರೋಪಿಗಳನ್ನು ಬೆಂಬಲಿಸಿ ಪ್ರತಿ ಸಮಾವೇಶವನ್ನು ಹಮ್ಮಿಕೊಂಡಿದ್ದವು. ವಿಪರ್ಯಾಸವೆಂದರೆ, ಆ ಕೃತ್ಯದಲ್ಲಿ ಆರೋಪಿಯಾಗಿ ಗುರುತಿಸಲ್ಪಟ್ಟಿದ್ದ ಸಂಘಪರಿವಾರ ಮುಖಂಡ ಇಂದು ಅದೇ ಉಡುಪಿಯ ಶಾಸಕರಾಗಿ, ಕೃತ್ಯವನ್ನು ಖಂಡಿಸುತ್ತಿದ್ದಾರೆ.

> **ಕಳೆದ ವರ್ಷ ಬೆಳಗಾವಿಯ ಬೈಲಹೊಂಗಲ ತಾಲ್ಲೂಕಿನಲ್ಲಿ ಮಹಿಳೆಯೊಬ್ಬರನ್ನು ಸಮಾರು 20 ಜನರು ಸೇರಿ ಅರಬೆತ್ತಲೆಗೊಳಿಸಿ ಥಳಿಸಿದ್ದರು. ಆರೋಪಿಗಳಲ್ಲಿ ಸ್ಥಳೀಯ ಗ್ರಾಮಪಂಚಾಯತ್ ಸದಸ್ಯ ಕೂಡ ಸೇರಿದ್ದ ಜಮೀನು ಒತ್ತುವರಿ ಪ್ರಶ್ನಿಸಿ ಮಹಿಳೆ ಕೋರ್ಟು ಮೆಟ್ಟಿಲು ಹತ್ತಿರುವುದೇ ಥಳಿತಕ್ಕೆ ಕಾರಣವಾಗಿತ್ತು. ಈ ಸಂಬಂಧ ಪೊಲೀಸರು ಕೂಡ ದೂರು ದಾಖಲಿಸಲು ಹಿಂಜರಿದಿದ್ದರು. ಪ್ರಕರಣ ಬೆಳಕಿಗೆ ಬಂದು ರಾಜ್ಯ ಮಟ್ಟದಲ್ಲಿ ಚರ್ಚೆಯಾಗುತ್ತಿದ್ದಂತೆಯೇ ಪೊಲೀಸರು ಎಚ್ಚೆತ್ತುಕೊಂಡು ಆರೋಪಿಗಳ ವಿರುದ್ಧ ದೂರು ದಾಖಲಿಸಿದರು.**

ಇದೇ ಉಡುಪಿ ಜಿಲ್ಲೆಯಲ್ಲಿ ದನದ ವ್ಯಾಪಾರ ಮಾಡುತ್ತಿದ್ದ ಪ್ರವೀಣ್ ಪೂಜಾರಿ ಎಂಬಾತನನ್ನು ಸಂಘಪರಿವಾರದ ದುಷ್ಕರ್ಮಿಗಳ ಗುಂಪೊಂದು ಥಳಿಸಿ ಕೊಂದು ಹಾಕಿತ್ತು. ಆತ ಯಾವುದೇ ದನವನ್ನು ಅಕ್ರಮವಾಗಿ ಅಥವಾ ಕದ್ದು ಮಾರಾಟ ಮಾಡಿರಲಿಲ್ಲ. ಆತ ದನದ ವ್ಯಾಪಾರ ಮಾಡಿ ಜೀವನ ನಡೆಸುತ್ತಿದ್ದುದೇ ಮಹಾ ಅಪರಾಧವಾಯಿತು. ಈತನನ್ನು ದುಷ್ಕರ್ಮಿಗಳ ಗುಂಪು ಸಾರ್ವಜನಿಕವಾಗಿ ಕಬ್ಬಿಣದ ರಾಡುಗಳು, ಮಾರಕಾಯುಧಗಳಿಂದ ಥಳಿಸಿ ಕೊಲೆಗೈದಿತ್ತು. ಬಿಹಾರದಲ್ಲಿ ಉತ್ತರ ಪ್ರದೇಶದಲ್ಲಿ ನಡೆಯುವ ಇಂತಹ ಬರ್ಬರ ಕೃತ್ಯವನ್ನು ಕೆಲವು ಬಿಜೆಪಿ ಮುಖಂಡರೇ ಹಿಂದುತ್ವದ ಹೆಸರಿನಲ್ಲಿ ಗೋರಕ್ಷಣೆಯ ಹೆಸರಿನಲ್ಲಿ ಸಮರ್ಥಿಸಿಕೊಂಡಿದ್ದರು. ಪೊಲೀಸರ ಕುಮ್ಮಕ್ಕು ಕೂಡ ಇವರಿಗಿತ್ತು. ಹಾಗೆಯೇ ಇದೇ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪೊಲೀಸರೇ ಕೆಲವು ದುಷ್ಕರ್ಮಿಗಳ ಜೊತೆಗೆ ದನದ ವ್ಯಾಪಾರಿಯನ್ನು ಕೊಂದು ಹಾಕಿ ಕಾಡಿನಲ್ಲಿ ಎಸೆದ ಪ್ರಕರಣ ರಾಜ್ಯ ಮಟ್ಟದಲ್ಲಿ ಸುದ್ದಿಯಾಗಿತ್ತು. ಇಲ್ಲಿನ ಕೋಮುಗಲಭೆ, ಕೋಮುದ್ವೇಷಗಳು ನಿಧಾನಕ್ಕೆ ಗುಂಪು ಥಳಿತ, ಗುಂಪು ಹತ್ಯೆಗಳ ರೂಪದಲ್ಲಿ ವಿಸ್ತೃತಗೊಳ್ಳುತ್ತಿವೆ. ಇದೀಗ ಅದು ದಲಿತ ಮಹಿಳೆಯೊಬ್ಬಳನ್ನು ಸಾರ್ವಜನಿಕವಾಗಿ ಮರಕ್ಕೆ ಕಟ್ಟಿ ಹಲ್ಲೆ ನಡೆಸುವ ಹಂತಕ್ಕೆ ತಲುಪಿದೆ. ಹಿಂದೆಲ್ಲ ಗೋಮಾಂಸ, ಗೋಸಾಗಾಟದ ಹೆಸರಿನಲ್ಲಿ ದಾಳಿಗಳು ನಡೆದಿದ್ದರೆ ಈಗ ಮೀನಿನ ಹೆಸರಿನಲ್ಲಿ ಹಲ್ಲೆ ನಡೆದಿದೆ. ಇಲ್ಲಿ ಮಹಿಳೆ ದಲಿತ ಸಮುದಾಯಕ್ಕೆ ಸೇರಿದವಳು ಮಾತ್ರವಲ್ಲ ಹೊರ ಜಿಲ್ಲೆಗೆ ಸೇರಿದ್ದಾಳೆ ಎನ್ನುವ ಹಗುರ ಭಾವನೆಯೇ ಜನರಿಂದ ಇಂತಹ ಕೃತ್ಯವನ್ನು ಎಸಗುವಂತೆ ಮಾಡಿದೆ. ಬಿಜಾಪುರ, ಬೆಳಗಾವಿಯಂತಹ ಜಿಲ್ಲೆಗಳಿಂದ ಬಂದ ಕೂಲಿ ಕಾರ್ಮಿಕರ ಜೊತೆಗೆ ದಕ್ಷಿಣ ಕನ್ನಡ ಜಿಲ್ಲೆಯ ಬುದ್ಧಿವಂತ ಜನರು ಕೇವಲವಾಗಿ ನಡೆದುಕೊಳ್ಳುತ್ತಿರುವ ಆರೋಪ ಇಂದು ನಿನ್ನೆಯದಲ್ಲ, ಹೊರ ರಾಜ್ಯಗಳಿಂದ, ಹೊರ ಜಿಲ್ಲೆಗಳಿಂದ ಬಂದ ಕೂಲಿ ಕಾರ್ಮಿಕರು ಕಳವು ಸೇರಿದಂತೆ ದುಷ್ಕೃತ್ಯಗಳಲ್ಲಿ ಭಾಗವಹಿಸುತ್ತಿರುವ ಬಗ್ಗೆ ಸ್ಥಳೀಯರಿಗೆ ಅನುಮಾನ, ಶಂಕೆಗಳಿವೆ. ಹಾಗೆಂದು, ಯಾರೋ ಒಬ್ಬನ ಮೇಲೆ ಕಳವು ಆರೋಪ ಹೊರಿಸಿ ಮರಕ್ಕೆ ಕಟ್ಟಿ ಹಲ್ಲೆ ನಡೆಸುವುದು ಅರಾಜಕತೆಗೆ ಕಾರಣವಾಗಬಹುದು. ಮಲ್ಪೆ ಬಂದರಿನಲ್ಲಿ ಆವೇಶ, ಸಿಟ್ಟಿಗೆ ಬಲಿಯಾಗಿ ಮಹಿಳೆಯ ಮೇಲೆ ಹಲ್ಲೆ ನಡೆಸಿದವರು ಕೂಡ ಮೀನುಗಾರ ಸಮುದಾಯಕ್ಕೆ ಸೇರಿದ ಶ್ರಮಜೀವಿ ಮಹಿಳೆಯರೇ ಆಗಿದ್ದಾರೆ. ಇತ್ತೀಚಿನ ದಿನಗಳಲ್ಲಿ ಸಾರ್ವಜನಿಕವಾಗಿ ಮಹಿಳೆಯರನ್ನು ಬೆತ್ತಲೆಗೊಳಿಸಿ ಹಲ್ಲೆ ನಡೆಸುವುದು, ಮರಕ್ಕೆ ಕಟ್ಟಿ ಹಲ್ಲೆ ನಡೆಸುವ ಪ್ರಕರಣಗಳು ಹೆಚ್ಚುತ್ತಿವೆ. ಗ್ರಾಮೀಣ ಪ್ರದೇಶದಲ್ಲಿ ಕೆಳಜಾತಿಗೆ ಸೇರಿದ ಮಹಿಳೆ ಸಾರ್ವಜನಿಕವಾಗಿ ಯಾವುದೇ ವಿಷಯಗಳ ವಿರುದ್ಧ ಧ್ವನಿಯೆತ್ತಿದರೆ ಆಕೆಯನ್ನು ಬಾಯಿ ಮುಚ್ಚಿಸಲು ಇಡೀ ಊರು ಒಂದಾಗಿ ಆಕೆಯನ್ನು ಅರೆಬೆತ್ತಲೆಯಾಗಿಸಿ ಮರಕ್ಕೆ ಕಟ್ಟಿ ಹಾಕಿ ಥಳಿಸುವ ಪ್ರಕರಣಗಳು ರಾಜ್ಯದಲ್ಲೂ ಹೆಚ್ಚುತ್ತಿವೆ. ಇಂತಹ ಹೆಚ್ಚಿನ ಪ್ರಕರಣಗಳಲ್ಲಿ ಪುರುಷ ಪ್ರಾಬಲ್ಯ ಮನಸ್ಥಿತಿ ಕೆಲಸ ಮಾಡುತ್ತಿರುತ್ತದೆ. ಪೊಲೀಸರು ಕೂಡ ದುಷ್ಕರ್ಮಿಗಳ ಪರವಾಗಿರುವುದರಿಂದ, ಇಲ್ಲಿ ಸಂತ್ರಸ್ತರಿಗೆ ನ್ಯಾಯ ಸಿಗುವುದು ಅಪರೂಪ ಪ್ರಕರಣ ಬೆಳಕಿಗೆ ಬಂದು, ರಾಜ್ಯಮಟ್ಟದಲ್ಲಿ ಚರ್ಚೆಯಾಗುವವರೆಗೆ ಪೊಲೀಸರು ಎಚ್ಚರಗೊಳ್ಳುವುದಿಲ್ಲ.



• ಹಿಂದಿನ ಸಂಚಿಕೆಯಿಂದ 78 ನೆಯ ಅಧ್ಯಾಯ

ನೀನು ಏಕೆ ಹರ್ಷಪಡದೆ ಇದ್ದೀಯೆ ನೂರು ಸಲಾಕಿಗಳಿಂದ ನಿರ್ಮಿತವಾದ ಚಿನ್ನದ ಕಾವುಳ್ಳ ಶ್ವೇತಚ್ಛತ್ರದ ನೆಳಲಲ್ಲಿ ಬರುವಂಥ ನಿನ್ನ ಮುಖವು ಈಗ ಏಕೆ ಸತ್ತಿಗೆಯಿಲ್ಲದೆ ಕಾಂತಿಗುಂದಿದೆ ಚಂದ್ರನಂತೆಯೂ ಹಂಸಪಕ್ಷಿಯಂತೆಯೂ ಅತ್ಯಂತ ಬಿಳುಪಾದ ಚಾಮರಗಳಿಂದ ಎರಡು ಪಾರ್ಶ್ವಗಳಲ್ಲಿಯೂ ಬೀಸಲ್ಪಡುವಂಥ ನಿನ್ನ ಮುಖಕಮಲವು ಈಗ ಏಕೆ ಚಾಮರಗಳಿಲ್ಲದೆ ಬಾಡಿದೆ ನಿನ್ನ ಮುಂದುಗಡೆಯಲ್ಲಿ ಅನೇಕ ನುಡಿಜಾಣ್ಮಯುಳ್ಳ ಮಂಗಳವಾರಕರು ಸ್ತೋತ್ರಪಾಠಗಳನ್ನು ಹೇಳಿಕೊಂಡು ಬರುತ್ತಿಲ್ಲವೇಕೆ ವೇದಪಾಠಕರಾದ ಬ್ರಾಹ್ಮಣೋತ್ತಮರು ಮೊಸರು ಜೇನುತುಪ್ಪ ಮಂತ್ರಾಕ್ಷತೆ ಧೂಪಗಳನ್ನು ವೇದೋಕ್ತಮಂತ್ರಗಳಿಂದ ನಿನ್ನ ಶಿರಸ್ಸಿನಲ್ಲಿ ಸೇಸೆಯನ್ನಿಕ್ಕಿ ಏಕೆ ಹರಸುತ್ತಿಲ್ಲ ನೀನು ಅರಮನೆಯಿಂದ ಹೊರಟೆಯಾದರೆ ಅನೇಕ ಪ್ರಧಾನಿಗಳೂ ಪರಿಜನ ಪುರಜನರೂ ನಿನ್ನ ಹಿಂದೆ ನಡೆಯುತ್ತಿದ್ದರಲ್ಲ ಈಗ ಯಾವ ಕಾರಣದಿಂದ ಅವರು ಯಾರೂ ಬರಲಿಲ್ಲ ರತ್ನಖಚಿತವಾದ ಭೂಷಣಗಳಿಂದ ಅಲಂಕರಿಸಲ್ಪಟ್ಟ ವಾಯುವೇಗವುಳ್ಳ ನಾಲ್ಕು ಕುದುರೆಗಳನ್ನು ಕಟ್ಟಿರುವ ರಥವು ನಿನ್ನ ಮುಂದುಗಡೆಯಲ್ಲಿ ಏಕೆ ಬರಲಿಲ್ಲ ಸುವರ್ಣಮಯವಾದ ಘಂಟೆಗಳು ಗಂಧಾನುಲೇಪ ಮೊದಲಾದ ಅಲಂಕಾರವುಳ್ಳದ್ದಾಗಿ ಕಾಲಮೇಘಕ್ಕೆ ಸರಿಯಾದ ಪಟ್ಟದಾನೆಯು ಯಾವ ಕಾರಣದಿಂದ ನಿನ್ನ ಸಂಗಡ ಬರಲಿಲ್ಲ ಸುವರ್ಣಮಯವಾದ ಭದ್ರಾಸನವು ಎಲ್ಲಿ ನಿನ್ನ ಪಟ್ಟಾಭಿಷೇಕವು ಸಮೀಪಿಸಿದ ಸಮಯದಲ್ಲಿ ನಿನ್ನ ಮುಖಾರವಿಂದವು ಏಕೆ ಹರ್ಷಗುಂದಿದೆ ಎಂದು ಹಂಬಲಿಸುತ್ತ ಕೇಳಿದಳು.

ಶ್ರೀರಾಮನು ಆ ದೇವಿಯನ್ನು ಕುರಿತು ಸೀತೆ, ಲೋಕಪ್ರಸಿದ್ಧವಾದ ಇಕ್ಷ್ವಾಕುವಂಶದಲ್ಲಿ ಹುಟ್ಟಿದ ದಶರಥರಾಯನು ನನ್ನನ್ನು ವನವಾಸಕ್ಕೆ ಕಳುಹಿಸಿದನು. ದಶರಥರಾಯನು ಪೂರ್ವದಲ್ಲಿ ದೇವಾಸುರ ಯುದ್ಧದಲ್ಲಿ ದೇವತೆಗಳಿಗೆ ಸಹಾಯವಾಗಿ ಹೋಗಿ ಗಾಯವಡೆದು ಮೂರ್ಛಿತನಾಗಿದ್ದ ಸಮಯದಲ್ಲಿ ಕೈಕೇಯಿದೇವಿಯು ಆತನನ್ನು ರಕ್ಷಿಸಿದಳಂತೆ. ಆಗ ದಶರಥರಾಯನು ಆ ದೇವಿಗೆ ಎರಡು ವರಗಳನ್ನು ಕೊಟ್ಟನಂತೆ. ಈಗ ಕೈಕೇಯಿಯಾದೇವಿಯು ಒಂದು ವರದಿಂದ ನಾನು ಹದಿನಾಲ್ಕು ವರುಷಗಳು ವನವಾಸಕ್ಕೆ ತೆರಳುವಂತೆಯೂ, ಮತ್ತೊಂದು ವರದಿಂದ ಭರತನಿಗೆ ಪಟ್ಟಾಭಿಷೇಕ ವಾಗುವಂತೆಯೂ ಬೇಡಿಕೊಳ್ಳಲು ದಶರಥರಾಯನು ಕೊಟ್ಟ ಮಾತಿಗೆ ತಪ್ಪಿದರೆ ತನ್ನ ಸತ್ಯಕ್ಕೆ ಹಾನಿಬರುವುದೆಂಬ ಭಯದಿಂದ ಆ ದೇವಿಯ ಮಾತನ್ನಂಗೀಕರಿಸಿದನು. ಭರತನಿಗೆ ಪಟ್ಟಾಭಿಷೇಕ ಮಾಡುವುದಕ್ಕಾಗಿ ನನ್ನನ್ನು ವನಕ್ಕೆ ಕಳುಹಿಸಿದನು. ಇದೇ ನಡೆದ ವೃತ್ತಾಂತ. ವನವನ್ನೆ ದುತ್ತೇನೆ. ನೀನು ಬುದ್ಧಿವಂತೆಯಾಗಿ ಸಾವಧಾನದಲ್ಲಿ ಕಾಲಗತಿಯನ್ನರಿತು ಭರತನ

ಮುಂದುವರಿಯುವುದು...

ವಿಶ್ವಾಸ್.ಡಿ.ಗೌಡ
● ಉದಯವಾಹಿನಿ, ವಿಶೇಷ

ಸೊಬಗು

ಸೊಬಗು ಇದು ಗೀತಾ ಕುಮಾರಿ ಅವರ ಕವನ ಸಂಕಲನ. ಈ ಕವನ ಸಂಕಲನಕ್ಕೆ ಕವಿ ರುಕ್ಷ ಬಳಗದ ಪ್ರಧಾನ ಸಂಚಾಲಕರಾದ ಡಾ. ಪಕೀರಪ್ಪ ತಾಳಗುಂದ ಅವರು ಮುನ್ನುಡಿಯನ್ನು ಬರೆದಿದ್ದಾರೆ. ದಾವಣಗೆರೆಯ ಪೃಥ್ವಿ ಪ್ರಕಾಶನ ಅವರಿಂದ ಪ್ರಕಟಣೆಗೊಂಡಿದೆ.

ಕೃತಿಯಲ್ಲಿರುವ ಮಾಹಿತಿಗಳು:- ಈ ಕೃತಿಯಲ್ಲಿ ಸುಮಾರು 73 ಕವನಗಳಿವೆ. ಇಲ್ಲಿರುವ ಪ್ರತಿಯೊಂದು ಕವನವು ಪರಿಸರಕ್ಕೆ ಸಂಬಂಧಿಸಿದ ಕವನಗಳ ಆಗಿವೆ. ಕವಯತ್ರಿಯರ ಧರಣಿಪ್ರಿಯೆ ಅವರು ತಮ್ಮ ಸುತ್ತಮುತ್ತಲು ಕಾಣುವ ಪರಿಸರವನ್ನು ತಮ್ಮದೇಯಾದ ಆಯಾಮಗಳಲ್ಲಿ ವರ್ಣಿಸಿದ್ದಾರೆ.

ಪ್ರಕೃತಿ ಸೌಂದರ್ಯವನ್ನು ನಾವು ಬರಿ ಕಣ್ಣಿನಲ್ಲಿ ನೋಡಿ ಆನಂದಕ್ಕಿಂತ ಕವನದಲ್ಲಿ ಆನಂದಿಸಬೇಕು ಎಂದು ಲೇಖಕರು ತಮ್ಮ ಕವನಗಳಲ್ಲಿ ವ್ಯಕ್ತಪಡಿಸಿದ್ದಾರೆ. ಇಲ್ಲಿರುವ ಪ್ರತಿಯೊಂದು ಕವನಗಳು ಪ್ರಕೃತಿಗೆ ಸಂಬಂಧಿಸಿದ ಕವನಗಳ ಆಗಿವೆ. ಕವಯತ್ರಿಯ ಸುತ್ತಮುತ್ತಲಿನ ಪರಿಸರವನ್ನು ತಮ್ಮದೇಯಾದ ವಾಸ ಆಯಾಮದಲ್ಲಿ ವಿಸ್ಮಯಕಾರಿಯಾಗಿ ವರ್ಣಿಸುತ್ತಾ ಸುಂದರ ಕವನಗಳನ್ನು ಈ ಪುಸ್ತಕದಲ್ಲಿ ಬರೆದಿದ್ದಾರೆ. ಇಲ್ಲಿರುವ ಪ್ರತಿಯೊಂದು ಸಾಲುಗಳು ಪ್ರಕೃತಿ ದೇವತೆಯ ಪಾದಗಳಿಗೆ ಶರಣು ಹೇಳುತ್ತಿವೆ. ಪ್ರಕೃತಿಮಾತೆಯ ಸೌಂದರ್ಯವನ್ನು ಮನಮುಟ್ಟುವ ಹಾಗೆ ವರ್ಣಿಸಿದ್ದಾರೆ.

ನನ್ನ ಹೆತ್ತವ್ವ ಕವನದಲ್ಲಿ ಪ್ರತಿಯೊಂದು ಹುಟ್ಟಿನ ಬಗ್ಗೆ, ತಾಯಿಯ ಅನನ್ಯ ಮಮತೆ, ಜವಾಬ್ದಾರಿಯುತ ಕಾಯಕದಲ್ಲಿ ನವಮಾಸ ನನ್ನ ಹೊತ್ತು ಎಂಬುದಾಗಿ ಒಂಬತ್ತು ತಿಂಗಳು ತಾಯಿ ಪಡುವ ನೋವು ನಲಿವನ್ನ ಹಂಚಿಕೊಂಡಿದ್ದಾರೆ. ಇಬ್ಬನಿಯ ತಬ್ಬಿರಲು, ಮೇದಿನಿ, ತರಣಿಯ ಜೊತೆ ಬಾನು ಬುವಿಯ ನಡುವಿನ ಅವಿನಾಭಾವದ ನೆನಹುಗಳನ್ನು ಕವಿತೆಯಲ್ಲಿ ಮೂಡಿಸಿದ್ದಾರೆ. ಮಹಿಳಾ ಸಾಹಿತ್ಯವನ್ನು ಹುಟ್ಟು ಹಾಕಿದ ಮೊದಲ ವಚನಗಾರ್ತಿ ಅಕ್ಕ ಮಹಾದೇವಿಯವರ ಸಾಲಿನಲ್ಲಿ ನಡೆದುಬಂದ ಮಹಿಳಾ ಸಾಹಿತಿಗಳಾದ ಸಂಚಿ ಹೊನ್ನಮ್ಮ, ತ್ರಿವೇಣಿ, ನಿರುಪಮಾ, ಶ್ರೀಮತಿ ಕಮಲ ಹಂಪನಾ, ಹೆಚ್.ಜಿ ರಾಧ ಮುಂತಾದವರ ನೆರಳಲ್ಲಿ ಬಂದ ಹಲವು ಮಹಿಳಾ ಕವಯತ್ರಿಯರ ಸಾಲಿನಲ್ಲಿ ಬೆಳೆಯಲೆಂದು ಹಾರೈಸುವೆ. ತಲ, ಶರ ಪರಿವರ್ಧಿನಿ ಚತುಶ್ರಲಯದಲ್ಲಿ ಸರಾಗವಾಗಿ ಛಂದಸ್ಸನ್ನು ಬಳಸಿ ಕವಿತೆ ಕಟ್ಟುವುದರಲ್ಲಿ ಯಶವನ್ನು ಕಂಡಿದ್ದಾರೆ.

ನಟನೆಯಲ್ಲು, ಓದುವುದರಲ್ಲು ಮುಂಚೂಣಿಯಲ್ಲಿರುವ ಇವರು ಇನ್ನೂ ಗಟ್ಟಿ ಸಾಹಿತ್ಯದಲ್ಲಿ ಬೆಳೆವರೆಂಬ, ಮಹಿಳಾ ಸಾಹಿತ್ಯದಲ್ಲಿ ಮೆರೆದು ಕನ್ನಡ ಸಾಹಿತ್ಯ ಲೋಕದಲ್ಲಿ ನೆಲೆನಿಂತು, ಸಾಕಷ್ಟು ಕೃತಿಗಳನ್ನು ಸಾರಸ್ವತ ಲೋಕಕ್ಕೆ ನೀಡುವರೆಂಬ ಅವರ ನಂಬಿಕೆ ಗಟ್ಟಿಯಾಗಲಿ, ಸರಳ ಸುಂದರ ಕವಿತೆಗಳ ನೆಲೆಗಟ್ಟಿನಲ್ಲಿರುವ ಸೊಬಗು ಕವನ ಸಂಕಲನ ಓದುಗರ ಮನಸೂರೆಗೊಳ್ಳುವುದರಲ್ಲಿ ಸಂಶಯವಿಲ್ಲ ಎಂದು ಮುನ್ನುಡಿಯಲ್ಲಿ ಹೇಳಿದ್ದಾರೆ. ಈ ಕೃತಿಯು ಪ್ರಕೃತಿಮಾತೆಯ ಸೌಂದರ್ಯವನ್ನು ಹೆಚ್ಚಿಸುವ ಕೃತಿಯಾಗಿದೆ ದಯಮಾಡಿ ಎಲ್ಲರೂ ಈ ಕೃತಿಯನ್ನು ಕೊಂಡು ಓದಿ ಎಂದು ತಮ್ಮಲ್ಲಿ ವಿನಂತಿಸಿಕೊಳ್ಳುತ್ತಿದ್ದೇನೆ. ಹೀಗೆ ಲೇಖಕಿಯೂ ಇನ್ನಷ್ಟು ಹೆಚ್ಚಿನ ಕವನಗಳನ್ನು ಬರೆಯಲು ಕನ್ನಡ ಸಾರಸ್ವತ ಲೋಕದಲ್ಲಿ ತಮ್ಮದೇಯಾದ ಸಾಹಿತ್ಯ ಕೃಷಿಯನ್ನು ಮಾಡಲಿ ಎಂದು ಶುಭ ಹಾರೈಸುತ್ತೇನೆ.

ಮಧುಮೇಹ ಒಂದು ಪೀಳಿಗೆಯಿಂದ ಮತ್ತೊಂದು ಪೀಳಿಗೆಗೆ ಏಕೆ ಹರಡುತ್ತದೆ?

ಉದಯವಾಹಿನಿ ಚಿತ್ರ

ಪ್ರೋಷಕರಿಗೆ ಶುಗರ್ ಸಮಸ್ಯೆ ಇದ್ರೆ ಅದು ಮಕ್ಕಳಿಗೂ ಬರುತ್ತೆ ಎನ್ನುತ್ತಾರೆ. ಮಧುಮೇಹ ಒಂದು ಪೀಳಿಗೆಯಿಂದ ಇನ್ನೊಂದು ಪೀಳಿಗೆಗೆ ಏಕೆ ಹರಡುತ್ತದೆ. ಇದಕ್ಕೆ ಕಾರಣಗಳೇನು ಇದನ್ನು ಹೇಗೆ ತಡೆಗಟ್ಟಬಹುದು ತಿಳಿಯೋಣ. ಮಧುಮೇಹವು ಒಂದು ಜೀವನಶೈಲಿಗೆ ಸಂಬಂಧಿಸಿದ ರೋಗವಾಗಿದ್ದರೂ ಇದೊಂದು ವಂಶವಾಹಿ ಕಾಯಿಲೆಯಾಗಿದೆ. ಮಧುಮೇಹವು ಒಂದು ಪೀಳಿಗೆಯಿಂದ ಮತ್ತೊಂದು ಪೀಳಿಗೆಗೆ ಹರಡುವುದನ್ನು ನಾವು ಹೆಚ್ಚಾಗಿ ನೋಡುತ್ತೇವೆ, ಆದರೆ ಇದು ಏಕೆ ಸಂಭವಿಸುತ್ತದೆ ಎಂದು ನೀವು ಎಂದಾದರೂ ಯೋಚಿಸಿದ್ದೀರಾ? ನಮ್ಮ ಮುಂದಿನ ಪೀಳಿಗೆಗೆ ಈ ಮಧುಮೇಹ ಬರದಂತೆ ಯಾವ ರೀತಿ ತಡೆಯಬಹುದು ಎನ್ನುವುದನ್ನು ತಿಳಿಯೋಣ.

**ಮುಂದ

ಹಣದಿಂದ ಆರೋಗ್ಯ ದೊರೆಯಲ್ಲ, ಮನೆ ಮುಂದೆ ಗಿಡ ನೆಡಿ: ರುದ್ರೇಶ್

• ಉದಯವಾಹಿನಿ ಬಳ್ಳಾರಿ

ಸಮಾಜದಲ್ಲಿ ಗಿಡ ನೆಡುವುದು, ಬೆಳಸುವುದು ಸಮಾಜ ಸುಧಾಕರ, ಪರಿಸರವಾದಿಗಳ ಕೆಲಸವಷ್ಟೇ ಅಲ್ಲ ಎಲ್ಲರೂ ಮನೆಗೊಂದು ಗಿಡ ನೆಟ್ಟು ಬೆಳೆಸಬೇಕು. ಹಣದಿಂದ ಆರೋಗ್ಯ ದೊರೆಯಲ್ಲ. ಗಿಡ ನೆಡಿ ಅದು ನಿಮ್ಮ ಆರೋಗ್ಯಕ್ಕೆ ಸಹಕಾರಿಯಾಗುತ್ತೆ ಎಂದು ವಿಜಯನಗರ ಶ್ರೀಕೃಷ್ಣದೇವರಾಯ ವಿವಿಯ ಕುಲಸಚಿವ ಎಸ್.ಎನ್.ರುದ್ರೇಶ್ ಹೇಳಿದರು.

ಅವರು ನಗರದಲ್ಲಿ ವೀರಶೈವ ವಿದ್ಯಾವರ್ಧಕ ಸಂಘದ ಹಾನಗಲ್ಲು ಕುಮಾರೇಶ್ವರ ಪಾಲಿಟೆಕ್ನಿಕ್ ಕಾಲೇಜಿನಿಂದ ಹಮ್ಮಿಕೊಂಡಿದ್ದ ಗ್ರೋಗ್ರೀನ್ ವಾಕಥಾನ್‌ಗೆ ಬೆಳಿಗ್ಗೆ ಹೆಚ್.ಆರ್.ಗವಿಯಪ್ಪ ವೃತ್ತದಲ್ಲಿ ಉದ್ಘಾಟನೆ ಮಾಡಿ ಮಾತನಾಡುತ್ತಿದ್ದರು.

> ನಾವು ಗಿಡ ಮರ ಕಾಪಾಡಿದರೆ ಅವು ನಮ್ಮಆರೋಗ್ಯ ಕಾಪಾಡಲಿವೆ. ಗ್ರೋಗ್ರೀನ್ ಎಂಬುದು ಒಂದು ದಿನಕ್ಕೆ ಸೀಮಿತ ಬೇಡ ನಿತ್ಯವೂ ನಿಮ್ಮಬದುಕಿನಲ್ಲಿ ಅಳವಡಿಸಿಕೊಳ್ಳಿ
> -ಮುಲ್ಲಂಗಿ ನಂದೀಶ್, ಮೇಯರ್

ಬೇಸಿಗೆ ಬಂದಾಗ ಪರಿಸರದ ಬಗ್ಗೆ ನೆನೆಸಿಕೊಳ್ಳುತ್ತೇವೆ ನಾವು ಸಂಪಾದನೆ ಮಾಡಿರುವ ಮನೆ,ಕಾರ್, ಬಂಗ್ಲೆ ಉಳಿಯಬೇಕೆಂದರೆ ಪರಿಸರ ಉಳಿಯಬೇಕು. ಹಸಿರು ಬೇಕು ಇಲ್ಲ ಎಂದರೆ ಬಿಸಿಲಿಗೆ ಸಾಯುವ ಪರಿಸ್ಥಿತಿ ಬರುತ್ತೆ. 44ರಿಂದ 46 ಸೆಲ್ಸಿಯಸ್ ತಾಪಮಾನ ಆಗಿದೆ ಬಳ್ಳಾರಿಯಲ್ಲಿ. ಪ್ಲಾಸ್ಟಿಕ್ ಬಳಕೆ ನಿಲ್ಲಿಸಬೇಕು.

ಉದಯವಾಹಿನಿ ಚಿತ್ರ

ಗಿಡ ಮರಗಳಿಂದ ಉದುರಿದ ಎಲೆ ಸುಡಬೇಡಿ. ಅವು ಹಾಗೇ ಕೊಳೆತು ಗಿಡಗಳಿಗೆ ಗೊಬ್ಬರ ಆಗುತ್ತೆ ಒಟ್ಟಾರೆ ಪರಿಸರ ಚೆನ್ನಾಗಿದ್ದರೆ ಮಾತ್ರ ನಾವು ಚೆನ್ನಾಗಿರುತ್ತೇವೆ ಎಂಬುದನ್ನು ವಿದ್ಯಾರ್ಥಿ ಸಮೂಹ, ಜನತೆ ಅರಿಯಬೇಕು ಎಂದರು.

ವೀರಶೈವ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಅರವಿಂದ ಪಾಟೀಲ್ ಮಾತನಾಡಿ ಬಳ್ಳಾರಿ ಜನತೆಗೂ ಸನ್ ಸ್ಟ್ರೋಕ್ ಆಗುವ ಪರಿಸ್ಥಿತಿ ಬಂದಿದೆ. ಬಂಜೆತನ, ಕ್ಯಾನ್ಸರ್ ಹೆಚ್ಚಾಗುತ್ತಿರುವುದಕ್ಕೆ ಪ್ಲಾಸ್ಟಿಕ್ ಬಳಕೆ, ರಸಾಯನಿಕ ಬಣ್ಣಗಳು ಕಾರಣ ಆಗಿವೆ.

ಅದಕ್ಕಾಗಿ ನಾವು ಅವನ್ನು ಬಿಟ್ಟು, ಹಸಿರನ್ನು ಬೆಳೆಸೋಣ ಎಂದರು. ಕಾರ್ಯಕಾರಿ ಸಮಿತಿ ಸದಸ್ಯ ಕೋರಿ ವಿರೂಪಾಕ್ಷಪ್ಪ ಮಾತನಾಡಿದರು.

ವೃತ್ತದಲ್ಲಿನ ಬಸವೇಶ್ವರ ಪುತ್ಥಳಿಗೆ ಪುಷ್ಪನ ಮನ ಸಲ್ಲಿಸಿ ವಿದ್ಯಾರ್ಥಿಗಳ ವಾಕಥಾನ್‌ಗೆ ಚಾಲನೆ ನೀಡಲಾಯ್ತು. ಇಲ್ಲಿಂದ ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆಯ ಫಲಕಗಳನ್ನು ಹಿಡಿದು, ಗಡಗಿ ಚೆನ್ನಪ್ಪ ಸರ್ಕಲ್, ಬೆಂಗಳೂರು ರಸ್ತೆ, ತೇರು ಬೀದಿ ಮೂಲಕ ಪುನಃ ಗವಿಯಪ್ಪ ವೃತ್ತಕ್ಕೆ ಬಂದು ತಲುಪಿದರು.

ಪುಂಡಾಟ ಮೆರೆಯುತ್ತಿದ್ದ ಪುಂಡಾನೆ ಸೆರೆ

• ಉದಯವಾಹಿನಿ, ಬೇಲೂರು

ಮಲೆನಾಡು ಭಾಗದಲ್ಲಿ ಬೀಡುಬಿಟ್ಟು ಬೆಳೆ ನಾಶದೊಂದಿಗೆ ಪ್ರಾಣ ಹಾನಿಗೂ ಮುಂದಾಗುತ್ತಿದ್ದ ವಿಕ್ರಾಂತ್ ಹೆಸರಿನ ಪುಂಡಾನೆಯನ್ನು ಸತತ ಮೂರು ದಿನಗಳ ಕಾರ್ಯಚರಣೆಯ ನಂತರ ಸಂಜೆ ಬಾಳಗುಲಿ ಸುಪದ ಹುಲ್ಲೆಮಕ್ಕಿ ಗ್ರಾಮದ ತೋಟದಲ್ಲಿ ಹಿಡಿಯುವ ಮೂಲಕ ಅಪರೇಷನ್ ವಿಕ್ರಾಂತ್ ಯಶಸ್ವಿಯಾಗಿದ್ದು ಸಾರ್ವಜನಿಕರು ನಿಟ್ಟುಸಿರು ಬಿಡುವಂತಾಗಿದೆ. ತಾಲ್ಲೂಕಿನ ಅರೇಹಳ್ಳಿ ಹೋಬಳಿಯ ವಿವಿಧ ಗ್ರಾಮಗಳಲ್ಲಿ ಬೀಡು ಬಿಟ್ಟು ಬೆಳೆ ನಾಶದೊಂದಿಗೆ ಪ್ರಾಣ ಹಾನಿಗೆ ಮುಂದಾಗುತ್ತಿದ್ದ ಮೂರು ಪುಂಡಾನೆಗಳನ್ನು ಹಿಡಿಯಲು ಆರಣ್ಯ ಇಲಾಖೆ ಅಧಿಕಾರಿಗಳು ಮುಂದಾಗಿ ಮೊದಲ ದಿನವೇ ಯಶಸ್ವಿ ಕಾರ್ಯಚರಣೆ ನಡೆಸಿ ಒಂದು ಕಾಡಾನೆಯನ್ನು ಸೆರೆ ಹಿಡಿದು ಅಭಯಾರಣ್ಯಕ್ಕೆ ಬಿಟ್ಟು ಬಂದ ನಂತರ ಎರಡನೇ ಪುಂಡಾನೆ ವಿಕ್ರಾಂತ್ ಆನೆ ಹಿಡಿಯಲು ಸಕಲ ಸಿದ್ಧತೆಗಳೊಂದಿಗೆ ಅಧಿಕಾರಿಗಳ ತಂಡ 7 ಸಾಕಾನೆಗಳ ತಂಡದೊಂದಿಗೆ ಮುಂದಾದರು.

ಸತತವಾಗಿ ಎರಡೂ ದಿನಗಳೂ 6 ಗಂಟೆಗಳ ಕಾಲ ಕಾರ್ಯಚರಣೆ ನಡೆಸಿದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ವಿಕ್ರಾಂತ್ ಆನೆ ಚಳ್ಳೆಹಣ್ಣು ತಿನ್ನಿಸಿ ತಪ್ಪಿಸಿಕೊಂಡಿದ್ದರಿಂದ ಬರೀ ಕೈಲಿ ಅರಣ್ಯ ಇಲಾಖೆ ಅಧಿಕಾರಿಗಳು ವಾಪಸ್ಸಾಗಿದ್ದರು. ಮೊನ್ನೆ ಬೆಳಗ್ಗೆಯೇ ಹಿರಿಯ ಅಧಿಕಾರಿಗಳ ನೇತೃತ್ವದಲ್ಲಿ ಥರ್ಮಲ್ ಡ್ರೋನ್ ಬಳಸಿ ಕಾಡೊಳಗಿದ್ದ ವಿಕ್ರಾಂತ್ ಆನೆಯ ಸುಳಿವು ಪಡೆದು ಸಾಕಾನೆಗಳೊಂದಿಗೆ ಕಾರ್ಯಾಚರಣೆಗಿಳಿದಿದ್ದರು.

ಪಡಿತರ ಚೀಟಿದಾರರು ಅಕ್ಕಿಯನ್ನು ಮಾರಿದರೆ ಅವರ ಪಡಿತರ ಚೀಟಿಯನ್ನು ರದ್ದುಪಡಿಸಬೇಕು

ಅಕ್ರಮ ಪಡಿತರ ಅಕ್ಕಿ ಸಾಗಾಣಿಕೆ ಎಚ್ಚರ ವಹಿಸಿ: ಉಪ್ಪೆ

• ಉದಯವಾಹಿನಿ, ಔರಾದ್

ಅಂತ್ಯೋದಯ ಮತ್ತು ಆದ್ಯತಾ ಪಡಿತರ ಚೀಟಿಗಳ ಫಲಾನುಭವಿಗಳಿಗೆ ನಗದು ಬದಲು ಇನ್ನು ಮುಂದೆ ಅಕ್ಕಿ ವಿತರಿಸಲಾಗುತ್ತಿದ್ದು, ಪಡಿತರ ಚೀಟಿದಾರರು ಅಕ್ಕಿಯನ್ನು ಮಾರಿದರೆ ಅವರ ಪಡಿತರ ಚೀಟಿಯನ್ನು ರದ್ದುಪಡಿಸಬೇಕು ಎಂದು ತಾಲ್ಲೂಕಿನ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಚನ್ನಪ್ಪ ಉಪ್ಪೆ ಅಧಿಕಾರಿಗಳಿಗೆ ಸೂಚಿಸಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ನಡೆದ ಅನುಷ್ಠಾನ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಸರ್ಕಾರ ಉಚಿತವಾಗಿ ನೀಡುತ್ತಿರುವ ಪಡಿತರ ಅಕ್ಕಿ ಕಾಳಸಂತೆಯಲ್ಲಿ ಮಾರಾಟವಾಗುತ್ತಿದೆ. ನ್ಯಾಯಬೆಲೆ ಅಂಗಡಿಯಲ್ಲಿ ಅಕ್ಕಿ ವಿತರಣೆ ಆರಂಭಿಸುತ್ತಿದ್ದಂತೆ ಖರೀದಿದಾರರೇ ನೇರವಾಗಿ ಮನೆಬಾಗಿಲಿಗೆ ಹೋಗುತ್ತಿದ್ದಾರೆ. ಅವರನ್ನು ನಿಯಂತ್ರಿಸುವಲ್ಲಿ ಅಧಿಕಾರಿಗಳು ವಿಫಲವಾಗಿದ್ದಾರೆಂದು ಆರೋಪಿಸಿದರು.

ಇದಕ್ಕೆ ಧ್ವನಿಜೋಡಿಸಿದ ಸದಸ್ಯರು ಈ ಆರೋಪ ಎಲ್ಲಾ ಕಡೆಯೂ ಕೇಳಿಬರುತ್ತಿದೆ. ಕಾಳಸಂತೆಯಲ್ಲಿ ಅಕ್ಕಿ ಮಾರಾಟ ಮಾಡುವವರ ಹಾಗೂ ಖರೀದಿ ಮಾಡುವ ವ್ಯಕ್ತಿಗಳ ವಿರುದ್ಧ ಕ್ರಮ ಕೈಗೊಳ್ಳಿ ಎಂದು ಅಧಿಕಾರಿಗಳಿಗೆ ತಿಳಿಸಿದರು. ಮಾಹಿತಿ ಬರುವ ಕಡೆಗಳಲ್ಲಿ ದಾಳಿ ನಡೆಸಲಾಗುತ್ತಿದೆ. ತಮ್ಮ ಗಮನಕ್ಕೆ ಮಾರಾಟ, ಸಾಗಾಣಿಕೆ ಬಗ್ಗೆ ಮಾಹಿತಿ ಬಂದರೆ

ಉದಯವಾಹಿನಿ ಚಿತ್ರ

> ಗೃಹಲಕ್ಷ್ಮೀ ಯೋಜನೆಯಡಿ ತಾಲ್ಲೂಕಿನ 35,171 ಫಲಾನುಭವಿಗಳು ಪ್ರತಿ ತಿಂಗಳು 7 ಕೋಟಿ 34 ಲಕ್ಷ ರೂ.ಗಳ ಜಮೆಯಾಗಿದ್ದು, ಈವರೆಗೆ ಸುಮಾರು 100 ಕೋಟಿ ರೂ. ಖಾತೆಗೆ ವರ್ಗಾವಣೆಯಾಗಿದೆ ಎಂದರು. ಇಲಾಖೆಯಿಂದ ಗೃಹಲಕ್ಷ್ಮಿ ಯೋಜನೆಯ ಬಗ್ಗೆ ಜಾಗೃತಿ ಮೂಡಿಸಲಾಗಿದೆ. ತಾಂತ್ರಿಕ ಸಮಸ್ಯೆಗಳು ಮೊದಲು ಬಂದಿದ್ದು, ಅವುಗಳನ್ನು ಬಗೆಹರಿಸಿ ಮಹಿಳೆಯರ ಸಮಸ್ಯೆಗಳಿಗೆ ಸ್ಪಂದಿಸಲಾಗಿದೆ -ಇಮಲಪ್ಪ, ಸಿಡಿಪಿಒ

ಇಲಾಖೆಗೆ ತಿಳಿಸಿ ಕ್ರಮ ಜರುಗಿಸಲಾಗುತ್ತದೆ ಎಂದು ಆಹಾರ ಇಲಾಖೆಯ ಅಧಿಕಾರಿ ರವಿ ಪ್ರತಿಕ್ರಿಯೆ ನೀಡಿದರು. ಪಡಿತರ ಅಕ್ಕಿಯ ಕಂಪ್ಯೂಟರ್ ಚೀಟಿಗೆ 20-50 ರೂ ಪಡೆಯುತ್ತಿದ್ದಾರೆ ಎಂದು ಸಮಿತಿಯ ಸದಸ್ಯ ಕೃಷ್ಣ ಕಾಂಬಳೆ ತಿಳಿಸಿದರು. ಅಂತಹ ವ್ಯಕ್ತಿಗಳ ಮೇಲೆ ಕ್ರಮ ಜರುಗಿದಲಾಗುತ್ತದೆ ಎಂದು ಅಧಿಕಾರಿ ರವಿ ಭರವಸೆ ನೀಡಿದರು. ಎಕ್ಸ್‌ಪ್ರೆಸ್ ಬಸ್‌ಗಳು ಮುಸ್ತಾಪುರನಲ್ಲಿ ನಿಲ್ಲುತ್ತಿಲ್ಲ. ಎಲ್ಲಾ ಬಸ್‌ಗಳು ನಿಲ್ಲುವಂತೆ ಮಾಡಬೇಕು ಎಂದರು.

ಗ್ಯಾರಂಟಿ ಸಭೆಯಲ್ಲಿ ಕಂಡು ಬಂದಿರುವ ಸಮಸ್ಯೆಗಳು ತ್ವರಿತವಾಗಿ ಬಗೆಹರಿಸಬೇಕು ಎಂದು ಸದಸ್ಯ ಚನ್ನಬಸವ ಬಿರಾದಾರ್ ತಿಳಿಸಿದರು.

ನ್ಯಾಯಬೆಲೆ ಅಂಗಡಿಯ ಪಡೆಯಲು ಇರುವ ನಿಯಮಗಳೇನು ಎಂದು ಸದಸ್ಯ ಡಿಕೆ ಚಂದು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಅಧಿಕಾರಿ ರವಿ ಗ್ರಾಮೀಣ ಭಾಗದಲ್ಲಿ 300 ಕಾರ್ಡ್, ಪಟ್ಟಣದಲ್ಲಿ 500 ಕಾರ್ಡ್ ಕಡ್ಡಾಯವಿದೆ ಎಂದರು. ಎಷ್ಟು ಅರ್ಜಿ ಬಂದಿವೆ. ಯಾವ ಹಂತದಲ್ಲಿವೆ ಎಂದಾಗ ಅರ್ಜಿಗಳು ಬಂದಿರುವದಿಲ್ಲ ಎಂದು ರವಿ ಸ್ಪಷ್ಟಪಡಿಸಿದರು.

ಸರಿಯಾಗಿ ಬಸ್ ಸಂಚರಿಸುತ್ತಿಲ್ಲ

> ಔರಾದ್-ಬೀದರ ಮಾರ್ಗವಾಗಿ ಸರಿಯಾಗಿ ಬಸ್ ಸಂಚರಿಸುತ್ತಿಲ್ಲ. ನಿತ್ಯ ನಿಯಮದಂತೆ 95 ಬಾರಿ ಸಂಚರಿಸಬೇಕು ಆದರೆ 60 ಬಾರಿಯಷ್ಟು ಮಾತ್ರ ಸಂಚರಿಸುತ್ತಿವೆ ಎಂದು ಸದಸ್ಯ ಶಿವಕುಮಾರ ಪಾಟೀಲ್ ತಿಳಿಸಿದರು. ವಿದ್ಯಾರ್ಥಿಗಳಿಗೆ ಸಾಯಂಕಾಲ ಔರಾದ್ ಕಡೆಗೆ ಆಗಮಿಸಲು ಬಸ್ ಇರುವದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಇದರ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತರಲಾಗುತ್ತದೆ ಎಂದು ಸಿಬ್ಬಂದಿ ಅಣ್ಣಾರಾವ ತಿಳಿಸಿದರು. ಜಂಬಗಿಯಲ್ಲಿ ಬಸ್ ನಿಲ್ದಾಣ ಒತ್ತಿವರಿಯಾಗಿದೆ ಎಂದು ಸದಸ್ಯ ಸಲ್ಲಾವೋದ್ದಿನ್ ದೂರಿದರು. ಕೂಡಲೇ ಇದರ ಬಗ್ಗೆ ಮಾಹಿತಿ ನೀಡುವಂತೆ ಇಒ ಮಾಣಿಕರಾವ ಪಾಟೀಲ್ ಸೂಚಿಸಿದರು.

ವಿದ್ಯುತ್ ಕಡಿತವಾಗದಂತೆ ನೋಡಿಕೊಳ್ಳಬೇಕು ಎಂದು ಸಂಜುಕುಮಾರ ಉಜನಿ ತಿಳಿಸಿದರು. ಇದಕ್ಕೆ ಪ್ರತಿಕ್ರಿಯೆ ನೀಡಿದ ಜೆಸ್ಕಾಂ ಎಇಇ ರವಿ ಕಾರಬಾರಿ ದೂರುಗಳು ಬಂದಲ್ಲಿ ತ್ವರಿತವಾಗಿ ಸ್ಪಂದಿಸಲಾಗುತ್ತದೆ ಎಂದರು.

ಬಡ ರೋಗಿಗೆ ದೇಣಿಗೆ ಹಣ ವಿತರಣೆ

• ಉದಯವಾಹಿನಿ, ಹುಮನಾಬಾದ್

ಪಟ್ಟಣದ ಕಲ್ಲೂರ್ ರಸ್ತೆಯ ಕರ್ನಾಟಕ ರತ್ನ ಪುನೀತ್ ರಾಜಕುಮಾರ ವೃತ್ತದಲ್ಲಿ ನಟ ಪುನೀತ ರಾಜಕುಮಾರ ಅವ 50ನೇ ಜನ್ಮದಿನ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು.

ಇದೇ ವೇಳೆ ನಟ ಡಾ. ಪುನೀತ ರಾಜಕುಮಾರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ, ಕೇಕ್ ಕತ್ತರಿಸಿ ಪರಸ್ಪರ ಸಿಹಿ ಹಂಚಿಕೊಂಡು ಸಂಭ್ರಮಿಸಿದರು. ಬಳಿಕ ಸಂಗೀತ ಕಲಾವಿದ ರೇವಣಸಿದ್ದ ಸ್ವಾಮಿ ದಂಪತಿಗಳಿಂದ ಸಂಗೀತ ಕಾರ್ಯಕ್ರಮ ಕಾರ್ಯಕ್ರಮ ವೈಭವದಿಂದ ಜರುಗಿತು. ಪುನೀತ್ ರಾಜಕುಮಾರ ವೃತ್ತದಲ್ಲಿ ನಡೆದ ಸಂಗೀತ ಕಾರ್ಯಕ್ರಮದಲ್ಲಿ ಸಂಗ್ರಹವಾದ ದೇಣಿಗೆಯನ್ನು ಸಂಗೀತ ಕಲಾವಿದ ರೇವಣಸಿದ್ದ ಸ್ವಾಮಿ ದಂಪತಿಗಳು ಕಿಡ್ನಿ ವೈಫಲ್ಯದಿಂದ ಬಳಲುತ್ತಿರುವ ರೋಗಿಯ ಚಿಕಿತ್ಸೆಗೆ ದೇಣಿಗೆ ಹಣ ವಿತರಿಸಿದರು.

ಪರೀಕ್ಷೆಯನ್ನು ಆತ್ಮಸ್ಥೈರ್ಯದಿಂದ ಎದುರಿಸಿ : ಜೈಕಾಂತ ಗಂಗೂಜಿ

• ಉದಯವಾಹಿನಿ, ಭಾಲ್ಕಿ

ವಿದ್ಯಾರ್ಥಿಗಳು ಪರೀಕ್ಷೆಯನ್ನು ಆತ್ಮಸ್ಥೈರ್ಯದಿಂದ ಎದುರಿಸಬೇಕು ಮತ್ತು ಒತ್ತಡಕ್ಕೆ ಒಳಗಾಗದೆ ಹಬ್ಬದಂತೆ ಸಂಭ್ರಮಿಸಬೇಕು ಎಂದು ಸತ್ಯನಿಕೇತನ ಕಾಲೇಜಿನ ಪ್ರಾಚಾರ್ಯ ಜೈಕಾಂತ ಗಂಗೂಜಿ ಹೇಳಿದರು. ತಾಲ್ಲೂಕಿನ ದಾಡಗಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ಶಾಲೆಯಲ್ಲಿ ಕ್ರಿಯಾಶೀಲ ಶಿಕ್ಷಕರಿದ್ದು, ಗುಣಾತ್ಮಕ ಶಿಕ್ಷಣ ದೊರೆಯುತ್ತಿದೆ. ಶಿಕ್ಷಣಕ್ಕೆ ಶ್ರೀಮಂತಿಕೆಯನ್ನು ಹೋಲಿಸದೆ ಪಾಲಕರು ಮಕ್ಕಳಿಗೆ ಸರ್ಕಾರಿ ಶಾಲೆಯಲ್ಲಿ ಉತ್ತಮ ಶಿಕ್ಷಕರ ಮಾರ್ಗದರ್ಶನ ದೊರೆಯುವಂತೆ ಮಾಡಬೇಕು ಎಂದು ಹೇಳಿದರು. ಮುಖ್ಯಶಿಕ್ಷಕ ಎಮ. ಡಿ. ಹನೀಫ್ ಪ್ರಮುಖರಾದ ಸತೀಶ ಸಿದ್ದೇಶ್ವರೆ, ರೇಖಾ ರಾಜುರೆ, ಜಯಂತಿ ಸೇರಿದಂತೆ ಇತರರು ಇದ್ದರು.

ನಿಯಂತ್ರಣ ತಪ್ಪಿ ಹಿಮ್ಮುಖವಾಗಿ ಚಲಿಸಿದ ಕಾರು: ಸರಣಿ ಅಪಘಾತ

• ಉದಯವಾಹಿನಿ, ಮಂಗಳೂರು

ಪಿವಿಎಸ್ ವೃತ್ತದ ಬಳಿ ಕಾರು ನಿಯಂತ್ರಣ ತಪ್ಪಿ ಹಿಮ್ಮುಖವಾಗಿ ಚಲಿಸಿ ಹಲವಾರು ವಾಹನಗಳಿಗೆ ಡಿಕ್ಕಿ ಹೊಡೆದ ಪರಿಣಾಮ ಸರಣಿ ಅಪಘಾತಗಳು ಸಂಭವಿಸಿದ ಘಟನೆ ಸಂಜೆ ನಡೆದಿದೆ.

ಸಿಟಿ ಸೆಂಟರ್ ಮಾಲ್ ನಿಂದ ಪಿವಿಎಸ್ ಕಡೆಗೆ ಬರುತ್ತಿದ್ದ ಕಾರನ್ನು ಗೇರ್ ಬದಲಾಯಿಸುವಾಗ ತಪ್ಪಾಗಿ ರಿವರ್ಸ್ ಗೇರ್ ಹಾಕಿದ್ದರಿಂದ ಅನಿರೀಕ್ಷಿತವಾಗಿ ಹಿಂದಕ್ಕೆ ಚಲಿಸಲಾಗಿದೆ ಎಂದು ಹೇಳಲಾಗುತ್ತಿದೆ.

ಈ ಸಂದರ್ಭದಲ್ಲಿ, ಕಾರು ಹಿಂದಿನಿಂದ ಬರುತ್ತಿದ್ದ ಹಲವಾರು ವಾಹನಗಳಿಗೆ ಡಿಕ್ಕಿ ಹೊಡೆದಿದ್ದು, ಮೂರರಿಂದ ನಾಲ್ಕು ಕಾರುಗಳು ಮತ್ತು ಒಂದು ಆಟೋರಿಕ್ಷಾಗೆ ಹಾನಿಯಾಗಿದೆ. ಘಟನೆಯ ನಂತರ, ಕಾರಿನ ಚಾಲಕ ಸ್ಥಳದಿಂದ ಪರಾರಿಯಾಗಿದ್ದಾನೆ ಎಂದು ವರದಿಯಾಗಿದೆ. ಹೆಚ್ಚಿನ ತನಿಖೆಗಳು ನಡೆಯುತ್ತಿವೆ.

ಮೆಡಿಕಲ್ ಕಾಲೇಜಿಗೆ ಮೊದಲು ಜಾಗ ಹುಡುಕಿಕೊಟ್ಟವರು ಬನ್ನೂರು ಗ್ರಾಮಾಡಳಿತಾಧಿಕಾರಿ

ಮೆಡಿಕಲ್ ಕಾಲೇಜಿಗೆ ಮೊದಲ 'ಬೀಜ' ಹಾಕಿರುವುದು ನಾನು

• ಉದಯವಾಹಿನಿ, ಪುತ್ತೂರು

ಪುತ್ತೂರಿನಲ್ಲಿ ಮೆಡಿಕಲ್ ಕಾಲೇಜಿನ ಪ್ರಸ್ತಾಪ ಸಿದ್ದರಾಮಯ್ಯ ಅವರ ರಾಜ್ಯ ಬಜೆಟ್‌ನಲ್ಲಿ ಆಗಿದೆ. ಆದರೆ ಈ ಮೆಡಿಕಲ್ ಕಾಲೇಜಿಗೆ ಮೊದಲು ಬೀಜ ಹಾಕಿದ್ದು ನಾನು. ಈಗ ಅದು ಮೊಳಕೆಯೊಡೆಯಲು ಆರಂಭವಾಗಿದೆ ಎಂದು ಮಾಜಿ ಶಾಸಕಿ ಶಕುಂತಳಾ ಶೆಟ್ಟಿ ಹೇಳಿದ್ದಾರೆ. ಪುತ್ತೂರಿಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಬಂದಾಗ ಮೆಡಿಕಲ್ ಕಾಲೇಜಿನ ಬೇಡಿಕೆ ಇಟ್ಟದ್ದೂ ಮೆಡಿಕಲ್ ಕಾಲೇಜು ಮಂಜೂರಾಗಲು ಕಾರಣವಾಯಿತು. ಬಜೆಟ್‌ನಲ್ಲಿ ಒಮ್ಮೆ ಘೋಷಣೆಯಾದರೆ ಯಾವತ್ತಾದರೂ ಮೆಡಿಕಲ್ ಕಾಲೇಜು ಬಂದೇ ಬರುತ್ತದೆ. ಮಂಗಳೂರಿನ ವೆನ್‌ಲಾಕ್‌ನಂತಹ ಆಸ್ಪತ್ರೆ ಪುತ್ತೂರಿನಲ್ಲಿಯೂ ಆಗಬೇಕು ಎಂದು ಅವರು ಹೇಳಿದರು.

ಪುತ್ತೂರಿನಲ್ಲಿ ಮೊದಲು ಆರಂಭವಾಗಿರುವುದು ಪುತ್ತೂರು ಜಿಲ್ಲೆ ಆಗಬೇಕೆಂಬ ಕೂಗು. ಆ ಸಂದರ್ಭ ನಾನೂ ಅದೇ ವಿಚಾರಕ್ಕೆ ಹೋರಾಟಕ್ಕೆ ಇಳಿದೆ. ಆ ಸಮಯದಲ್ಲಿ ಪ್ರಥಮಬಾರಿಗೆ ಸಿದ್ದರಾಮಯ್ಯ ಅವರು

> ಈ ಮೆಡಿಕಲ್ ಕಾಲೇಜಿಗೆ ಮೊದಲು ಜಾಗ ಹುಡುಕಿಕೊಟ್ಟವರು ಬನ್ನೂರು ಗ್ರಾಮಾಡಳಿತಾಧಿಕಾರಿ ಇವರಿಗೆ ಮೊದಲು ಅಭಿನಂದನೆ ಹೇಳಬೇಕು. ಒಂದು ವೇಳೆ ಅವರು ಜಾಗ ಗುರುತಿಸದಿದ್ದರೆ ಇವತ್ತಿಗೂ ಜಾಗ ಸಿಗುತ್ತಿರಲಿಲ್ಲ. ಇದರ ಜತೆಗೆ ರಾಜ್ಯದ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಸಚಿವರ ಸಹಕಾರ, ಜಾಗ ಕೊಟ್ಟ ಸೇಡಿಯಾಪು ಮನೆಯವರಿಗೆ, ಹೋರಾಟ ಸಮಿತಿಗೆ ನಾನು ಅಭಿಂದನೆಯನ್ನು ಸಲ್ಲಿಸುತ್ತೇನೆ
> -ಶಕುಂತಳಾ ಶೆಟ್ಟಿ, ಮಾಜಿ ಶಾಸಕಿ

ಎಲ್ಲಾ ಜಿಲ್ಲೆಗಳಿಗೆ ಮೆಡಿಕಲ್ ಕಾಲೇಜು ಕೊಡುವ ಬಗ್ಗೆ ಬಜೆಟ್‌ನಲ್ಲಿ ಪ್ರಸ್ತಾಪ ಮಾಡಿದರು. ನಾನು ಪುತ್ತೂರಿಗೆ ಮೆಡಿಕಲ್ ಕಾಲೇಜು ಬೇಕೆಂಬ ಬೇಡಿಕೆ ಇಟ್ಟೆ. ಮಂಗಳೂರಿನಲ್ಲಿ 8 ಮೆಡಿಕಲ್ ಕಾಲೇಜು ಇದೆ. ಈಗ ಇಲ್ಲದಿರುವ ಜಿಲ್ಲೆಗಳಿಗೆ ಕೊಡುತ್ತೇನೆ. ನೀನು ಮೊದಲು ಜಾಗ ಹುಡುಕು. ನಿನ್ನ ಕ್ಷೇತ್ರಕ್ಕೂ ಕೊಡುತ್ತೇನೆ ಎಂದು ಹೇಳಿದ್ದರು. ಆದರೆ ಯಾರೂ ಕೂಡಾ ಜಾಗ ಕೊಡಲು ಮುಂದೆ ಬರಲಿಲ್ಲ. ಅಂತಹ ಸಮಯದಲ್ಲಿ ಮುರಳೀಧರ ರೈ ಮಠಂತಬೆಟ್ಟು ಅವರು ನಮ್ಮಲ್ಲಿ ಜಾಗ ಇದೆ ಎಂದು ತಿಳಿಸಿದರು.

ಈ ಬಗ್ಗೆ ಬನ್ನೂರು ವಿಎ ಜಾಗ ಇದೆ. ಆದರೆ ಅದು ಜನಾರ್ಧನ ಭಟ್ ಸೇಡಿಯಾಪು ಕುಟುಂಬದ ಕುಮ್ಕಿ ಜಾಗ ಎಂದು ಮಾಹಿತಿ ನೀಡಿದರು. ನಂತರದ ಬೆಳವಣಿಗೆಯಲ್ಲಿ ಪುತ್ತೂರು ಸರ್ಕಾರಿ ಕಾಲೇಜಿಗೆ ಎಂದು 40 ಎಕರೆ ಜಾಗವನ್ನು ಕಾಯ್ದಿರಿಸಿ ಆರ್‌ಟಿಸಿ ಮಾಡಿಸಿದ್ದೆ. ಆಗಿನ ಜಿಲ್ಲಾಧಿಕಾರಿ ಇಬ್ರಾಹಿಂ ಅವರೂ ತುಂಬಾ ಸಹಕಾರ ನೀಡಿದ್ದರು. ಇದ

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	09:00 ರಿಂದ 10:30
ಗುಳಿಕ ಕಾಲ	ಬೆಳಿಗ್ಗೆ	06:00 ರಿಂದ 07:30
ಯಮಗಂಡ ಕಾಲ	ಮಧ್ಯಾಹ್ನ	01:30 ರಿಂದ 03:00

ಮೇಷ ಒಬ್ಬ ಸಂತನಿಂದ ಆಧ್ಯಾತ್ಮಿಕ ಜ್ಞಾನ ಸಾಂತ್ವನ ಮತ್ತು ಆರಾಮವನ್ನು ಒದಗಿಸುತ್ತದೆ. ದಿನದಆರಂಭವು ಚೆನ್ನಾಗಿ ಆಗಿದರು, ಸಂಜೆಯ ಸಮಯದಲ್ಲಿ ಯಾವುದೇ ಕಾರಣದಿಂದ ನಿಮ್ಮ ಹಣ ಖರ್ಚಾಗಬಹುದು.

ವೃಷಭ ನಿಮ್ಮ ಹತ್ತಿರ ಕುಟುಂಬದವರಿಗೆ ಅಥವಾ ನಿಮ್ಮ ಸ್ನೇಹಿತರಿಗಾಗಿ ಸಮಯವಿಲ್ಲ ಎಂದು ಬಯಸಿದಾಗ ನಿಮ್ಮ ಮನಸ್ಸು ಕೆಟ್ಟುಹೋಗಬಹುದು. ಇಂದು ಸಹ ನಿಮ್ಮ ಮನಸ್ಥಿತಿ ಹಾಗೆಯೆ ಉಳಿದಿರಬಹುದು.

ಮಿಥುನ ಗಾಳಿಯಲ್ಲಿ ಮನೆ ಕಟ್ಟುವಲ್ಲಿ ನಿಮ್ಮ ಸಮಯ ವ್ಯರ್ಥ ಮಾಡಬೇಡಿ. ಬದಲಿಗೆ ಏನಾದರೂ ಅರ್ಥಪೂರ್ಣವಾದದ್ದನ್ನು ಮಾಡಲು ನಿಮ್ಮ ಶಕ್ತಿ ವ್ಯಯಿಸಿ. ಬ್ಯಾಂಕ್ ವ್ಯವಹರಗಳಲ್ಲಿ ಕಾಳಜಿ ವಹಿಸಬೇಕು.

ಕರ್ಕಾಟಕ ನೀವು ಕಚೇರಿಯಿಂದ ಮನೆಗೆ ಹಿಂತಿರುಗಿ ನಿಮ್ಮ ನೆಚ್ಚಿನ ಕೆಲಸವನ್ನು ಮಾಡಬಹುದು. ನಿಮ್ಮ ಮನಸ್ಸು ಸಮಾಧಾನಗೊಳ್ಳುತ್ತದೆ ಇಂದು ತುಂಬಾ ನಿರೀಕ್ಷೆಗಳು ನಿಮ್ಮ ವೈವಾಹಿಕ ಜೀವನವನ್ನು ದುಃಖದೆಡೆಗೆ ನಡೆಸಬಹುದು.

ಸಿಂಹ ನೀವು ಯಾವುದೇ ವ್ಯಕ್ತಿಗೆ ಸಾಲ ನೀಡಿದ್ದರೆ, ಇಂದು ನೀವು ಆ ಹಣವನ್ನು ಮರಳಿ ಪಡೆಯುವ ನಿರೀಕ್ಷೆಯಿದೆ ನಿಮ್ಮ ಸ್ನೇಹಿತರು ನಿಮ್ಮ ಉದಾರ ವರ್ತನೆಯ ದುರುಪಯೋಗ ಮಾಡಲು ಬಿಡಬೇಡಿ.

ಕನ್ಯಾ ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ಸಂಜೆ ಸಾಮಾಜಿಕ ಚಟುವಟಿಕೆ ನೀವು ನಿರೀಕ್ಷಿಸಿದ್ದಕ್ಕಿಂತ ಉತ್ತಮವಾಗಿರುತ್ತದೆ. ನಿಮ್ಮ ಪ್ರಿಯತಮೆಯ ಕರಿಣ ಪದಗಳಿಂದ ನಿಮ್ಮ ಮನಸ್ಥಿತಿ ಹಾಳಾಗಬಹುದು.

ತುಲಾ ನೀವು ನಿಮ್ಮ ಭಾವನೆಗಳನ್ನು ನಿಯಂತ್ರಣದಲ್ಲಿಟ್ಟುಕೊಳ್ಳಬೇಕು ಮತ್ತು ಪರಿಸ್ಥಿತಿಯನ್ನು ಬಿಗಡಾಯಿಸಬಹುದಾದ ಏನನ್ನೂ ಮಾಡಬಾರದು. ಇಂದು ಇಡೀ ದಿನ ನೀವುಖಾಲಿಯಾಗಿರಬಹುದು.

ವೃಶ್ಚಿಕ ನಿಮ್ಮ ಬಳಿ ಹೆಚ್ಚು ಹಣವಿಲ್ಲ ಎಂದು ಯೋಚಿಸಿದರೆ, ಇಂದು ಮನೆಯ ದೊಡ್ಡವರಿಂದ ಹಣವನ್ನು ಹಣವನ್ನು ಸಂಗ್ರಹಿಸುವ ಸಲಹೆ ತೆಗೆದುಕೊಳ್ಳಿ . ಕುಟುಂಬದ ಸದಸ್ಯರ ಅಗತ್ಯಗಳಿಗೆ ಆದ್ಯತೆ ನೀಡಿ.

ಧನಸ್ಸು ನಿಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಹಿಂಜರಿಯದಿರಿ. ಆತ್ಮವಿಶ್ವಾಸದ ನಿಮ್ಮನ್ನು ಆವರಿಸಲು ಬಿಡಬೇಡಿ, ಏಕೆಂದರೆ ಅದು ಕೇವಲ ನಿಮ್ಮ ಸಮಸ್ಯೆಯನ್ನು ಮಾತ್ರ ಸಂಕೀರ್ಣಗೊಳಿಸುತ್ತದೆ.

ಮಕರ ಧ್ಯಾನ ಮತ್ತು ಯೋಗವನ್ನು ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗಾಗಿ ಆಚರಿಸಬೇಕು. ಭವಿಷ್ಯದಲ್ಲಿ ನೀವು ಆರ್ಥಿಕವಾಗಿ ಬಲವಾಗಿರಬೇಕೆಂದು ಬಯಸಿದರೆ ಇಂದಿನಿಂದಲೇ ಹಣವನ್ನು ಉಳಿಸಿ.

ಕುಂಭ ಒಬ್ಬ ಸ್ನೇಹಿತ ತನ್ನ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸುವಲ್ಲಿ ನಿಮ್ಮ ಸಲಹೆ ಪಡೆದುಕೊಳ್ಳುತ್ತಾರೆ. ಇಂದು, ನೀವು ಮತ್ತು ನಿಮ್ಮ ಪ್ರೀತಿ ಸಂಗಾತಿ ಪ್ರೀತಿಯ ಸಾಗರದಲ್ಲಿ ತೇಲುತ್ತೀರಿ ಮತ್ತು ಪ್ರೀತಿಯ ಔನ್ನತ್ಯವನ್ನು ಅನುಭವಿಸುತ್ತೀರಿ.

ಮೀನ ಮಾನಸಿಕ ಶಾಂತಿಗಾಗಿ ಕೆಲವು ದಾನ ಧರ್ಮಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಈ ರಾಶಿಚಕ್ರದ ಕೆಲವು ಜನರಿಗೆ ಇಂದು ಮಕ್ಕಳ ಬದಿಯಿಂದ ಆರ್ಥಿಕ ಲಾಭವನ್ನು ಪಡೆಯುವ ಭರವಸೆ ಇದೆ.

ಕಾರು, ದ್ವಿಚಕ್ರ ವಾಹನ ನಡುವೆ ಅಪಘಾತ ಆಸ್ಪತ್ರೆಗೆ ದಾಖಲಾಗಿದ್ದ ಸ್ಕೂಟರ್ ಸವಾರ ಮೃತ್ಯು

• ಉದಯವಾಹಿನಿ ಬಂಟ್ವಾಳ

ಕಳೆದ ಒಂದು ವಾರಗಳ ಹಿಂದೆ ಬಂಟ್ವಾಳದ ಫರಂಗಿಪೇಟೆ ಎಂಬಲ್ಲಿ ಕಾರು ಮತ್ತು ದ್ವಿಚಕ್ರ ವಾಹನ ನಡುವೆ ನಡೆದ ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಆಸ್ಪತ್ರೆಗೆ ದಾಖಲಾಗಿದ್ದ ಸ್ಕೂಟರ್ ಸವಾರ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟ ಘಟನೆ ನಡೆದಿದೆ. ಪುದು ಗ್ರಾಮದ ಕುಮ್ಡೆಲು ನಿವಾಸಿ ರವಿ (54) ಅಪಘಾತದಲ್ಲಿ ಗಾಯಗೊಂಡ ವ್ಯಕ್ತಿಯಾಗಿದ್ದು, ಮಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಮಾ.13 ರಂದು ಫರಂಗಿಪೇಟೆ ಎಂಬಲ್ಲಿ ಸಂಜೆ 6 ಗಂಟೆ ಸುಮಾರಿಗೆ ಕಾರು ಹಾಗೂ ಸ್ಕೂಟರ್ ನಡುವೆ ಅಪಘಾತ ಸಂಭವಿಸಿತ್ತು. ಆ ಬಳಿಕ ಗಂಭೀರವಾಗಿ ಗಾಯಗೊಂಡಿದ್ದ ರವಿ ಅವರನ್ನು ಕೂಡಲೇ ಮಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಿ, ತುರ್ತು ಚಿಕಿತ್ಸೆ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತಾದರೂ, ಅವರು ಚಿಕಿತ್ಸೆಗೆ ಸ್ಪಂದಿಸದೆ ಮೃತಪಟ್ಟ ಬಗ್ಗೆ ಪೋಲೀಸ್ ಮೂಲಗಳು ತಿಳಿಸಿವೆ. ಬಂಟ್ವಾಳ ಟ್ರಾಫಿಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮಲ್ಪೆ ಹಲ್ಲೆ ಪ್ರಕರಣ: ಇಬ್ಬರು ಶಂಕಿತರ ಬಂಧನ, ಇಬ್ಬರು ಪೊಲೀಸ್ ಕಾನ್ಸ್‌ಟೇಬಲ್ ಅಮಾನತು

• ಉದಯವಾಹಿನಿ ಉಡುಪಿ

ಉದಯವಾಹಿನಿ ಚಿತ್ರ

ಮಹಿಳೆಯನ್ನು ಮರಕ್ಕೆ ಕಟ್ಟಿ ಹಾಕಿದ ಪ್ರಕರಣದ ತನಿಖೆ ಮುಂದುವರೆದಿದ್ದು, ಘಟನೆಗೆ ಸಂಬಂಧಿಸಿದಂತೆ ಇಬ್ಬರು ಶಂಕಿತರಾದ ಲೀಲಾ ಮತ್ತು ಪಾರ್ವತಿ ಅವರನ್ನು ಬಂಧಿಸಲಾಗಿದ್ದು, ಇಬ್ಬರು ಪೊಲೀಸ್ ಕಾನ್ಸ್‌ಟೇಬಲ್‌ಗಳನ್ನು ಅಮಾನತುಗೊಳಿಸಲಾಗಿದೆ. ತನಿಖೆ ಮುಂದುವರೆದಿದೆ. ಮಲ್ಪೆ ಹಲ್ಲೆ ಪ್ರಕರಣ ಘಟನೆಗೆ ಸಂಬಂಧಿಸಿದಂತೆ ನಿಖರವಾದ ಮಾಹಿತಿಯನ್ನು ಸಂಗ್ರಹಿಸಲು ವಿಫಲವಾದ ಮಲ್ಪೆ ಪೊಲೀಸ್ ಠಾಣೆಯ ಬೀಟ್ ಕಾನ್ಸ್‌ಟೇಬಲ್‌ಗಳನ್ನು ಅಮಾನತುಗೊಳಿಸಲಾಗಿದೆ. ಈ ಪ್ರಕರಣದಲ್ಲಿ ಮಹಿಳೆಯ ವಿರುದ್ಧ ನಡೆದ ಕ್ರೂರ ಕೃತ್ಯವನ್ನು ರಾಜ್ಯ ಮಹಿಳಾ ಆಯೋಗ ತೀವ್ರವಾಗಿ ಖಂಡಿಸಿದೆ.

● ಅತಿಥಿಗಳಾಗಿ ಜಿಲ್ಲೆಯ ಎಲ್ಲಾ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಆಗಮಿಸಲಿದ್ದಾರೆ

ಮಹಾದಂಡನಾಯಕರ ಸ್ಮರಣೋತ್ಸವ: ಶ್ರೀಕಾಂತ ಸ್ವಾಮಿ

• ಉದಯವಾಹಿನಿ ಬೀದರ್

ಬಸವ ತತ್ವವನ್ನು ನಾಡಿನಾದ್ಯಂತ ಪಸರಿಸಿ, ಜನ 'ಮನಕ್ಕೆ ತಲುಪಿಸಿದ ವಿಶ್ವದ ಪ್ರಥಮ ಮಹಿಳಾ ಮಹಾಜಗದ್ಗುರು ಬಸವಾತ್ಮಜೆ ಮಾತೆ ಮಹಾದೇವಿಯವರ 6ನೇ ಸಂಸ್ಮರಣೆ ಹಾಗೂ ಲಿಂಗಾನಂದ ಸ್ವಾಮಿಗಳ ಸ್ಮರಣೆ ಪ್ರಯುಕ್ತ ನಗರದಲ್ಲಿ ಆಯೋಜಿಸಿದ ಮಹಾದಂಡನಾಯಕರ ಸ್ಮರಣೋತ್ಸವ ಕಾರ್ಯಕ್ರಮವನ್ನು ವೈದ್ಯಕೀಯ ಸಚಿವ ಡಾ. ಶರಣಪ್ರಕಾಶ ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದು ಮಹಾದಂಡನಾಯಕರ ಸ್ಮರಣೋತ್ಸವದ ಸ್ವಾಗತ ಸಮಿತಿ ಕಾರ್ಯಾಧ್ಯಕ್ಷ ಶ್ರೀಕಾಂತ ಸ್ವಾಮಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ರಾಷ್ಟ್ರೀಯ ಬಸವ ದಳ, ಲಿಂಗಾಯತ ಧರ್ಮ ಮಹಾಸಭಾ, ಲಿಂಗಾಯತ ಸಮಾಜ ಮತ್ತು ಕ್ರಾಂತಿ ಗಂಗೋತ್ರಿ ಅಕ್ಕನಾಗಲಾಂಬಿಕಾ ಮಹಿಳಾ ಗಣದ ಸಂಯುಕ್ತಾಶ್ರಯದಲ್ಲಿ ಮಾರ್ಚ್ 22 ಮತ್ತು 23 ರಂದು ಎರಡು ದಿವಸಗಳ ಕಾಲ ನಗರದ ಪಾಪನಾಶ ದೇವಸ್ಥಾನದ ಸಮೀಪವಿರುವ ಸ್ವಾಮಿ ಸಮರ್ಥ ಸಭಾಮಂಟಪದಲ್ಲಿ ಮಹಾದಂಡನಾಯಕರ ಸ್ಮರಣೋತ್ಸವ ಆಯೋಜಿಸಲಾಗಿದೆ.

ಉದಯವಾಹಿನಿ ಚಿತ್ರ

ಮಹಾದಂಡನಾಯಕರ ಭಾವಚಿತ್ರದ ಭವ್ಯ ಮೆರವಣಿಗೆ

ಮಾರ್ಚ್ 23 ರಂದು ಬೆ. 9ಗಂಟೆಗೆ ನಗರದ ಬಸವೇಶ್ವರ ವೃತ್ತದಿಂದ ವಚನ ಸಾಹಿತ್ಯದ ಹಾಗೂ ಮಹಾದಂಡನಾಯಕರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಲಿದೆ. ಮೆರವಣಿಗೆಗೆ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಚಾಲನೆ ನೀಡಲಿದ್ದು, ಧ್ವಜಾರೋಹಣ ಹಿರಿಯ ಶರಣ ಕಾಶಿನಾಥ ಪಾಟೀಲ ಮಾಡಲಿದ್ದಾರೆ. ಉಪಸ್ಥಿತಿಯನ್ನು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸೋಮಶೇಖರ ಬಿರಾದಾರ ಚಿದ್ರಿ ವಹಿಸಲಿದ್ದಾರೆ. ಗುರುಬಸವ ಪೂಜೆಯನ್ನು ಡಾ. ಸುರೇಶ ಪಾಟೀಲ ಮಾಡಲಿದ್ದಾರೆ ಎಂದು ಹೇಳಿದರು.

ಲಿಂಗಾಯತ ಧರ್ಮಕ್ಕೆ ಮಾತಾಜಿ ಕೊಡುಗೆ ಅಪಾರ. ದೇಶದಾದ್ಯಂತ ನೂರಾರು ಬಸವ ಧರ್ಮ ಸಮ್ಮೇಳನ, ಲಿಂಗಾಯತ ಧರ್ಮ ಸಮ್ಮೇಳನ, ಶರಣ ಮೇಳ, ಕಲ್ಯಾಣ ಪರ್ವ, ಗಣಮೇಳ, ಬಸವೋತ್ಸವ, ಶರಣೋತ್ಸವ ಆಯೋಜಿಸಿ ಗೌಣವಾಗಿದ್ದ ಬಸವಾದಿ ಶರಣರ ಸಂದೇಶಗಳನ್ನು ಜನಸಾಮಾನ್ಯರಲ್ಲಿ ಬಿತ್ತಿ ಬೆಳಗಿದ್ದಾರೆ ಎಂದರು.

ರಾಷ್ಟ್ರೀಯ ಬಸವ ದಳದ ಕೇಂದ್ರ ಸಮಿತಿ ಅಧ್ಯಕ್ಷರಾದ ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿಯವರ ದಿವ್ಯ ನೇತೃತ್ವದಲ್ಲಿ ನಡೆಯಲಿದ್ದು, ಮಾರ್ಚ್ 22ರಂದು ಬೆ. 10-30ಕ್ಕೆ ಉದ್ಘಾಟನಾ ಸಮಾರಂಭ ಜರುಗಲಿದೆ.

ಸಾನಿಧ್ಯವನ್ನು ಹುಲಸೂರಿನ ಪೂಜ್ಯ ಶ್ರೀ ಡಾ. ಶಿವಾನಂದ ಮಹಾಸ್ವಾಮಿಗಳು, ಬಸವ ಕಲ್ಯಾಣದ ಪೂಜ್ಯ ಸಿದ್ಧರಾಮ ಬೆಲ್ದಾಳ ಶರಣರು, ರಾಮಕೃಷ್ಣ ವಿವೇಕಾನಂದ ಆಶ್ರಮದ ಪೂಜ್ಯ ಜ್ಯೋತಿರ್ಮಯಾನಂದ ಸ್ವಾಮೀಜಿ, ಪೂಜ್ಯ ಓಂಕಾರೇಶ್ವರ ಸ್ವಾಮೀಜಿ ವಹಿಸಲಿದ್ದು, ಸಮ್ಮುಖವನ್ನು ಬಸವ ಮಂಟಪದ ಪೂಜ್ಯ ಮಾತೆ ಸತ್ಯಾದೇವಿ ವಹಿಸಲಿದ್ದಾರೆ. ವೈದ್ಯಕೀಯ ಸಚಿವ ಡಾ. ಶರಣಪ್ರಕಾಶ ಪಾಟೀಲ ಉದ್ಘಾಟಿಸಲಿದ್ದಾರೆ.

ಧ್ವಜಾರೋಹಣವನ್ನು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಮಾಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಪೌರಾಡಳಿತ ಮತ್ತು ಹಜ್ ಸಚಿವ ರಹಿಂಖಾನ್, ಸಂಸದ ಸಾಗರ ಖಂಡ್ರೆ ಆಗಮಿಸಲಿದ್ದಾರೆ.

> ಮಾರ್ಚ್ 23 ರಂದು ಮ. 12 ಗಂಟೆಗೆ ಅನುಭಾವಗೋಷ್ಠಿ-2 ನಡೆಯಲಿದೆ. ಉದ್ಘಾಟನೆಯನ್ನು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಮಿತಿಯ ಗೌರವಾಧ್ಯಕ್ಷ ಈಶ್ವರ ಬಿ ಖಂಡ್ರೆ ಮಾಡಲಿದ್ದಾರೆ. ಧ್ವಜಾರೋಹಣ ಮಾಜಿ ಬುಡಾ ಅಧ್ಯಕ್ಷ ಬಾಬು ವಾಲಿ ಮಾಡಲಿದ್ದು, ಅಧ್ಯಕ್ಷತೆ ಚಿತ್ರದುರ್ಗದ ತಾರಕನಾಥ ವಹಿಸಲಿದ್ದಾರೆ. ದಿವ್ಯ ಸಮ್ಮುಖವನ್ನು ಕೂಡಲ ಸಂಗಮದ ಶ್ರೀಲಿಂಗಾರೂಢರು, ಚಳ್ಳಕೆರೆಯ ಗುರುಸ್ವಾಮಿಗಳು ವಹಿಸಲಿದ್ದಾರೆ ಎಂದು ಶ್ರೀಕಾಂತ ಸ್ವಾಮಿ ತಿಳಿಸಿದರು.

ಅಧ್ಯಕ್ಷತೆಯನ್ನು ಸ್ವಾಗತ ಸಮಿತಿ ಅಧ್ಯಕ್ಷರು ಹಾಗೂ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ವಹಿಸಲಿದ್ದಾರೆ. ಅತಿಥಿಗಳಾಗಿ ಜಿಲ್ಲೆಯ ಎಲ್ಲಾ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಆಗಮಿಸಲಿದ್ದಾರೆ. ಗುರುಬಸವ ಪೂಜೆಯನ್ನು ದಾಸೋಹ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಜೈಲರ್ ಮಾಡಲಿದ್ದಾರೆ. ಪ್ರಮುಖ ಉಪಸ್ಥಿತಿಯನ್ನು ವಿವಿಧ ರಾಜ್ಯಗಳ ಹಾಗೂ ಜಿಲ್ಲೆಗಳ ಪ್ರಮುಖರು ವಹಿಸಲಿದ್ದಾರೆ.

ಮಾರ್ಚ್ 22 ರಂದು ಸಾ. 4 ಗಂಟೆಗೆ ಅನುಭಾವಗೋಷ್ಠಿ-1 ನಡೆಯಲಿದೆ.

ಉದ್ಘಾಟನೆಯನ್ನು ಚಿಕ್ಕಮಗಳೂರಿನ ಪೂಜ್ಯ ಶ್ರೀ ಜಯಬಸವಾನಂದ ಸ್ವಾಮೀಜಿ ಮಾಡಲಿದ್ದಾರೆ. ಸಮ್ಮುಖವನ್ನು ಧುಮ್ಮನಸೂರಿನ ಮುಕ್ತಿನಾಥ ಮಠದ ಶಂಕರಲಿಂಗ ಸ್ವಾಮಿಗಳು, ಉದಗೀರದ ಹಾವಗಿಸ್ವಾಮಿ ಮಠದ ಪೂಜ್ಯ ಶಂಭುಲಿಂಗೇಶ್ವರ ಸ್ವಾಮೀಜಿ, ಹಿರನಾಗಾಂವ ಮಠದ ಪೂಜ್ಯ ಜಯೇಂದ್ರ ಸ್ವಾಮಿಗಳು, ಬೆಳಗಾವಿಯ ಪೂಜ್ಯ ಅಕ್ಕನಾಗಲಾಂಬಿಕಾ ಮಾತಾಜಿ ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಬೆಂಗಳೂರಿನ ನಿ. ಪ್ರಾಧ್ಯಾಪಕ ಹಾಗೂ ಚಿಂತಕ ಶ್ರೀಶೈಲ ಮಸೂತೆ ವಹಿಸಲಿದ್ದಾರೆ ಎಂದರು.

ಕಾಲುವೆಯ ಕೊನೆಯ ಭಾಗದ ರೈತರಿಗೆ ನೀರಿಲ್ಲದೆ ಪರದಾಟ

• ಉದಯವಾಹಿನಿ ಹುಣಸಗಿ

ಪ್ರತಿದಿನ 0.80 ಟಿಎಂಸಿ ನೀರು ಕಾಲುವೆಗೆ ಹರಿಸಲಾಗುತ್ತಿದೆ ಇದರಿಂದ ಕೊನೆಯ ಭಾಗದ ರೈತರಿಗೆ ನೀರು ತಲುಪುವುದಿಲ್ಲ. ಇದರಿಂದ ರೈತರು ಬೆಳೆದ ಬೆಳೆಗಳಾದ ಶೇಂಗಾ, ಸಜ್ಜೆ, ಸೂರ್ಯಕಾಂತಿ, ಭತ್ತ, ಮೆಕ್ಕೆಜೋಳ, ಮೆಣಸಿನಕಾಯಿ ಬೆಳೆದ ಬೆಳೆಗಳು ನೀರಿಲ್ಲದೆ ಒಣಗಿ ಹೋಗುತ್ತಿವೆ ಆದ್ದರಿಂದ ಪ್ರತಿನಿತ್ಯ 10,500 ಕ್ಯೂಸೆಕ್ ನೀರು ಮತ್ತು ಏಪ್ರಿಲ್ 15ರವರೆಗೆ ಕಾಲುವೆಗಳಿಗೆ ನಿರಂತರವಾಗಿ ನೀರು ಹರಿಸಿದರೆ ರೈತರಿಗೆ ಅನುಕೂಲವಾಗುತ್ತದೆ ಎಂದು ನಮ್ಮ ಕರ್ನಾಟಕ ಸೇನೆಯ ಅಧ್ಯಕ್ಷರಾದ ಭೀಮನಗೌಡ ಪೊಲೀಸ್ ಪಾಟೀಲ ಹೇಳಿದರು.

ಮುಖ್ಯ ಅಭಿಯಂತರರು ಕೃಷ್ಣ ಭಾಗ್ಯ ಜಲ ನಿಗಮ ನಾರಾಯಣಪುರ ಅಧಿಕಾರಿಗಳಿಗೆ ಮನವಿ ಪತ್ರ ನೀಡಿ ಮಾತನಾಡಿದ ಅವರು, ಏಪ್ರಿಲ್ 15ರವರೆಗೆ ಕಾಲುವೆಗಳಿಗೆ ನಿರಂತರವಾಗಿ ನೀರು ಹರಿಸದಿದ್ದಲ್ಲಿ ರೈತರಿಗೆ ತುಂಬಾ

ಉದಯವಾಹಿನಿ ಚಿತ್ರ

ಸಂಕಷ್ಟವಾಗಿ ವರ್ಷವಿಡಿ ಕಸ್ಟಪಟ್ಟು ಬೆಳೆದ ಬೆಳೆಗಳು ಕೊನೆಯ ಸಮಯದಲ್ಲಿ ಒಣಗಿ ಸರಿಯಾದ ಫಸಲು ಬಾರದೆ ಇದ್ದರೆ ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗುತ್ತದೆ ಎಂದರು. ನಮ್ಮ ಮನವಿಗೆ ಸ್ಪಂದಿಸಿ ರೈತರ ಕಷ್ಟವನ್ನು ಅರಿತು ಏಪ್ರಿಲ್ 15ರವರೆಗೆ ನೀರು ಹರಿಸಬೇಕು. ಒಂದು ವೇಳೆ ಇದಕ್ಕೂ ನಿರ್ಲಕ್ಷ್ಯ ವಹಿಸಿದರೆ ತಮ್ಮ ಕಚೇರಿಯ ಮುಂದೆ ಉಗ್ರವಾದ ಹೋರಾಟ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು. ನಮ್ಮ ಕರ್ನಾಟಕ ಸೇನೆಯ ಪದಾಧಿಕಾರಿಗಳು ಇತರರು ಇದ್ದರು.

ಸರ್ಕಾರದ ಯೋಜನೆಗಳು ಬಡವರಿಗೆ ವರದಾನ

• ಉದಯವಾಹಿನಿ ಅಥಣಿ

ಸರ್ಕಾರ ಪ್ರತಿಯೊಂದು ಯೋಜನೆಗಳು ಬಡವರಿಗೆ ವರದಾನವಾಗಿದ್ದು, ಬಡವರ ಅಭಿವೃದ್ಧಿಗಾಗಿ, ಮಹಿಳೆಯರ ಸಬಲೀಕರಣಕ್ಕಾಗಿ, ಬಡ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ಅವುಗಳನ್ನು ಪ್ರತಿಯೊಬ್ಬರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಪುರಸಭೆಯ ಅಧ್ಯಕ್ಷೆ ಶಿವಲೀಲಾ ಬುಟಾಳೆ ಹೇಳಿದರು.

ಅವರು ಅಥಣಿ ಪಟ್ಟಣದ ಪುರಸಭೆಯ ಸಭಾಂಗಣದಲ್ಲಿ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ ಅಡಿಯಲ್ಲಿ 2022-23 ನೇ ಸಾಲಿನ ಫಲಾನುಭವಿಗಳಿಗೆ ಇನ್ವೆಟರ್ ಹಾಗೂ ಸನ್ 2024-25ನೇ

ಉದಯವಾಹಿನಿ ಚಿತ್ರ

ಸಾಲಿನ ಪುರಸಭೆ ಅನುದಾನದಡಿ ಬಡ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಹಾಯಧನದ ಚೆಕ್ ವಿತರಣೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅನೇಕ ಬಡ ಕುಟುಂಬಗಳು ಅವಕಾಶಗಳಿಂದ ವಂಚಿತರಾದಾಗ ಅನೇಕ ಸಂಕಷ್ಟಗಳನ್ನು ಎದುರಿಸಬೇಕಾಗುತ್ತದೆ. ಸ್ವಯಂ ಉದ್ಯೋಗಕ್ಕಾಗಿ ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನು, ವಿಕಲಚೇತನರಿಗೆ ತ್ರಿಚಕ್ರ ವಾಹನಗಳನ್ನು, ಬಡ ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಲ್ಯಾಪ್ ಟಾಪ್, ಬೆಳಕಿನ

> ಸಿಎಂ ಅಮೃತ ನಗರೋತ್ಥಾನ ಯೋಜನೆಯಡಿ 99 ಜನರಿಗೆ ಇನ್ವೆಟರ್‌ಗಳನ್ನು ಮತ್ತು 22 ಜನ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಹಾಯಧನ(ಶಿಷ್ಯವೇತನ) ವಿತರಿಸಲಾಗುತ್ತಿದೆ
> -ಅಶೋಕ ಗುಡಿಮನಿ

ಸಹಾಯಕ್ಕಾಗಿ ಇನ್ವೆಟರ್, ಸಹಾಯಧನದ ಚೆಕ್ ನಂತಹ ಅನೇಕ ಸೌಲಭ್ಯಗಳು ಪುರಸಭೆಯ ನಗರೋತ್ಥಾನ ಯೋಜನೆ ಅಡಿ ಪ್ರತಿ ವರ್ಷ ವಿತರಿಸಲಾಗುತ್ತಿದೆ. ಅಥಣಿ ಪಟ್ಟಣದ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳ ಫಲಾನುಭವಿಗಳು ಇವುಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆ: ಉತ್ತಮ ಫಲಿತಾಂಶಕ್ಕೆ ಪ್ರಯತ್ನ ವಿದ್ಯಾರ್ಥಿಗಳಿಗೆ ಗುಲಾಬಿ ಹೂ, ಸಿಹಿ ನೀಡಿ ಪರೀಕ್ಷೆಗೆ ಸ್ವಾಗತಿಸಿದ ಡಿಸಿ

• ಉದಯವಾಹಿನಿ ಚಿತ್ರದುರ್ಗ

ಎ

ದೈಹಿಕವಾಗಿ -ಮಾನಸಿಕವಾಗಿ ನೀವು ಸ್ಥಿರವಾಗಿಲ್ಲ

ನಿತೀಶ್ ಕುಮಾರ್ ವಿರುದ್ಧ ತೇಜಸ್ವಿ ಯಾದವ್ ವಾಗ್ದಾಳಿ

ಪಾಟ್ನಾ: ನಗರದಲ್ಲಿ ನಡೆದ ಕ್ರೀಡಾ ಕೂಟವೊಂದರಲ್ಲಿ ರಾಷ್ಟ್ರಗೀತೆ ಮೊಳಗುತ್ತಿರುವ ಸಂದರ್ಭದಲ್ಲಿ ಬಿಹಾರ ಸಿಎಂ ನಿತೀಶ್ ಕುಮಾರ್ ನಗುತ್ತಾ ಆಗೌರವ ತೋರಿರುವ ದೃಶ್ಯ ತುಣುಕುಗಳು ಜಾಲತಾಣಗಳಲ್ಲಿ ವೈರಲ್ ಆಗಿವೆ.

ಘಟನೆಯ ಬೆನ್ನಲ್ಲೇ ವಿರೋಧ ಪಕ್ಷಗಳು ನಿತೀಶ್ ಕುಮಾರ್ ವಿರುದ್ಧ ವಾಗ್ದಾಳಿ ನಡೆಸಿವೆ. ನಿತೀಶ್ ಸರ್ಕಾರದಲ್ಲಿ ಹಿಂದೆ ಉಪಮುಖ್ಯಮಂತ್ರಿಯಾಗಿದ್ದ ಆರ್ ಜೆಡಿ ಮುಖಂಡ ತೇಜಸ್ವಿಯಾದವ್, ಈ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಇದು ರಾಜ್ಯ ಮತ್ತು ರಾಷ್ಟ್ರಕ್ಕೆ ಮಾಡಿದ ಅವಮಾನ, ನಿಮ್ಮ ಮಾನಸಿಕ ಮತ್ತು ದೈಹಿಕ ಆರೋಗ್ಯ ಸ್ಥಿರವಾಗಿಲ್ಲ ಎಂದು ಲೇವಡಿ ಮಾಡಿದ್ದಾರೆ.

ನೀವು ಒಂದು ದೊಡ್ಡ ರಾಜ್ಯದ ಮುಖ್ಯಮಂತ್ರಿ ಎಂದು ನಾವು ನಿಮಗೆ ನೆನಪಿಸಬೇಕಾಗಿದೆ. ನೀವು ಕೆಲವು ಸೆಕೆಂಡುಗಳ ಕಾಲ ದೈಹಿಕವಾಗಿ, ಮಾನಸಿಕವಾಗಿ ಸ್ಥಿರವಾಗಿಲ್ಲ. ಅಂತಹ ರಾಜ್ಯದಲ್ಲಿ ನೀವು ಈ ಸ್ಥಾನದಲ್ಲಿ ಮುಂದುವರಿಯುವುದು ರಾಜ್ಯಕ್ಕೆ ಗಂಭೀರ ಕಳವಳಕಾರಿ ವಿಷಯವಾಗಿದೆ.

ಬಿಹಾರವನ್ನು ಪದೇ ಪದೇ ಈ ರೀತಿ ಅವಮಾನಿಸಬೇಡಿ ಎಂದು ತೇಜಸ್ವಿ ತಿಳಿಸಿದ್ದಾರೆ. ಈ ವಿಡಿಯೋವನ್ನು ಆರ್‌ಜೆಡಿ ಮುಖ್ಯಸ್ಥ, ಮಾಜಿ ಮುಖ್ಯಮಂತ್ರಿ ಲಾಲು ಪ್ರಸಾದ್ ಕೂಡ ಹಂಚಿಕೊಂಡಿದ್ದಾರೆ. ರಾಷ್ಟ್ರಗೀತೆಯ ಅವಮಾನವನ್ನು ಭಾರತ ಸಹಿಸುವುದಿಲ್ಲ ಎಂದು ಲಾಲು ಬರೆದು ಕೊಂಡಿದ್ದಾರೆ.

ಪಾಟ್ನಾದ ಪಾಟಲೀಪುತ್ರ ಕ್ರೀಡಾ ಸಂಕೀರ್ಣದಲ್ಲಿ ಫಿಫಾ ವಿಶ್ವಕಪ್ ಪಂದ್ಯಾವಳಿಯ ಉದ್ಘಾಟನಾ ಸಮಾರಂಭದ ವೇಳೆ ನಿತೀಶ್ ಕುಮಾರ್ ಅವರು ವೇದಿಕೆಯಲ್ಲೇ ಇದ್ದ ಐಎಎಸ್ ಅಧಿಕಾರಿ, ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ ಜತೆ ನಗುತ್ತಾ ಮತನಾಡುತ್ತಿರುವ ದೃಶ್ಯ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಅಧಿಕಾರಿಯ ಗಮನ ಸೆಳೆಯಲು ಮೈ ಮುಟ್ಟುತ್ತಿರುವುದು ಕಾಣಿಸುತ್ತಿದೆ. ಒಂದು ಹಂತದಲ್ಲಿ ಸಭೆಯಲ್ಲಿದ್ದ ಪ್ರೇಕ್ಷಕರತ್ತ ನಕ್ಕು ಕೈಮುಗಿದು ನಮಸ್ಕರಿಸುತ್ತಿದ್ದಾರೆ. ದೀಪಕ್ ಕುಮಾರ್ ಅವರು ಮುಖ್ಯಮಂತ್ರಿಗಳೊಂದಿಗೆ ನಿಶ್ಶಬ್ದವಾಗಿ ಇರುವಂತೆ ಸನ್ನೆ ಮಾಡುತ್ತಿದ್ದಾರೆ.

ಯಾವುದೇ ಸಂದರ್ಭದಲ್ಲೂ ಭ್ರಷ್ಟಾಚಾರವನ್ನು ಸಹಿಸುವುದಿಲ್ಲ

ಅಲಹಾಬಾದ್: ದೆಹಲಿ ಹೈಕೋರ್ಟ್ ನ್ಯಾಯಾಧೀಶ ಯಶವಂತ್ ವರ್ಮಾ ಅವರ ಅಧಿಕೃತ ನಿವಾಸದಿಂದ ಸುಮಾರು 15 ಕೋಟಿ ನಗದು ಪತ್ತೆಯಾದ ಬೆನ್ನಲ್ಲೇ ಯಶವಂತ್ ವರ್ಮಾ ಅವರನ್ನು ದೆಹಲಿ ಹೈಕೋರ್ಟ್ ನಿಂದ ಅಲಹಾಬಾದ್ ಹೈಕೋರ್ಟ್‌ಗೆ ವರ್ಗಾವಣೆ ಮಾಡಿದ್ದಕ್ಕೆ ಅಲಹಾಬಾದ್ ಹೈಕೋರ್ಟ್ ಬಾರ್ ಅಸೋಸಿಯೇಷನ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ನಾವು ಕಸದ ಬುಟ್ಟಿಯಲ್ಲ, ಯಾವುದೇ ಸಂದರ್ಭದಲ್ಲೂ ಭ್ರಷ್ಟಾಚಾರವನ್ನು ಸಹಿಸುವುದಿಲ್ಲ ಎಂದು ಸಂಘವು ಭಾರತದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರಿಗೆ ಪತ್ರ ಬರೆದಿದೆ.

ಈ ಘಟನೆ ನಂತರ ಸುಪ್ರೀಂ ಕೋರ್ಟ್‌ನ ಕೊಲಿಜಿಯಂ ಅವರನ್ನು ಅಲಹಾಬಾದ್ ಹೈಕೋರ್ಟ್‌ಗೆ ವರ್ಗಾಯಿಸಲು ನಿರ್ಧರಿಸಿತು. ಘಟನೆಯ ಬಗ್ಗೆ ಮಾಹಿತಿ ಪಡೆದ ತಕ್ಷಣ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ನೇತೃತ್ವದ ಐದು ಸದಸ್ಯರ ಕೊಲಿಜಿಯಂ ಸಭೆ ನಡೆಸಿ ನ್ಯಾಯಮೂರ್ತಿ ವರ್ಮಾ ಅವರನ್ನು ದೆಹಲಿ ಹೈಕೋರ್ಟ್‌ನಿಂದ ಅಲಹಾಬಾದ್‌ಗೆ ಕಳುಹಿಸಲು ನಿರ್ಧರಿಸಿದೆ. ಇನ್ನು ನ್ಯಾಯಮೂರ್ತಿ ವರ್ಮಾ ಆಗಮನಕ್ಕೂ ಮೊದಲೇ ಅಲಹಾಬಾದ್ ಬಾರ್ ಅಸೋಸಿಯೇಷನ್ ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದೆ.

ಈ ತತ್ವಗಳನ್ನು ನಿರ್ಲಕ್ಷಿಸಿದ ಕ್ಷಣ, ಇಡೀ ಸಂಸ್ಥೆಯ ವಿಶ್ವಾಸಾರ್ಹತೆಯನ್ನು ಪ್ರಶ್ನಿಸಲಾಗುತ್ತದೆ.

ಪ್ರಸ್ತಾವನೆಯಲ್ಲಿ ಸಂಬಂಧಪಟ್ಟ ನ್ಯಾಯಾಧೀಶರ ಹೆಸರನ್ನು ಔಪಚಾರಿಕವಾಗಿ ಹೆಸರಿಸಲಾಗಿಲ್ಲವಾದರೂ, ಇತ್ತೀಚಿನ ಕೆಲವು ಆದೇಶಗಳು, ನ್ಯಾಯಾಲಯದ ಘಟನೆಗಳಿಂದಾಗಿ ವಿವಾದ ಉದ್ಭವಿಸಿದೆ ಎಂದು ಮೂಲಗಳು ತಿಳಿಸಿವೆ.

ಸುಪ್ರೀಂ ಕೋರ್ಟ್ ಕೊಲಿಜಿಯಂನ ಕೆಲವು ಸದಸ್ಯರು ನ್ಯಾಯಮೂರ್ತಿ ವರ್ಮಾ ಅವರ ವರ್ಗಾವಣೆಯ ಜೊತೆಗೆ ಅವರ ವಿರುದ್ಧವೂ ಕಠಿಣ ಕ್ರಮ ಕೈಗೊಳ್ಳಬೇಕೆಂದು ಬಯಸಿದ್ದಾರೆ ಎಂಬ ವರದಿಗಳಿವೆ. ಸುಪ್ರೀಂ ಕೋರ್ಟ್ ಕೊಲಿಜಿಯಂ ನ್ಯಾಯಮೂರ್ತಿ ವರ್ಮಾ ಅವರ ರಾಜೀನಾಮೆಯನ್ನು ಕೇಳಬೇಕು ಎಂದು ಅವರು ಹೇಳುತ್ತಾರೆ.

ಅಲ್ಲದೆ, ಅವರು ಹಾಗೆ ಮಾಡಲು ನಿರಾಕರಿಸಿದರೆ ಅವರ ವಿರುದ್ಧ ಆಂತರಿಕ ತನಿಖೆಯನ್ನು ಪ್ರಾರಂಭಿಸುವ ಬಗ್ಗೆ ಮಾತುಕತೆ ನಡೆಯುತ್ತಿದೆ. 1969ರ ಜನವರಿ 6ರಂದು ಅಲಹಾಬಾದ್‌ನಲ್ಲಿ ಜನಿಸಿದ ನ್ಯಾಯಮೂರ್ತಿ ವರ್ಮಾ, 2014ರ ಅಕ್ಟೋಬರ್ 13ರಂದು ಅಲಹಾಬಾದ್ ಹೈಕೋರ್ಟ್‌ನಲ್ಲಿ ನ್ಯಾಯಾಧೀಶರಾದರು. ಇದಾದ ನಂತರ ಅವರು ದೆಹಲಿ ಹೈಕೋರ್ಟ್‌ಗೆ ನೇಮಕವಾಗಿದ್ದರು.

ಸಾಂವಿಧಾನಿಕ ಮೌಲ್ಯಗಳನ್ನು ರಕ್ಷಿಸಲು

ನ್ಯಾಯಾಂಗದ ಅತಿಕ್ರಮಣ ಘಟನೆಗಳು ಹೆಚ್ಚುತ್ತಿರುವ ಸಮಯದಲ್ಲಿ, ಈ ಪ್ರಸ್ತಾಪವು ನ್ಯಾಯಪೀಠ, ಬಾರ್ ಕೌನ್ಸಿಲ್ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಕಾನೂನು ತಜ್ಞರು ನಂಬುತ್ತಾರೆ. ವಕೀಲರ ಸಂಘವು ತನ್ನ ನಿಲುವು ನ್ಯಾಯಾಂಗದ ವಿರುದ್ಧವಲ್ಲ, ಬದಲಾಗಿ ವಕೀಲರ ಘನತೆಯನ್ನು ರಕ್ಷಿಸಲು ಮತ್ತು ಸಾಂವಿಧಾನಿಕ ಮೌಲ್ಯಗಳನ್ನು ರಕ್ಷಿಸಲು ಎಂದು ಸ್ಪಷ್ಟಪಡಿಸಿದೆ. ನ್ಯಾಯಾಧೀಶರು ನಿಷ್ಪಕ್ಷಪಾತ, ತಟಸ್ಥತೆ, ನ್ಯಾಯಾಂಗ ಸಂಯಮವನ್ನು ಪ್ರದರ್ಶಿಸುವ ನಿರೀಕ್ಷೆಯಿದೆ ಎಂದು ನಿರ್ಣಯವು ಹೇಳುತ್ತದೆ.

ಲಂಡನ್ ಹೀಥ್ರೂ ವಿಮಾನ ನಿಲ್ದಾಣ ದಿನಪೂರ್ತಿ ಬಂದ್

ಲಂಡನ್: ವಿಶ್ವದ ಅತ್ಯಂತ ಜನನಿಬಿಡ ವಿಮಾನ ನಿಲ್ದಾಣಗಳಲ್ಲಿ ಒಂದಾಗಿರುವ ಲಂಡನ್‌ನ ಹೀಥ್ರೂ ವಿಮಾನ ನಿಲ್ದಾಣ ವಿದ್ಯುತ್ ಸಮಸ್ಯೆಯಿಂದ 2ರ ಮಧ್ಯರಾತ್ರಿಯವರೆಗೆ ವಿಮಾನ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿದೆ. ವಿಮಾನ ನಿಲ್ದಾಣದ ಹತ್ತಿರದಲ್ಲೇ ಇರುವ ವಿದ್ಯುತ್ ಸಬ್‌ಸ್ಟೇಷನ್‌ನಲ್ಲಿ ಅಗ್ನಿ ಅನಾಹುತ ಸಂಭವಿಸಿದೆ. ವಿದ್ಯುತ್ ಸಮಸ್ಯೆಯಿಂದ ಸಾವಿರಾರು ವಿಮಾನಗಳ ಸೇವೆಯಲ್ಲಿ ವ್ಯತ್ಯಯವಾಗಿದೆ. ನಮ್ಮ ಪ್ರಯಾಣಿಕರು ಮತ್ತು ಸಹೋದ್ಯೋಗಿಗಳ ಸುರಕ್ಷತೆಯ ಸಂಬಂಧ ಶುಕ್ರವಾರ ಪೂರ್ಣ ದಿನ ಹೀಥ್ರೂವನ್ನು ಮುಚ್ಚುವುದನ್ನು ಬಿಟ್ಟು ನಮಗೆ ಬೇರೆ ದಾರಿಯಿಲ್ಲ ಎಂದು ವಿಮಾನ ನಿಲ್ದಾಣ ತನ್ನ ಹೇಳಿಕೆಯಲ್ಲಿ ತಿಳಿಸಿದೆ. ಫ್ಲೈಟ್‌ರಾಡರ್ 24 ಪ್ರಕಾರ, ಹೀಥ್ರೂ ವಿಮಾನ ನಿಲ್ದಾಣಕ್ಕೆ ಬರುತ್ತಿದ್ದ ಕನಿಷ್ಠ 120 ವಿಮಾನಗಳನ್ನು ಬೇರೆ ಸ್ಥಳಗಳಿಗೆ ತಿರುಗಿಸಲಾಗಿದೆ. ಬ್ರಿಟಿಷ್ ಏರ್‌ವೇಸ್, ಎಮಿರೇಟ್ಸ್ ಮತ್ತು ಏರ್ ಇಂಡಿಯಾ ಕಂಪನಿಗಳು ವಿಮಾನ ನಿಲ್ದಾಣಕ್ಕೆ ತೆರಳುವ ಮತ್ತು ಅಲ್ಲಿಂದ ಮರಳುವ ಎಲ್ಲಾ ವಿಮಾನಗಳ ಸೇವೆಯನ್ನು ರದ್ದುಗೊಳಿಸಲಾಗಿದೆ ಎಂದು ಹೇಳಿಕೆಯಲ್ಲಿ ತಿಳಿಸಿವೆ. ಈ ಅನಾಹುತದಿಂದ ಪಶ್ಚಿಮ ಲಂಡನ್‌ನ ಜನತೆ ವಿದ್ಯುತ್ ಇಲ್ಲದೇ ಗುರುವಾರ ರಾತ್ರಿ ಕಳೆದಿದ್ದಾರೆ. 16,300 ಕ್ಕೂ ಹೆಚ್ಚು ಮನೆಗಳಿಗೆ ಸಮಸ್ಯೆಯಾಗಿದೆ. ಸಬ್‌ಸ್ಟೇಷನ್‌ನ ಕಾಣಿಸಿದ ಅಗ್ನಿಯ ಜ್ವಾಲೆ ಹಲವು ಕಿ.ಮೀ ದೂರದವರೆಗೆ ಕಾಣಿಸಿತ್ತು. ಲಂಡನ್ ಅಗ್ನಿಶಾಮಕ ದಳ 10 ಅಗ್ನಿಶಾಮಕ ವಾಹನಗಳು, ಸುಮಾರು 70 ಅಗ್ನಿಶಾಮಕ ದಳದವರನ್ನು ನಿಯೋಜಿಸಿ ಬೆಂಕಿ ನಂದಿಸುವ ಕಾರ್ಯಾಚರಣೆ ಮಾಡಿದೆ. ಅಗ್ನಿ ಅವಘಡಕ್ಕೆ ನಿಖರ ಕಾರಣ ತಿಳಿದು ಬಂದಿಲ್ಲ.

ಫೆಡರಲ್ ಶಿಕ್ಷಣ ಇಲಾಖೆ ರದ್ದುಗೊಳಿಸುವ ಆದೇಶಕ್ಕೆ ಟ್ರಂಪ್ ಸಹಿ

ಶಿಕ್ಷಣದ ಜವಾಬ್ದಾರಿಯನ್ನು ರಾಜ್ಯ ಸರ್ಕಾರಗಳಿಗೆ ವರ್ಗಾಯಿಸಲಿರುವ ಟ್ರಂಪ್

ವಾಷಿಂಗ್ಟನ್: ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಫೆಡರಲ್ ಶಿಕ್ಷಣ ಇಲಾಖೆಯನ್ನು ರದ್ದುಗೊಳಿಸುವ ಆದೇಶಕ್ಕೆ ಸಹಿ ಹಾಕಿದ್ದು, ಅಮೆರಿಕದ ಬಲಪಂಥೀಯರು ಹಲವು ದಶಕಗಳಿಂದ ಆಗ್ರಹಿಸುತ್ತಿದ್ದ ಬೇಡಿಕೆಯನ್ನು ಈಡೇರಿಸುವ ಪ್ರಕ್ರಿಯೆಗೆ ಚಾಲನೆ ನೀಡಿದ್ದಾರೆ. ಅಮೆರಿಕದ ರಾಜ್ಯ ಸರ್ಕಾರಗಳು ಫೆಡರಲ್ ಸರ್ಕಾರದ ಹಸ್ತಕ್ಷೇಪವಿಲ್ಲದೆ ಶಾಲೆಗಳನ್ನು ನಡೆಸಬೇಕೆಂದು ಅಮೆರಿಕದಲ್ಲಿ ದಶಕಗಳಿಂದ ಆಗ್ರಹ ಕೇಳಿಬಂದಿತ್ತು. ಇದಕ್ಕೆ ಪೂರಕವಾಗಿ ಸ್ಪಂದಿಸಿರುವ ಡೊನಾಲ್ಡ್ ಟ್ರಂಪ್, ಫೆಡರಲ್ ಸರ್ಕಾರದ ಅಧೀನದಲ್ಲಿರುವ ಶಿಕ್ಷಣ ಇಲಾಖೆಯನ್ನು ರದ್ದುಗೊಳಿಸುವ ಆದೇಶಕ್ಕೆ ಸಹಿ ಹಾಕಿದ್ದಾರೆ.

- **ಫೆಡರಲ್ ಸರ್ಕಾರದ ಹಣ ಉಳಿಸಲು ಈ ಕ್ರಮ ಎಂದ ಡೊನಾಲ್ಡ್ ಟ್ರಂಪ್**
- **ಡೊನಾಲ್ಡ್ ಟ್ರಂಪ್ ಆದೇಶಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಶಿಕ್ಷಣ ತಜ್ಞರು**

ಡೊನಾಲ್ಡ್ ಟ್ರಂಪ್ ಅವರು ಶೀಘ್ರದಲ್ಲೇ ಶಿಕ್ಷಣ ಇಲಾಖೆಗೆ ಹಣ ಮತ್ತು ಸಿಬ್ಬಂದಿಯನ್ನು ಕಡಿತಗೊಳಿಸುವ ಸಾಧ್ಯತೆ ದಟ್ಟವಾಗಿದ್ದು, ಅಮೆರಿಕದ ಅಧ್ಯಕ್ಷರ ಈ ಕ್ರಮ ಡೆಮಾಕ್ರಾಟ್ಸ್ ಮತ್ತು ಶಿಕ್ಷಣ ತಜ್ಞರ ಟೀಕೆಗೆ ಗುರಿಯಾಗಿದೆ. ಶಿಕ್ಷಣಕ್ಕೆ ಮಹತ್ವ ನೀಡುವುದು ಅಮೆರಿಕನ್ ಮೌಲ್ಯಗಳ ಭಾಗ ಎಂದು ಹಲವು ಶಿಕ್ಷಣ ತಜ್ಞರು ಟ್ರಂಪ್ ಅವರ ಆದೇಶವನ್ನು ಧಿಕ್ಕರಿಸಿದ್ದಾರೆ.

ಡೊನಾಲ್ಡ್ ಟ್ರಂಪ್ ಅವರು ಶ್ವೇತಭವನದ ಈಸ್ಟ್ ರೂಮ್‌ನಲ್ಲಿ ಶಾಲಾ ಮಕ್ಕಳ ಸಮ್ಮುಖದಲ್ಲೇ, ಶಿಕ್ಷಣ ಇಲಾಖೆಯನ್ನು ರದ್ದುಗೊಳಿಸುವ ಆದೇಶಕ್ಕೆ ಸಹಿ ಹಾಕಿ ಮುಗುಳ್ನಕ್ಕರು. ಈ ಕುರಿತು ಮಾತನಾಡಿರುವ ಅವರು, ನಾವು ಫೆಡರಲ್ ಶಿಕ್ಷಣ ಇಲಾಖೆಯನ್ನು ಸಂಪೂರ್ಣವಾಗಿ ತೆಗೆದುಹಾಕುವ ಪ್ರಕ್ರಿಯೆಯನ್ನು ಆರಂಭಿಸಿದ್ದೇವೆ. ಫೆಡರಲ್ ಶಿಕ್ಷಣ ಇಲಾಖೆಯಿಂದ ನಮಗೆ ಯಾವುದೇ ಪ್ರಯೋಜನವಿಲ್ಲ. ಹೀಗಾಗಿ ಶಿಕ್ಷಣದ ಜವಾಬ್ದಾರಿಯನ್ನು ನಾವು ರಾಜ್ಯ ಸರ್ಕಾರಗಳ ಹೆಗಲಿಗೆ ವರ್ಗಾಯಿಸುತ್ತೇವೆ ಎಂದು ಹೇಳಿದರು. ಅಮೆರಿಕ

ಅಧ್ಯಕ್ಷರ ಈ ಆದೇಶವು ಶಿಕ್ಷಣ ಕಾರ್ಯದರ್ಶಿ ಲಿಂಡಾ ಮೆಕ್‌ಮೋನ್‌ಗೆ ಶಿಕ್ಷಣ ಇಲಾಖೆಯನ್ನು ಮುಚ್ಚಲು ಮತ್ತು ರಾಜ್ಯಗಳಿಗೆ ಶಿಕ್ಷಣದ ಅಧಿಕಾರವನ್ನು ಹಿಂದಿರುಗಿಸಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳಲು ನಿರ್ದೇಶಿಸುತ್ತದೆ.

ವಿನಾಶಕಾರಿ ಕ್ರಮಗಳಲ್ಲಿ ಒಂದು

ಸೆನೆಟ್‌ನ ಉನ್ನತ ಡೆಮಾಕ್ರಾಟ್ ಸದಸ್ಯ ಚಕ್ ಶುಮರ್ ಅವರು ಡೊನಾಲ್ಡ್ ಟ್ರಂಪ್ ಅವರ ಈ ಆದೇಶವನ್ನು ಖಂಡಿಸಿದ್ದಾರೆ. ಡೊನಾಲ್ಡ್ ಟ್ರಂಪ್ ಸರ್ವಾಧಿಕಾರಿ ಮಾದರಿಯ ಅಧಿಕಾರವನ್ನು ನಡೆಸುತ್ತಿದ್ದು, ಫೆಡರಲ್ ಶಿಕ್ಷಣ ಇಲಾಖೆಯನ್ನು ರದ್ದುಗೊಳಿಸುವ ನಿರ್ಧಾರ ಅವರು ತೆಗೆದುಕೊಂಡ ಅತ್ಯಂತ ವಿನಾಶಕಾರಿ ಕ್ರಮಗಳಲ್ಲಿ ಒಂದು.. ಎಂದು ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಆದರೆ ಈ ಆದೇಶದ ಕುರಿತು ಶಿಕ್ಷಣ ತಜ್ಞರು ನ್ಯಾಯಾಲಯದ ಮೊರೆ ಹೋಗುವ ಸಾಧ್ಯತೆ ಕೂಡ ದಟ್ಟವಾಗಿದೆ. 1979ರಲ್ಲಿ ಸ್ಥಾಪನೆಯಾದ ಶಿಕ್ಷಣ ಇಲಾಖೆಯನ್ನು ಕಾಂಗ್ರೇಸ್ ಅನುಮೋದನೆ ಇಲ್ಲದೆ ಮುಚ್ಚಲು ಸಾಧ್ಯವಿಲ್ಲ.

ಆದರೆ ಡೊನಾಲ್ಡ್ ಟ್ರಂಪ್ ಅವರ ಪ್ರಸ್ತುತ ಆದೇಶವು ಹಣ, ಸಿಬ್ಬಂದಿಯನ್ನು ಕಡಿತಗೊಳಿಸುವ ಅಧಿಕಾರವನ್ನು ಹೊಂದಿದೆ.

ಸಾಂಪ್ರದಾಯಿಕವಾಗಿ ಯುಎಸ್ ಸರ್ಕಾರವು ಶಿಕ್ಷಣದಲ್ಲಿ ಸೀಮಿತ ಪಾತ್ರವನ್ನು ಹೊಂದಿದೆ. ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಸುಮಾರು ಶೇ. 13ರಷ್ಟು ಅನುದಾನವನ್ನು ಫೆಡರಲ್ ಸರ್ಕಾರ ನೀಡುತ್ತದೆ. ಉಳಿದ ಹಣವನ್ನು ರಾಜ್ಯಗಳು ಮತ್ತು ಸ್ಥಳೀಯ ಸಮುದಾಯಗಳು ನೀಡುತ್ತವೆ. ಆದರೆ ಕಡಿಮೆ ಆದಾಯದ ಶಾಲೆಗಳು ಮತ್ತು ವಿಶೇಷ ಅಗತ್ಯವುಳ್ಳ ವಿದ್ಯಾರ್ಥಿಗಳಿಗೆ, ಫೆಡರಲ್ ಅನುದಾನವು ಬಹಳ ಮುಖ್ಯವಾಗಿದೆ. ವಿದ್ಯಾರ್ಥಿಗಳಿಗೆ ಪ್ರಮುಖ ನಾಗರಿಕ ಹಕ್ಕುಗಳ ರಕ್ಷಣೆಗಳನ್ನು ಜಾರಿಗೊಳಿಸುವಲ್ಲಿ ಫೆಡರಲ್ ಸರ್ಕಾರದ ಅತ್ಯಗತ್ಯ ಎಂದು ಶಿಕ್ಷಣ ತಜ್ಞರು ಹೇಳುತ್ತಾರೆ.

ಟ್ರಂಪ್ ಅವರ ಚುನಾವಣಾ ಭರವಸೆಗಳಲ್ಲಿ ಫೆಡರಲ್ ಶಿಕ್ಷಣ ಇಲಾಖೆಯನ್ನು ಮುಚ್ಚುವುದು ಕೂಡ ಒಂದಾಗಿತ್ತು. ಅಧ್ಯಕ್ಷರು ಈಗ ತಮ್ಮ ಭರವಸೆಯನ್ನು ಈಡೇರಿಸಿದ್ದಾರೆ.

ಆದರೆ ಫೆಡರಲ್ ಶಿಕ್ಷಣ ಇಲಾಖೆಯನ್ನು ಮುಚ್ಚುವ ತಮ್ಮ ನಿರ್ಧಾರವನ್ನು ಸಮರ್ಥಿಸಿಕೊಂಡಿರುವ ಡೊನಾಲ್ಡ್ ಟ್ರಂಪ್, ಫೆಡರಲ್ ಸರ್ಕಾರಕ್ಕೆ ಹಣವನ್ನು ಉಳಿಸಲು ಮತ್ತು ಅಮೆರಿಕದ ಶೈಕ್ಷಣಿಕ ಗುಣಮಟ್ಟವನ್ನು ಸುಧಾರಿಸಲು ಈ ಕ್ರಮ ಅವಶ್ಯಕ.. ಎಂದು ಅಭಿಪ್ರಾಯಪಟ್ಟಿದ್ದಾರೆ. ಫ್ಲೋರಿಡಾದ ಗವರ್ನರ್ ರಾನ್ ಡಿಸಾಂಟಿಸ್, ಟೆಕ್ಸಾಸ್‌ನ ಗವರ್ನರ್ ಗ್ರೆಗ್ ಅಬಾಟ್ ಸೇರಿದಂತೆ, ಹಲವು ರಿಪಬ್ಲಿಕನ್ ನಾಯಕರು ಈ ಸಹಿ ಸಮಾರಂಭದಲ್ಲಿ ಉಪಸ್ಥಿತರಿದ್ದು ಡೊನಾಲ್ಡ್ ಟ್ರಂಪ್ ಅವರ ನಿರ್ಧಾರವನ್ನಜು ಬೆಂಬಲಿಸಿದರು. WWEನ ಮಾಜಿ CEO ಆಗಿದ್ದ ಮೆಕ್‌ಮೋನ್‌ರನ್ನು ಇಲಾಖೆಯ ಮುಖ್ಯಸ್ಥರನ್ನಾಗಿ ನೇಮಿಸಿದ್ದು, ಇಲಾಖೆಯ ದಿನಗಳು ಹತ್ತಿರವಾಗುತ್ತಿವೆ ಎಂಬುದರ ಸಂಕೇತವಾಗಿತ್ತು. ಸಹಿ ಸಮಾರಂಭದಲ್ಲಿ ಮಾತನಾಡಿದ ಅಧ್ಯಕ್ಷರು, ಅವರು ನಮ್ಮ ಕೊನೆಯ ಶಿಕ್ಷಣ ಕಾರ್ಯದರ್ಶಿಯಾಗುತ್ತಾರೆ ಎಂದು ನಾನು ಭಾವಿಸುತ್ತೇನೆ ಎಂದು ಹೇಳಿರುವುದು ಗಮನ ಸೆಳೆದಿದೆ.

ಪಾಕ್‌ಸೇನಾ ಕ್ಯಾಪ್ಟನ್ ಹತ್ಯೆ; ಎನ್‌ಕೌಂಟರ್‌ನಲ್ಲಿ 10 ಭಯೋತ್ಪಾದಕರು ಸಾವು

ಪೇಶಾವರ್: ಪಾಕಿಸ್ತಾನದ ಪ್ರಕ್ಷುಬ್ಧ ಖೈಬರ್ ಪಖ್ತುಂಖ್ವಾದಲ್ಲಿ 10 ಭಯೋತ್ಪಾದಕರನ್ನು ಹತ್ಯೆ ಮಾಡಿರುವುದಾಗಿ ಪಾಕಿಸ್ತಾನ ಸೇನೆ ಹೇಳಿಕೊಂಡಿದೆ. ದೇಶದ ವಾಯುವ್ಯ ಪ್ರಾಂತ್ಯದ ಖೈಬರ್ ಪಖ್ತುನ್ಖ್ವಾದಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ ನಿಷೇಧಿತ ಸಂಘಟನೆಗೆ ಸೇರಿದ ಕನಿಷ್ಠ ಏಳು ಉಗ್ರರು ಸಾವನ್ನಪ್ಪಿದ್ದಾರೆ ಎಂದು ಮೂಲಗಳು ತಿಳಿಸಿವೆ. ಈ ಕಾರ್ಯಾಚರಣೆಯ ಸಮಯದಲ್ಲಿ ಪಾಕಿಸ್ತಾನಿ ಸೇನಾ ಕ್ಯಾಪ್ಟನ್ ಕೂಡ ಸಾವನ್ನಪ್ಪಿದ್ದಾರೆ. ಗುಪ್ತಚರ ಮಾಹಿತಿಯ ಆಧಾರದ ಮೇಲೆ ದಕ್ಷಿಣ ವಜೀರಿಸ್ತಾನದ ಗಡಿಯಲ್ಲಿರುವ ಡೇರಾ ಇಸ್ಮಾಯಿಲ್ ಖಾನ್ ಜಿಲ್ಲೆಯ ಕರ್ರಿ ಮಲಾಂಗ್ ಪ್ರದೇಶದಲ್ಲಿ ಈ ಕಾರ್ಯಾಚರಣೆ ನಡೆಸಲಾಗಿದೆ ಎಂದು ಹೇಳಲಾಗುತ್ತಿದೆ.

ಪಾಕಿಸ್ತಾನ ಸೇನೆಯ ಪ್ರಕಾರ, ಕಾರ್ಯಾಚರಣೆಯಲ್ಲಿ ಇನ್ನೂ ಮೂವರು ಸೈನಿಕರು ಗಾಯಗೊಂಡಿದ್ದಾರೆ. ಏತನ್ಮಧ್ಯೆ, ಪಾಕಿಸ್ತಾನ ಸರಣಿ ಭಯೋತ್ಪಾದಕ ಘಟನೆಗಳನ್ನು ಎದುರಿಸುತ್ತಿದೆ. ಇತ್ತೀಚೆಗೆ, ಪಾಕಿಸ್ತಾನದ ಕ್ವೆಟ್ಟಾದಲ್ಲಿ ನಡೆದ ರೈಲು ಅಪಹರಣ ಘಟನೆಯು ಕೋಲಾಹಲವನ್ನು ಸೃಷ್ಟಿಸಿತು. ಇದರಲ್ಲಿ ಬಲೂಚಿಸ್ತಾನ್ ಲಿಬರೇಶನ್ ಆರ್ಮಿ (ಬಿಎಲ್‌ಎ) 400ಕ್ಕೂ ಹೆಚ್ಚು ಪಾಕಿಸ್ತಾನಿ ಪ್ರಯಾಣಿಕರು ಸೇರಿದ



ನಿತಿನ್‌ಗೆ ಜೊತೆಯಾಗಿ ಶ್ರೀಲೀಲಾ

ನಟಿ ಶ್ರೀಲೀಲಾ ತೆಲುಗಿನಲ್ಲಿ ಬೇಡಿಕೆಯ ನಟಿಯರಲ್ಲಿ ಒಬ್ಬರಾಗಿದ್ದಾರೆ. ಸದ್ಯ 'ರಾಬಿನ್‌ಹುಡ್' ಸಿನಿಮಾದ ಪ್ರಚಾರ ಕಾರ್ಯದಲ್ಲಿ ಬ್ಯುಸಿಯಾಗಿದ್ದಾರೆ. ಈ ಚಿತ್ರದ ಮೂಲಕ ಮತ್ತೆ ನಿತಿನ್‌ಗೆ ನಾಯಕಿಯಾಗಿ ಶ್ರೀಲೀಲಾ ಅದೃಷ್ಟ ಪರೀಕ್ಷೆಗಿಳಿದಿದ್ದಾರೆ. ಇತ್ತೀಚೆಗೆ ಶ್ರೀಲೀಲಾ ನಟಿಸಿರುವ ಸಿನಿಮಾಗಳು ಗಲ್ಲಾಪೆಟ್ಟಿಗೆಯಲ್ಲಿ ಕಲೆಕ್ಷನ್ ಮಾಡೋದ್ರಲ್ಲಿ ಸೋತಿದೆ. ಹಾಗಂತ ಅವರಿಗೆ ಅವಕಾಶಗಳ ಕೊರತೆಯಿಲ್ಲ. 'ಪುಷ್ಪ 2'ನಲ್ಲಿ ಅಲ್ಲು ಅರ್ಜುನ್ ಜೊತೆ ಶ್ರೀಲೀಲಾ ಸೊಂಟ ಬಳುಕಿಸಿದ್ದು, ಪಡ್ಡೆಹುಡುಗರಿಗೆ ಕಿಕ್ ಕೊಟ್ಟಿತ್ತು. ಈಗ 'ರಾಬಿನ್‌ಹುಡ್' ಜೊತೆ ನಟಿ ಬರುತ್ತಿದ್ದಾರೆ.

'ರಾಬಿನ್‌ಹುಡ್' 'ಸಿನಿಮಾದಲ್ಲಿ ನಿತಿನ್ ನಾಯಕಿಯಾಗಿ ಶ್ರೀಲೀಲಾ ನಟಿಸಿದ್ದಾರೆ. 2ನೇ ಬಾರಿ ನಿತಿನ್‌ಗೆ ಅವರು ಜೋಡಿಯಾಗಿದ್ದಾರೆ. ಇದೇ ಮಾ.28ರಂದು ಸಿನಿಮಾ ರಿಲೀಸ್ ಆಗಲಿದೆ. ಈ ಸಿನಿಮಾ ಹಿಟ್ ಆದರೆ ಮತ್ತಷ್ಟು ಅವಕಾಶಗಳು ನಟಿಯನ್ನು ಅರಸಿ ಬರಲಿದೆ. ಈ ಚಿತ್ರದ ಮೂಲಕ ನಿತಿನ್ ಜೊತೆ ಮತ್ತೊಮ್ಮೆ ನಟಿ ಅದೃಷ್ಟ ಪರೀಕ್ಷೆಗಿಳಿದಿದ್ದಾರೆ. ಈ ಹಿಂದೆ 'ಎಕ್ಸ್ಟ್ರಾ ಆರ್ಡಿನರಿ ಮ್ಯಾನ್' ಸಿನಿಮಾದಲ್ಲಿ ನಿತಿನ್‌ಗೆ ನಾಯಕಿಯಾಗಿ ಶ್ರೀಲೀಲಾ ನಟಿಸಿದರು.

ಮಾ.28ರಂದು ಸಿನಿಮಾ ರಿಲೀಸ್



ಮತ್ತೆ ಸಿನಿಮಾಗೆ ದೀಪಿಕಾ ಪಡುಕೋಣೆ

ದೀಪಿಕಾ ನಟನೆಗೆ ಯಾವಾಗ ಕಮ್‌ಬ್ಯಾಕ್ ಮಾಡ್ತಾರೆ ಎಂಬುದರ ಬಗ್ಗೆ ಮಾತನಾಡಿದ್ದಾರೆ. ತಾಯನ್ತದ ಬಳಿಕ ನಟನೆಗೆ ಮರಳುವ ಸವಾಲುಗಳು ಬಗ್ಗೆ ನಟಿ ಮೌನ ಮುರಿದಿದ್ದಾರೆ. ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ದೀಪಿಕಾ, ನನ್ನ ಬದುಕಿನಲ್ಲಿ ಈಗ ನಾನು ಹೊಸ ರೀತಿಯ ಸವಾಲುಗಳನ್ನು ಎದುರಿಸುತ್ತಿದ್ದೇನೆ. ಒಬ್ಬ ತಾಯಿಯಾಗಿ ಮಗುವಿಗೆ ಹೇಗೆ ಸಮಯ ಕೊಡಬೇಕು. ಹಾಗೆಯೇ ಮತ್ತೆ ಕೆಲಸಕ್ಕೆ ಮರಳುವುದಾದರೆ ನಾನು ಮಾನಸಿಕವಾಗಿ ಹೇಗೆ ಸಿದ್ಧವಾಗಿರಬೇಕು ಎಂದು ತಯಾರಾಗುತ್ತಿದ್ದೇನೆ ಎಂದಿದ್ದಾರೆ. ನಾನು ಕೆಲಸಕ್ಕೆ ಮರಳುತ್ತೇನೆ ಎಂದರೆ ನನ್ನಲ್ಲಿ ಯಾವುದೇ ಪಾಪಪ್ರಜ್ಞೆ ಇರಬಾರದು. ನನ್ನ ಮಗಳಿಗೆ ಯಾವುದೇ ಕೊರತೆ ಎದುರಾಗದಂತೆ ನೋಡಿಕೊಳ್ಳಬೇಕು. ಮಗಳನ್ನು ಸರಿಯಾಗಿ ನೋಡಿಕೊಳ್ಳುತ್ತಿಲ್ಲವಲ್ಲ ಎಂಬ ಕೊರಗಿನಿಂದ ಕೆಲಸ ಮಾಡಬಾರದು. ಈ ನಿಟ್ಟಿನಲ್ಲಿ ತಾವು ತಯಾರಾಗುತ್ತಿರೋದಾಗಿ ನಟಿ ಹೇಳಿದ್ದಾರೆ.

ಪ್ರಿಯಾಂಕಾ ಚೋಪ್ರಾಗೆ ೩೦ ಕೋಟಿ ಸಂಭಾವನೆ

ದೇಸಿ ಗರ್ಲ್ ಪ್ರಿಯಾಂಕಾ ಚೋಪ್ರಾ ಅವರು ಸ್ಟಾರ್ ನಟಿಯರಾದ ಆಲಿಯಾ ಭಟ್, ಕರೀನಾ ಕಪೂರ್, ದೀಪಿಕಾ ಪಡುಕೋಣೆ, ನಯನತಾರಾರನ್ನೇ ಹಿಂದಿಕ್ಕಿದ್ದಾರೆ. ಮಹೇಶ್ ಬಾಬು ನಟನೆಯ ಹೊಸ ಸಿನಿಮಾದಲ್ಲಿ ನಟಿಸಲು ಪ್ರಿಯಾಂಕಾ ಚೋಪ್ರಾ 30 ಕೋಟಿ ರೂ. ಸಂಭಾವನೆಗೆ ಮಾತುಕತೆ ನಡೆಸಿದ್ದಾರೆ. ಈ ಮೂಲಕ ಸ್ಟಾರ್ ನಟಿಯರಿಗೆ ಪ್ರಿಯಾಂಕಾ ಸೆಡ್ಡು ಹೊಡೆದಿದ್ದಾರೆ. ಕಿಯಾರಾ, ಆಲಿಯಾ, ದೀಪಿಕಾ ಪಡುಕೋಣೆ ಸೇರಿದಂತೆ ಕೆಲ ಟಾಪ್ ನಟಿಯರು ಒಂದು ಸಿನಿಮಾಗೆ 5ರಿಂದ 15 ಕೋಟಿ ರೂ. ಸಂಭಾವನೆ ಪಡೆಯುತ್ತಾರೆ. ಹೀಗಿರುವಾಗ 30 ಕೋಟಿ ರೂ. ಸಂಭಾವನೆಯನ್ನು ಪ್ರಿಯಾಂಕಾ ಪಡೆಯುವ ಮೂಲಕ ಎಲ್ಲರ ಹುಬ್ಬೆರಿಸಿದ್ದಾರೆ. ಒಂದು ಸಿನಿಮಾಗೆ 30 ಕೋಟಿ ರೂ. ಸಂಭಾವನೆ ಪಡೆದ ಭಾರತದ ಮೊದಲ ನಟಿ ಎಂಬ ಹೆಗ್ಗಳಿಕೆಗೆ ಅವರು ಪಾತ್ರರಾಗಿದ್ದಾರೆ. ಕಳೆದ ಕೆಲವು ವರ್ಷಗಳಿಂದ ದೇಸಿ ಗರ್ಲ್ ಹಾಲಿವುಡ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದರು. ಇದೀಗ ಮಹೇಶ್ ಬಾಬು ನಟನೆಯ 29ನೇ ಚಿತ್ರಕ್ಕೆ ಅವರು ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ. ಅದಷ್ಟೇ ಅಲ್ಲ, ಒಡಿಶಾ, ವಿಶಾಖಪಟ್ಟಣಂ, ಹೈದರಾಬಾದ್‌ನಲ್ಲಿ ಈಗಾಗಲೇ ಶೂಟಿಂಗ್ ನಡೆಯುತ್ತಿದ್ದು, ನಟಿ ಕೂಡ ಭಾಗಿಯಾಗಿದ್ದಾರೆ. ಈ ಸಿನಿಮಾವನ್ನು ರಾಜಮೌಳಿ ನಿರ್ದೇಶನ ಮಾಡುತ್ತಿದ್ದಾರೆ. ಈ ಹಿಂದೆ ರಾಮ್ ಚರಣ್, ದಳಪತಿ ವಿಜಯ್ ಜೊತೆ ತೆಲುಗು ಸಿನಿಮಾಗಳಲ್ಲಿ ಪ್ರಿಯಾಂಕಾ ನಟಿಸಿದ್ದಾರೆ. ಈಗ ಮಹೇಶ್ ಬಾಬುಗೆ ನಾಯಕಿಯಾಗಿ ಬರೋಬ್ಬರಿ 20 ವರ್ಷಗಳ ಬಳಿಕ ಸೌತ್ ಸಿನಿಮಾರಂಗಕ್ಕೆ ನಟಿ ಕಮ್ ಬ್ಯಾಕ್ ಆಗ್ತಿದ್ದಾರೆ.

ಮಹೇಶ್ ಬಾಬು ನಟನೆಯ 29ನೇ ಚಿತ್ರ ಡಿ

ಹಾಟ್ ಅವತಾರ ತಾಳಿದ ಜಾಕ್ವೆಲಿನ್

ನಟಿಯ ಲುಕ್‌ಗೆ ಪಡ್ಡೆ ಹುಡುಗರು ಫಿದಾ

ಬಾಲಿವುಡ್ ಬೆಡಗಿ ಜಾಕ್ವೆಲಿನ್ ಫರ್ನಾಂಡಿಸ್ ಹಾಟ್ ಫೋಟೋಶೂಟ್‌ವೊಂದನ್ನು ಹಂಚಿಕೊಂಡು ಸೋಶಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿದೆ. ಮಾದಕವಾಗಿ ಕಾಣಿಸಿಕೊಂಡಿರುವ ನಟಿಯ ಬ್ಯೂಟಿಗೆ ಪಡ್ಡೆಹುಡುಗರು ಫಿದಾ ಆಗಿದ್ದಾರೆ. ಸದಾ ಒಂದಲ್ಲಾ ಒಂದು ಫೋಟೋಶೂಟ್ ಮೂಲಕ ಪಡ್ಡೆಹುಡುಗರ ನಿದ್ದೆ ಕದ್ದಿಯೋ ಜಾಕ್ವೆಲಿನ್ ಇದೀಗ ಮತ್ತಷ್ಟು ಹಾಟ್ ಆಗಿ ಕಾಣಿಸಿಕೊಂಡು ಕ್ಯಾಮೆರಾಗೆ ಪೋಸ್ ನೀಡಿದ್ದಾರೆ.

ಕಪ್ಪು ಬಣ್ಣದ ಉಡುಗೆಯಲ್ಲಿ ಮಸ್ತ್ ಆಗಿ ಪೋಸ್ ನೀಡಿದ್ದಾರೆ. ವಿವಿಧ ಭಂಗಿಯಲ್ಲಿ ಕ್ಯಾಮೆರಾ ಮುಂದೆ ಜಾಕ್ವೆಲಿನ್ ಮಿಂಚಿದ್ದಾರೆ. ನಟಿಯ ಹಾಟ್ ಅವತಾರಕ್ಕೆ ಪಡ್ಡೆಹುಡುಗರು ಬೋಲ್ಡ್ ಆಗಿದ್ದಾರೆ. ಬಾಲಿವುಡ್‌ನ ಬಹುನಿರೀಕ್ಷಿತ 'ಹೌಸ್‌ಫುಲ್ 5', 'ವೆಲ್‌ಕಮ್ ಟು ದಿ ಜಂಗಲ್' ಸಿನಿಮಾಗಳಲ್ಲಿ ಜಾಕ್ವೆಲಿನ್ ನಟಿಸಿದ್ದಾರೆ. ಇದರ ರಿಲೀಸ್‌ಗಾಗಿ ಅವರು ಎದುರು ನೋಡ್ತಿದ್ದಾರೆ. ಸದ್ಯ ಜಾಕ್ವೆಲಿನ್ ಕೆರಿಯರ್‌ನಲ್ಲಿ ಯಾವ ಸಿನಿಮಾ ಕೂಡ ಹಿಟ್ ಆಗ್ತಿಲ್ಲ. ಸಿನಿಮಾ ಸಕ್ಸಸ್ ಆಗದೇ ಇದ್ದರೂ ಅವರಿಗೆ ಅವಕಾಶಗಳ ಕೊರತೆಯಿಲ್ಲ. ಆದರೆ ಅವರು ಕಥೆಗೆ ಹೆಚ್ಚಿನ ಪ್ರಾಮುಖ್ಯತೆ ಕೊಡುತ್ತಾರೆ. ಇನ್ನೂ ಕನ್ನಡದ 'ವಿಕ್ರಾಂತ್ ರೋಣ' ಸಿನಿಮಾದಲ್ಲಿ ರಕ್ಕಮ್ಮ ಹಾಡಿಗೆ ಸುದೀಪ್ ಜೊತೆ ಜಾಕ್ವೆಲಿನ್ ಸೊಂಟ ಬಳುಕಿಸಿದ್ದರು. ಈ ಸಾಂಗ್ ಸೂಪರ್ ಹಿಟ್ ಆಗಿತ್ತು. ಈ ಚಿತ್ರವನ್ನು ಅನೂಪ್ ಭಂಡಾರಿ ನಿರ್ದೇಶನ ಮಾಡಿದರು.

ಡ್ರ್ಯಾಗನ್ ಬಳಿಕ ಹೆಚ್ಚಿದ ಬೇಡಿಕೆ

ಮುಗಿಲ್ ಪೇಟೆ ಬಂಪರ್ ಆಫರ್

ಕನ್ನಡದ 'ಮುಗಿಲ್‌ಪೇಟೆ' ಚಿತ್ರದ ನಟಿ ಕಯಾದು ಲೋಹರ್ ಇದೀಗ ಸೌತ್‌ನಲ್ಲಿ ಬ್ಯುಸಿಯಾಗಿದ್ದಾರೆ. ಇತ್ತೀಚೆಗೆ ಕಯಾದು ನಟಿಸಿದ ತಮಿಳಿನ 'ಡ್ರ್ಯಾಗನ್' ಸಿನಿಮಾ ಸಕ್ಸಸ್ ಕಂಡಿದೆ. ಈ ಬೆನ್ನಲ್ಲೇ ಹಲವಾರು ಸಿನಿಮಾ ಅವಕಾಶಗಳು ಅವರನ್ನು ಅರಸಿ ಬಂದಿವೆ. ಸ್ಟಾರ್ ನಟನ ಜೊತೆ ನಟಿಸುವ ಚಾನ್ಸ್ ಸಿಕ್ಕಿದೆ.

ಫೆ.21ರಂದು ರಿಲೀಸ್ ಆದ ತಮಿಳಿನ 'ಡ್ರ್ಯಾಗನ್' ಸಿನಿಮಾದಲ್ಲಿ ಪ್ರದೀಪ್ ರಂಗನಾಥನ್‌ಗೆ ನಾಯಕಿಯಾಗಿ ಗಮನ ಸೆಳೆದಿದ್ದಾರೆ. ಈ ಸಿನಿಮಾ ಯಶಸ್ವಿಯಾಗಿದೆ. ಈ ಬೆನ್ನಲ್ಲೇ ತಮಿಳಿನ ಖ್ಯಾತ ನಟ ಸಿಂಬು ನಟನೆಯ ಹೊಸ ಸಿನಿಮಾಗೆ ನಾಯಕಿಯಾಗಿ ಆಯ್ಕೆಯಾಗಿದ್ದಾರೆ ಎನ್ನಲಾದ ವಿಚಾರವೊಂದು ಚರ್ಚೆಗೆ ಗ್ರಾಸವಾಗಿದೆ. ಈ ಚಿತ್ರವನ್ನು ರಾಮ್ ಕುಮಾರ್ ಎಂಬುವವರು ನಿರ್ದೇಶನ ಮಾಡ್ತಿದ್ದಾರೆ. ಇನ್ನೂ ತೆಲುಗಿನ ನಟ ವಿಶ್ವಕ್ ಸೇನ್ ನಟನೆಯ 'ಫಂಕಿ' ಚಿತ್ರಕ್ಕೂ ಕಯಾದು ಅವರನ್ನೇ ನಾಯಕಿಯಾಗಿ ಸೆಲೆಕ್ಟ್ ಮಾಡಿದ್ದಾರೆ ಎನ್ನಲಾಗಿದೆ. ಈ ಎರಡು ಪ್ರಾಜೆಕ್ಟ್‌ಗಳ ಬಗ್ಗೆ ಅಧಿಕೃತವಾಗಿ ಘೋಷಣೆ ಆಗುವವರೆಗೂ ಕಾದುನೋಡಬೇಕಿದೆ. ಸದ್ಯ ಕಯಾದು ತಮಿಳಿನ 'ಹೃದಯಂ ಮುರಳಿ' ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಅಥರ್ವಗೆ ನಾಯಕಿಯಾಗಿ ಸಾಥ್ ನೀಡುತ್ತಿದ್ದಾರೆ. ಈ ಸಿನಿಮಾದ ಚಿತ್ರೀಕರಣ ಭರದಿಂದ ನಡೆಯುತ್ತಿದೆ.

2021ರಲ್ಲಿ ಕ್ರೇಜಿಸ್ಟಾರ್ ರವಿಚಂದ್ರನ್ ಪುತ್ರ ಮನೋರಂಜನ್ ನಟನೆಯ 'ಮುಗಿಲ್ ಪೇಟೆ' ಚಿತ್ರಕ್ಕೆ ನಾಯಕಿಯಾಗಿ ಕಯಾದು ಸ್ಯಾಂಡಲ್‌ವುಡ್‌ಗೆ ಎಂಟ್ರಿ ಕೊಟ್ಟರು. ಆ ನಂತರ ಮಲಯಾಳಂ, ತೆಲುಗು, ಮರಾಠಿ ಸಿನಿಮಾಗಳಲ್ಲಿ ನಟಿಸಿದರು.

ಧನಶ್ರೀಗೆ 4.75 ಕೋಟಿ ರೂಪಾಯಿ ಜೀವನಾಂಶ



ಧನಶ್ರೀ ವರ್ಮ ಮತ್ತು ಯಜುವೇಂದ್ರ ಚಾಹಲ್ ಅವರ ವಿಚ್ಛೇದನದಲ್ಲಿ ಧನಶ್ರೀಗೆ 4.75 ಕೋಟಿ ರೂಪಾಯಿ ಜೀವನಾಂಶ ಸಿಕ್ಕಿದೆ. ಸಾಮಾಜಿಕ ಮಾಧ್ಯಮದಲ್ಲಿ ಈ ಮೊತ್ತವನ್ನು ದಿನನಿತ್ಯದ ಗಳಿಕೆಯಾಗಿ ಲೆಕ್ಕಾಚಾರ ಮಾಡಲಾಗಿದೆ. 2020ರಲ್ಲಿ ವಿವಾಹವಾದ ಈ ದಂಪತಿ ನಾಲ್ಕು ವರ್ಷಗಳ ಬಳಿಕ ಬೇರ್ಪಟ್ಟಿದ್ದಾರೆ. ವಿಚ್ಛೇದನಕ್ಕೆ ನಿಖರ ಕಾರಣ ತಿಳಿದುಬಂದಿಲ್ಲ. ಡ್ಯಾನ್ಸರ್, ಇನ್‌ಫ್ಲ್ಯುಯೆನ್ಸರ್ ಧನಶ್ರೀ ವರ್ಮ ಹಾಗೂ ಕ್ರಿಕೆಟರ್ ಯಜುವೇಂದ್ರ ಚಾಹಲ್ ಸಂಸಾರ ಕೊನೆ ಆಗಿದೆ. ಇಬ್ಬರೂ ಅಧಿಕೃತವಾಗಿ ಬೇರೆ ಆಗಿದ್ದಾರೆ. ಮಾರ್ಚ್ 20ರಂದು ಈ ಜೋಡಿ ಕೋರ್ಟ್‌ಗೆ ಆಗಮಿಸಿತ್ತು. ಅಲ್ಲಿ ಅವರು ವಿಚ್ಛೇದನ ಪಡೆದರು. ಈ ಬೆನ್ನಲ್ಲೇ ಧನಶ್ರೀ ವರ್ಮಾಗೆ ಸಿಕ್ಕ ಜೀವನಾಂಶದ ವಿಚಾರ ಚರ್ಚೆ ಆಗುತ್ತಿದೆ. ಚಹಲ್‌ನಿಂದ ವಿಚ್ಛೇದನ ಪಡೆಯುತ್ತಿರುವುದಕ್ಕೆ ಧನಶ್ರೀಗೆ 4.75 ಕೋಟಿ ರೂಪಾಯಿ ಜೀವನಾಂಶ ಸಿಕ್ಕಿದೆ. ಇದನ್ನು ಕೆಲವರು ದಿನದ ಲೆಕ್ಕಕ್ಕೆ ಕೌಂಟ್ ಮಾಡಿ ಹೇಳುವ ಪ್ರಯತ್ನ ಮಾಡಿದ್ದಾರೆ. ಧನಶ್ರೀ ಹಾಗೂ ಚಾಹಲ್ 2020ರ ಡಿಸೆಂಬರ್‌ನಲ್ಲಿ ವಿವಾಹ ಆದರು. ಗುರುಗ್ರಾಮದಲ್ಲಿ ಈ ವಿವಾಹ ನಡೆಯಿತು. ವೃತ್ತಿಯಲ್ಲಿ ಡ್ಯಾನ್ಸ್ ಕೊರಿಯೋಗ್ರಾಫರ್ ಆಗಿರೋ ಧನಶ್ರೀ ನಾಲ್ಕು ವರ್ಷದ ಮೂರು ತಿಂಗಳ ಕಾಲ ಚಹಲ್ ಜೊತೆ ಸಂಸಾರ ನಡೆಸಿದರು. ಈಗ ಇವರು ಬೇರೆ ಆಗಿದ್ದಾರೆ. ಇದಕ್ಕಾಗಿ ಅವರು ಪಡೆಯುತ್ತಿರುವ ಹಣ ಬೋರಬ್ಬರಿ 4.75 ಕೋಟಿ ರೂಪಾಯಿ. ಸೋಶಿಯಲ್ ಮೀಡಿಯಾದಲ್ಲಿ ಈ ಬಗ್ಗೆ ಚರ್ಚೆ ನಡೆಯುತ್ತಿದೆ. ಕೆಲವರು ಧನಶ್ರೀ ಅವರ ಒಂದು ದಿನದ ಗಳಿಕೆ ಎಷ್ಟಾಯಿತು ಎಂಬ ಲೆಕ್ಕಾಚಾರವನ್ನು ತೆಗೆದು ತೋರಿಸಿದ್ದಾರೆ. ಒಂದು ಅಂದಾಜಿನ ಪ್ರಕಾರ ಹೇಳುವಾದಾದರೆ ಧನಶ್ರೀ ಅವರು ಚಹಲ್ ಜೊತೆ 1,550 ದಿನ ವಾಸ ಮಾಡಿದ್ದಾರೆ.

ಇದಕ್ಕಾಗಿ ಅವರಿಗೆ ಸಿಕ್ಕಿದ್ದು ಸುಮಾರು ಐದು ಕೋಟಿ.

1550 ದಿನವನ್ನು 4.75 ಕೋಟಿ ರೂಪಾಯಿನಲ್ಲಿ ಡಿವೈಡ್ ಮಾಡಿದಾಗ ಒಂದು ದಿನಕ್ಕೆ ಬರುವ ಮೊತ್ತ ಬರೋಬ್ಬರಿ 30 ಸಾವಿರ ರೂಪಾಯಿ. ಈ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ಕಮೆಂಟ್‌ಗಳ ಸುರಿಮಳೆ ಹರಿದು ಬಂದಿದೆ. ಅಂದಹಾಗೆ ಈ ರೀತಿ ಸಿಗುವ ಹಣಕ್ಕೆ ಯಾವುದೇ ತೆರಿಗೆ ಇರುವುದಿಲ್ಲ. ಧನಶ್ರೀ ಅವರು ಡ್ಯಾನ್ಸ್ ಕ್ಲಾಸ್ ನಡೆಸುತ್ತಾ ಇದ್ದರು. ಡ್ಯಾನ್ಸ್ ಕಲಿಯುವ ಉದ್ದೇಶದಿಂದ ಚಾಹಲ್ ಅವರು ಈ ಕ್ಲಾಸ್‌ಗೆ ಸೇರಿಕೊಂಡರು. ಈ ವೇಳೆ ಧನಶ್ರೀ ಹಾಗೂ ಚಾಹಲ್ ಮಧ್ಯೆ ಪ್ರೀತಿ ಮೂಡಿತು. ಆ ಬಳಿಕ ಕುಟುಂಬದವರ ಒಪ್ಪಿಗೆ ಪಡೆದು ಇಬ್ಬರೂ ವಿವಾಹ ಆದರು. ವಿಚ್ಛೇದನಕ್ಕೆ ಕಾರಣ ರಿವೀಲ್ ಆಗಿಲ್ಲ.

ಕಿವೀಸ್ ವಿರುದ್ಧ ಕೊನೆಗೂ ಗೆದ್ದು ಮಾನ ಉಳಿಸಿಕೊಂಡ ಪಾಕಿಸ್ತಾನ

ಒಂದೆಡೆ ಭಾರತದಲ್ಲಿ ಐಪಿಎಲ್ ಜ್ವರದ ಕಾವು ದಿನೇದಿನೇ ಹೆಚ್ಚುತ್ತದ್ದರೆ, ಮತ್ತೊಂದೆಡೆ ನೇರೆಯ ರಾಷ್ಟ್ರ ಪಾಕಿಸ್ತಾನ, ನ್ಯೂಜಿಲೆಂಡ್ ವಿರುದ್ಧ ಐದು ಪಂದ್ಯಗಳ ಟಿ20 ಸರಣಿಯಲ್ಲಿ ನಿರತವಾಗಿದೆ. ಸರಣಿಯಲ್ಲಿ ಈಗಾಗಲೇ ಮೂರು ಪಂದ್ಯಗಳು ಮುಗಿದಿದ್ದು, ಮೊದಲೆರಡು ಪಂದ್ಯಗಳನ್ನು ಹೀನಾಯವಾಗಿ ಸೋತ್ತಿದ್ದ ಪಾಕಿಸ್ತಾನ, ನಡೆದ ಮೂರನೇ ಪಂದ್ಯದಲ್ಲಿ ಗೆಲುವು ಸಾಧಿಸುವ ಮೂಲಕ ವೈಟ್ ವಾಶ್ ಅವಮಾನದಿಂದ ಪಾರಾಗಿದೆ. ಆಕ್ಲೆಂಡ್‌ನ ಈಡನ್ ಪಾರ್ಕ್‌ನಲ್ಲಿ ನಡೆದ ಮೂರನೇ ಟಿ20 ಪಂದ್ಯದಲ್ಲಿ ಪಾಕಿಸ್ತಾನ ತಂಡವು ನ್ಯೂಜಿಲೆಂಡ್ ತಂಡವನ್ನು 9 ವಿಕೆಟ್‌ಗಳಿಂದ ಸೋಲಿಸಿತು.

44 ಎಸೆತಗಳಲ್ಲಿ ಶತಕ: ಅಚ್ಚರಿಯ ಸಂಗತಿಯೆಂದರೆ ಮೊದಲು ಬ್ಯಾಟ್ ಮಾಡಿದ ನ್ಯೂಜಿಲೆಂಡ್, ಪಾಕಿಸ್ತಾನಕ್ಕೆ 205 ರನ್‌ಗಳ ಬೃಹತ್ ಗುರಿಯನ್ನು ನೀಡಿತು. ಇದರ ಹೊರತಾಗಿಯೂ, ಸಲ್ಮಾನ್ ಆಗಾ ನೇತೃತ್ವದ ಪಾಕ್ ತಂಡವು ಈ ಗುರಿಯನ್ನು ಕೇವಲ 16 ಓವರ್‌ಗಳಲ್ಲಿ ಸಾಧಿಸಿತು. ತಂಡದ ಪರ 22 ವರ್ಷದ ಬ್ಯಾಟ್ಸ್‌ಮನ್ ಹಸನ್ ನವಾಜ್ ಕೇವಲ 44 ಎಸೆತಗಳಲ್ಲಿ ಶತಕ ಬಾರಿಸಿ ತಂಡದ ಗೆಲುವಿನ ರೂವಾರಿ ಎನಿಸಿಕೊಂಡರು.

ಇಂಟ್ರೆಸ್ಟಿಂಗ್ ಆಗಿದ್ದ ಪಂದ್ಯ

ನವಾಜ್ ಮಾತ್ರವಲ್ಲದೆ ವಿಕೆಟ್ ಕೀಪರ್ ಮೊಹಮ್ಮದ್ ಹ್ಯಾರಿಸ್ ಕೂಡ 20 ಎಸೆತಗಳಲ್ಲಿ 41 ರನ್‌ಗಳ ಕಾಣಿಕೆ ನೀಡಿದರೆ, ನಾಯಕ ಸಲ್ಮಾನ್ ಅಗಾ ಕೂಡ 34 ಎಸೆತಗಳಲ್ಲಿ ಔಟಾಗದೆ 51 ರನ್‌ಗಳ ಅದ್ಭುತ ಇನ್ನಿಂಗ್ಸ್ ಆಡಿದರು.

ಹಸನ್ ನವಾಜ್ ಬಿರುಸಿನ ಶತಕ; ನ್ಯೂಜಿಲೆಂಡ್ ವಿರುದ್ಧದ ಪಂದ್ಯದಲ್ಲಿ ಹಸನ್ ನವಾಜ್ 45 ಎಸೆತಗಳಲ್ಲಿ ಅಜೇಯ 105 ರನ್ ಗಳಿಸಿದರು. ಇದರಲ್ಲಿ 7 ಸಿಕ್ಸರ್‌ಗಳು ಮತ್ತು 10 ಬೌಂಡರಿಗಳು ಸೇರಿದ್ದವು. 233.33 ರ ಸ್ಟ್ರೈಕ್ ರೇಟ್‌ನಲ್ಲಿ ಬ್ಯಾಟ್ ಬೀಸಿದ ನವಾಜ್, ತಮ್ಮ ವೃತ್ತಿಜೀವನದ ಮೂರನೇ ಟಿ20 ಪಂದ್ಯದಲ್ಲಿ ಶತಕ ಬಾರಿಸಿದ ಸಾಧನೆ ಮಾಡಿದರು.

ಸಿಎಸ್‌ಕೆ ವಿರುದ್ಧ ಆಡ್ತಾರಾ ಪಾಂಡ್ಯ

ಹೊಸ ನಿಯಮ ಜಾರಿಗೆ

ಬಿಸಿಸಿಐ, 2025 ರ ಐಪಿಎಲ್ ಆರಂಭಕ್ಕೂ ಮುನ್ನ ನಿಧಾನಗತಿಯ ಓವರ್ ರೇಟ್ ನಿಯಮದಲ್ಲಿ ಬದಲಾವಣೆ ಮಾಡಿದೆ. ಮೊದಲು ನಾಯಕರನ್ನು ಪಂದ್ಯದಿಂದ ನಿಷೇಧಿಸಲಾಗುತ್ತಿತ್ತು, ಆದರೆ ಈಗ ದಂಡ ಮತ್ತು ಡಿಮೆರಿಟ್ ಅಂಕಗಳನ್ನು ನೀಡಲಾಗುತ್ತದೆ. ಹಾರ್ದಿಕ್ ಪಾಂಡ್ಯ ಕಳೆದ ಸೀಸನ್ ನಲ್ಲಿ ನಿಯಮ ಉಲ್ಲಂಘಿಸಿದ್ದರಿಂದ ಶಿಕ್ಷೆ ಅನುಭವಿಸಬೇಕಾಗಿದೆ, ಆದರೆ ಹೊಸ ನಿಯಮ ಈ ಸೀಸನ್ ನಿಂದ ಜಾರಿಯಲ್ಲಿದೆ. ಅಂತರರಾಷ್ಟ್ರೀಯ ಕ್ರಿಕೆಟ್ ನಿಯಮಗಳಿಗೆ ಅನುಗುಣವಾಗಿ ಈ ಬದಲಾವಣೆ ಮಾಡಲಾಗಿದೆ. 2025 ರ ಐಪಿಎಲ್ ಸೀಸನ್ ಆರಂಭವಾಗುವ ಮುನ್ನ ಈ ಮಿಲಿಯನ್ ಡಾಲರ್ ಟೂರ್ನಿಯಲ್ಲಿ ಬಿಸಿಸಿಐ ಹಲವು ನಿಯಮಗಳಲ್ಲಿ ಬದಲಾವಣೆ ಮಾಡಿದರೆ, ಮತ್ತೆ ಕೆಲವು ಹೊಸ ನಿಯಮಗಳನ್ನು ಜಾರಿಗೆ ತಂದಿತ್ತು. ಹೀಗೆ ಕೊಂಚ ಬದಲಾವಣೆ ಕಂಡ ನಿಯಮಗಳ ಪೈಕಿ ನಿಧಾನಗತಿಯ ಓವರ್ ರೇಟ್ ನಿಯಮವು ಒಂದಾಗಿದೆ. ವಾಸ್ತವವಾಗಿ ಕಳೆದ ಆವೃತ್ತಿಯಿಂದ ಜಾರಿಗೆ ಬಂದಿದ್ದ ಈ ನಿಯಮದ ಪ್ರಕಾರ, ಒಂದು ತಂಡ ಒಂದು ಆವೃತ್ತಿಯಲ್ಲಿ ಮೂರು ಬಾರಿ ನಿಧಾನಗತಿಯ ಓವರ್ ರೇಟ್ ನಿಯಮವನ್ನು ಮುರಿದರೆ ಆ ತಂಡದ ನಾಯಕನನ್ನು ಒಂದು ಪಂದ್ಯದಿಂದ ನಿಷೇಧಿಸಲಾಗುತ್ತಿತ್ತು. ಆದರೀಗ ಆ ನಿಯಮದಲ್ಲಿ ಬದಲಾವಣೆ ಮಾಡಲಾಗಿದ್ದು, ನಾಯಕರು ತಂಡದಿಂದ ನಿಷೇಧಿಸುವುದನ್ನು ರದ್ದುಗೊಳಿಸಲಾಗಿದೆ. ವಾಸ್ತವವಾಗಿ ಕಳೆದ ಆವೃತ್ತಿಯಲ್ಲಿ ಮುಂಬೈ ಇಂಡಿಯನ್ಸ್ ತಂಡ ಮೂರು ಬಾರಿ ನಿಧಾನಗತಿಯ ಓವರ್ ರೇಟ್ ನಿಯಮವನ್ನು ಮುರಿದಿದ್ದರ ಪರಿಣಾಮವಾಗಿ ಹಾರ್ದಿಕ್ ಪಾಂಡ್ಯರನ್ನು ಒಂದು ಪಂದ್